ಬೆಂಗಳೂರು ಸಂಪುಟ: 16 ಸಂಚಿಕೆ: 36 ಪುಟ: 06 ಶನಿವಾರ 28-12-2024

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



2024ರ ರೌಂಡಪ್

ಕುದಿಯುತ್ತಿದ್ದಾರೆ, ಬೇಯುತ್ತಿದ್ದಾರೆ, ನರಳುತ್ತಿದ್ದಾರೆ

ಕಿಲ್ಲಿಂಗ್ ಫೋಟೋಶೂಟ್!

ಪುಟ 6

## ಸಕಲ ಸರ್ಕಾರಿ ಗೌರವಗಳೊಂದಿಗೆ ಡಾ.ಸಿಂಗ್ ಅಂತ್ಯಕ್ರಿಯೆ

# ಪಂಚಭೂತಗಳಲ್ಲಿ ಲೀನ





ನವದೆಹಲಿ: ಆರ್ಥಿಕ ಕ್ರಾಂತಿಯ ಹರಿಕಾರ, ಅಜಾತ ಶತ್ರು, ಮಾಜಿ ಪ್ರಧಾನಿ ಡಾ. ಮನಮೋಹನ್‌ಸಿಂಗ್ ಅವರ ಅಂತ್ಯಕ್ರಿಯೆ ಇಂದು ನವದೆಹಲಿಯ ನಿಗಮ್‌ಬೋದ್ ಘಾಟ್‌ನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು.

ಮದ್ಯಾಹ್ನದ ವೇಳೆಗೆ ಅವರ ಪುತ್ರಿ ದಮನ್ ಸಿಂಗ್ ಅವರು ಮನಮೋಹನ್ ಸಿಂಗ್ ಅವರ ಪಾರ್ಥೀವ ಶರೀರಕ್ಕೆ ಅಗ್ನಿ ಸ್ಪರ್ಶ ಮಾಡಿದರು.

ಮೂರು ಸೇನಾ ಪಡೆಯ ಗೌರವದೊಂದಿಗೆ 6 ಸುತ್ತು ಗುಂಡು ಹಾರಿಸುವ ಮೂಲಕ ಸಿಂಗ್ ಅವರಿಗೆ ಗೌರವ ಸಲ್ಲಿಸಲಾಯಿತು.

ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರಮೋದಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಮತ್ತು ನೆರೆ ದೇಶಗಳ ಗಣ್ಯರ ಸಮ್ಮುಖದಲ್ಲಿ ಅಂತ್ಯ ಸಂಸ್ಕಾರ ನೆರವೇರಿತು.

ಸಿಖ್ ಸಮುದಾಯದ ಸಂಪ್ರದಾಯದಂತೆ ಅಂತ್ಯಕ್ರಿಯೆ ನಡೆದು ಸಿಂಗ್ ಅವರ ಪಂಚಭೂತಗಳಲ್ಲಿ ಲೀನರಾದರು.

ಗುರುವಾರ ನಿಧನರಾದ ಮನಮೋಹನ್ ಸಿಂಗ್ ಅವರ ಅಂತ್ಯಕ್ರಿಯೆಗೆ ದೇಶ-ವಿದೇಶಗಳಿಂದಲೂ ಗಣ್ಯರು ಆಗಮಿಸಿ ಅಂತಿಮ ನಮನ ಸಲ್ಲಿಸಿದರು.

ಸಿಂಗ್ ಅವರು ಧರ್ಮಪತ್ನಿ ಕೌರ್ ಮತ್ತು ಮೂವರು ಪತ್ನಿಯರನ್ನು ಆಗಲಿದ್ದು, ಅವರ ಹಿರಿಯ ಪುತ್ರಿ ದಮನ್ ಸಿಂಗ್ ವಿಧಿ ವಿಧಾನಗಳನ್ನು ನೆರವೇರಿಸಿದರು.

ಸಿಖ್ ಧರ್ಮದ ಧರ್ಮ ಗುರುಗಳ ಮಂತ್ರ ಪಠಣದೊಂದಿಗೆ ವಿಧಿವಿಧಾನಗಳನ್ನು ನೆರವೇರಿಸಿದರು.ಈ ವೇಳೆ ನೆರೆದಿದ್ದ ಜನಸ್ತೋಮ ಸಿಂಗ್ ಹಮರ್ ರಹೇ, ಸಿಂಗ್ ಹಮರ್ ರಹೇ ಘೋಷಣೆಗಳನ್ನು ಕೂಗಿದರು.

ಅವರ ಅಂತ್ಯಕ್ರಿಯೆಗೆ ಶ್ರೀಗಂಧದ, ತುಪ್ಪ ಬಳಸಲಾಯಿತು. ಬೆಳಗ್ಗೆ 8 ಗಂಟೆಗೆ ಮೋತಿಲಾಲ್ ರಸ್ತೆಯಲ್ಲಿರುವ ಮನಮೋಹನ್ ಸಿಂಗ್ ಅವರ ನಿವಾಸದಿಂದ ಪಾರ್ಥಿವ ಶರೀರವನ್ನು ಎಐಸಿಸಿ ಕೇಂದ್ರ ಕಚೇರಿಗೆ ಕರೆದೊಯ್ಯಲಾಯಿತು. ನಂತರ ಅಲ್ಲಿ 9.30ರವರೆಗೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಜನರ ಭೇಟಿಗಾಗಿ ಇರಿಸಲಾಗಿತ್ತು. ಬಳಿಕ ಅಲ್ಲಿಂದ ಮನಮೋಹನ್ ಸಿಂಗ್ ಅವರ ಪಾರ್ಥಿವ ಶರೀರದ ಅಂತಿಮ ಯಾತ್ರೆ ಆರಂಭವಾಯಿತು.



## ಪ್ರತ್ಯೇಕ ಅಪಘಾತ: ನಾಲ್ವರು ಸಾವು



**ಮಂಗಳೂರು:** ಕಾರೊಂದು ಕಂದಕಕ್ಕೆ ಬಿದ್ದು ಮೂವರು ಸಾವನ್ನಪ್ಪಿರುವ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಪರ್ಲಡ್ಕದಲ್ಲಿ ನಡೆದಿದೆ.

ಅಣ್ಣು ನಾಯ್ಕ್, ಚಿದಾನಂದ ಮತ್ತು ರಮೇಶ್ ನಾಯ್ಕ್ ಮೃತಪಟ್ಟ ದುರ್ದೈವಿಗಳು. ಮೃತರೆಲ್ಲರೂ ಸುಳ್ಯ ತಾಲ್ಲೂಕಿನ ಜಟ್ಟಿಪಳ್ಳಿ ನಿವಾಸಿಗಲು ಎಂದು ತಿಳಿದುಬಂದಿದೆ.

ಚಾಲಕನ ನಿಯಂತ್ರಣ ತಪ್ಪಿ ಕಂದಕಕ್ಕೆ ಕಾರು ಬಿದ್ದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪುತ್ತೂರು ಸಂಚಾರಿ ಪೊಲೀಸರು ಸ್ಥಳಕ್ಕೆ ಬೇಟಿ ನೀಡಿ ಪರಿಶೀಲನೆ ನಡೆಸಿದ್ದು, ಸುಳ್ಯದಿಂದ ಮೂವರು ಪುತ್ತೂರಿನ ಪುಣಚಕ್ಕೆ ಹೊರಟಿದ್ದು ಬೆಳಗಿನ ಜಾವ 4.20ರ ಸುಮಾರಿಗೆ ಈ ಘಟನೆ ಸಂಭವಿಸಿದ್ದು, ನಿದ್ರೆಯ ಮಂಪರೇ ಇದಕ್ಕೆ ಕಾರಣ ಎಂದು ಹೇಳಲಾಗಿದೆ.

ಈ ಸಂಬಂಧ ಪುತ್ತೂರು ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದೆಡೆ ಸ್ವಾಗತ ನಾಮಫಲಕಕ್ಕೆ ಖಾಸಗಿ ಬಸ್‌ವೊಂದು ಡಿಕ್ಕಿ ಹೊಡೆದು ಬಸ್ ಚಾಲಕ ಸ್ಥಳದಲ್ಲೇ ಪುಟ 2

## ಪಂತ್ ಮೂರ್ಖ

ಮೆಲ್ಬೋರ್ನ್: ಕ್ರಿಕೆಟ್ ದಿಗ್ಗಜ ಸುನೀಲ್ ಗಾವಾಸ್ಕರ್ ಅವರು ಭಾರತೀಯ ಕ್ರಿಕೆಟ್ ತಂಡದ ವಿಕೇಟ್ ಕೀಪರ್ ರಿಷಬ್ ಪಂತ್ ಅವರನ್ನು ಮೂರ್ಖ ಎಂದು ಜರಿದಿದ್ದಾರೆ.



ಆಸ್ಟ್ರೇಲಿಯಾ ವಿರುದ್ಧದ 4 ನೇ ಟೆಸ್ಟ್ ಪಂದ್ಯದ 3 ನೇ ದಿನದಂದು ವಿಕೆಟ್ ಕೀಪರ್ ಕಮ್‌ಬ್ಯಾಟರ್ ರಿಷಬ್ ಪಂತ್ ಕೇವಲ 28 ರನ್ ಗಳಿಸಿ ಔಟಾದಾಗ ಕಾಮೆಂಟೇಟರ್ ಆಗಿದ್ದ ಗಾವಾಸ್ಕರ್ ಅವರು ಪಂತ್ ಅವರನ್ನು ಮೂರ್ಖತನದ ಪರಮಾವಧಿ ಆಟ ಎಂದಿದ್ದಾರೆ.

ಭಾರತವು ತೀವ್ರ ಸಂಕಷ್ಟದಲ್ಲಿರುವಾಗ ಸ್ಕಾಟ್ ಬೋಲ್ಯಾಂಡ್ ಅವರ ಬೌಲಿಂಗ್‌ನಲ್ಲಿ ಅಸಾಂಪ್ರದಾಯಿಕ ಸ್ಕೂಪ್ ಶಾಟ್ ಅನ್ನು ಆಡುವ ಪಂತ್ ಅವರ ನಿರ್ಧಾರವು ಹೆಚ್ಚಿನ ಒತ್ತಡದ ಸಂದರ್ಭಗಳಲ್ಲಿ ಅವರ ಮನೋಧರ್ಮ ಮತ್ತು ವಿಧಾನ ಸರಿಯಲ್ಲ ಪುಟ 2

## ನಮ್ಮ ರಾಷ್ಟ್ರೀಯ ಜೀವನದಲ್ಲಿ ಎಂದಿಗೂ ತುಂಬಲಾಗದ ನಷ್ಟ

ನವದೆಹಲಿ: ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನಕ್ಕೆ ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಮತ್ತು ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಸಂತಾಪ ಸೂಚಿಸಿದ್ದಾರೆ.

'ಬುದ್ಧಿವಂತಿಕೆ, ಶ್ರೇಷ್ಠತೆ ಮತ್ತು ನಮ್ರತೆಯ ಸಂಕೇತ' ಎಂದು ಬಣ್ಣಿಸಿದ ಅವರು, ತಮಗೆ ಸ್ನೇಹಿತ, ತತ್ವಜ್ಞಾನಿ ಮತ್ತು ಮಾರ್ಗದರ್ಶಕ ಎಂದು ಹೇಳಿದ್ದಾರೆ. ಸಿಂಗ್ ಸಾವು 'ನಮ್ಮ ರಾಷ್ಟ್ರೀಯ ಜೀವನದಲ್ಲಿ ಎಂದಿಗೂ ತುಂಬಲಾಗದ ನಷ್ಟ' ಎಂದು ಹೇಳಿದರು.



ಡಾ.ಮನಮೋಹನ್ ಸಿಂಗ್ ಅವರ ನಿಧನದಿಂದ ನಾವು ನಮ್ಮ ದೇಶಕ್ಕೆ ಹೃದಯ ಮತ್ತು ಮನಸ್ಸಿನಿಂದ ಸೇವೆ ಸಲ್ಲಿಸಿದ ಬುದ್ಧಿವಂತಿಕೆ, ಉದಾತ್ತತೆ ಮತ್ತು ನಮ್ರತೆಯ ಪ್ರತಿರೂಪವಾದ ನಾಯಕನನ್ನು ಕಳೆದುಕೊಂಡಿದ್ದೇವೆ. ಕಾಂಗ್ರೆಸ್ ಗೆ ಅಚ್ಚುಮೆಚ್ಚಿನ ಮಾರ್ಗದರ್ಶಿ, ಅವರ ಸಹಾನುಭೂತಿ ಮತ್ತು ದೃಷ್ಟಿ ಲಕ್ಷಾಂತರ ಭಾರತೀಯರ ಜೀವನವನ್ನು ಪರಿವರ್ತಿಸಿತು ಮತ್ತು ಸಶಕ್ತಗೊಳಿಸಿತು ಎಂದು ಸೋನಿಯಾ ಗಾಂಧಿ ಹೇಳಿದ್ದಾರೆ.

ಅರ್ಥಶಾಸ್ತ್ರಜ್ಞ-ರಾಜಕಾರಣಿಯಾಗಿದ್ದ ಅವರ ನಿಧನವು ನನಗೆ ಆಳವಾದ ವೈಯಕ್ತಿಕ ನಷ್ಟವಾಗಿದೆ. 'ಮನಮೋಹನ್ ಸಿಂಗ್ ಅವರ ನಿರ್ಮಲ ಹೃದಯ ಮತ್ತು ಮನಸ್ಸಿನಿಂದಾಗಿ ಭಾರತದ ಜನರು ಆಳವಾಗಿ ಪ್ರೀತಿಸುತ್ತಿದ್ದರು. ಅವರ ಸಲಹೆ, ಬುದ್ಧಿವಂತ ಮಾರ್ಗದರ್ಶನ ಮತ್ತು ಆಲೋಚನೆಗಳು ನಮ್ಮ ದೇಶದ ರಾಜಕೀಯ ವರ್ಣಪಟಲದ ಎಲ್ಲಾ ಪುಟ 2

## ಆರ್ಥಿಕ ಸುಧಾರಣೆಗಳು ಅಳಿಸಲಾಗದ ಹೆಗ್ಗುರುತಾಗಿವೆ

ನವದೆಹಲಿ: ಭಾರತದ ಆರ್ಥಿಕ ಸುಧಾರಣೆಗಳ ಶಿಲ್ಪಿಯಾಗಿ ಅವರ ಕೊಡುಗೆಗಳು ಅಳಿಸಲಾಗದ ಗುರುತು ಮೂಡಿಸಿವೆ" ಎಂದು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ)ನ ಹೊಸ ಗವರ್ನರ್ ಸಂಜಯ್ ಮಲ್ಹೋತ್ರಾ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.



ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ)ನ ಹೊಸ ಗವರ್ನರ್ ಸಂಜಯ್ ಮಲ್ಹೋತ್ರಾ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ಪಾರ್ಥಿವ ಶರೀರಕ್ಕೆ ಗೌರವ ಸಲ್ಲಿಸಿ ಮಾತನಾಡಿದ ಅವರು, ಭಾರತದ ಆರ್ಥಿಕ ಸುಧಾರಣೆಗಳ ಮೇಲೆ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಬೀರಿದ ಪ್ರಭಾವವನ್ನು ನೆನಪಿಸಿಕೊಂಡ ಮಲ್ಹೋತ್ರಾ, "ದೂರದೃಷ್ಟಿಯ ಅರ್ಥಶಾಸ್ತ್ರಜ್ಞ ಮತ್ತು ಮಾಜಿ ಆರ್‌ಬಿಐ ಗವರ್ನರ್ ಡಾ. ಮನಮೋಹನ್ ಸಿಂಗ್ ಅವರ ನಿಧನದಿಂದ ನಾನು ತೀವ್ರ ದುಃಖಿತನಾಗಿದ್ದೇನೆ. ಪುಟ 2

## ಅಕ್ರಮ ಹಣ: ಕೆಟಿಆರ್‌ಗೆ ಇಡಿ ಸಮನ್ಸ್

ಹೈದರಾಬಾದ್: 2023ರ ಫಾರ್ಮುಲಾ ಇ-ರೇಸ್‌ನಲ್ಲಿನ ಅಕ್ರಮ ಹಣ ಪಾವತಿ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ವಿವರಣೆ ಪಡೆಯುವ ಸಂಬಂಧ ಜಾರಿ ನಿರ್ದೇಶನಾಲಯ, ಬಿಆರ್‌ಎಸ್ ನಾಯಕ ಕೆಟಿ ರಾಮ್ ರಾವ್ ಸೇರಿದಂತೆ ಅನೇಕರಿಗೆ ಸಮನ್ಸ್ ಜಾರಿ ಮಾಡಿದೆ.



ಮುಂದಿನ ತಿಂಗಳು ಅಂದರೆ ಜನವರಿ 7ಕ್ಕೆ ವಿಚಾರಣೆಗೆ ಹಾಜರಾಗುವಂತೆ ತಿಳಿಸಲಾಗಿದೆ. ತೆಲಂಗಾಣ ಪೊಲೀಸ್ ಭ್ರಷ್ಟಚಾರ ವಿರೋಧಿ ಬ್ಯೂರೋ ದೂರನ್ನು ಗಮನದಲ್ಲಿರಿಸಿಕೊಂಡು ಪಿಎಂಎಲ್‌ಎನ ವಿವಿಧ ಸೆಕ್ಷನ್‌ಗಳ ಅಡಿ ಕಳೆದ ವಾರ ಇಡಿ ಎಫ್‌ಐಆರ್ ದಾಖಲಿಸಿದೆ.

ಈ ಸಂಬಂಧ ಜನವರಿ 7ರಂದು ಬಿಆರ್‌ಎಸ್ ಕಾರ್ಯಕಾರಿ ಅಧ್ಯಕ್ಷ ಕೆಟಿಆರ್ ಇಡಿ ಮುಂದೆ ಹಾಜರಾಗಿ ಹೇಳಿಕೆ ದಾಖಲಿಸುವಂತೆ ಸಮನ್ಸ್ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಇವರ ಜೊತೆಗೆ ಹಿರಿಯ ಐಎಎಸ್ ಅಧಿಕಾರಿ ಅರವಿಂದ್ ಕುಮಾರ್ ಮತ್ತು ಎಚ್‌ಎಂಡಿಎ ನಿವೃತ್ತ ಮಾಜಿ ಇಂಜಿನಿಯರ್ ಬಿಎಲ್‌ಎನ್ ರೆಡ್ಡಿಗೆ ಕ್ರಮವಾಗಿ ಜನವರಿ 2 ಮತ್ತು 3ರಂದು ಇಡಿ ಮುಂದೆ ಹಾಜರಾಗುವಂತೆ ಸಮನ್ಸ್ ನೀಡಲಾಗಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ.

2023ರಲ್ಲಿ ಬಿಆರ್‌ಎಸ್ ಆಡಳಿತದ ಅವಧಿಯಲ್ಲಿ ಹೈದರಾಬಾದ್‌ನಲ್ಲಿ ಫಾರ್ಮುಲಾ ಇ ರೇಸ್ ನಡೆಸಲು ಅನುಮತಿಯಿಲ್ಲದೇ ವಿದೇಶಿ ಕರೆನ್ಸಿ ಮತ್ತು ಸುಮಾರು 55 ಕೋಟಿ ರೂ.ಗಳ ಪಾವತಿ ಸಂಬಂಧಿಸಿದಂತೆ ಅಕ್ರಮ ನಡೆದಿದೆ ಎಂದು ಆರೋಪಿಸಲಾಗಿದೆ, ಈ ಕುರಿತು ತನಿಖೆ ನಡೆಯುತ್ತಿದೆ.

ಇದರ ಜೊತೆಗೆ ಸಂಸ್ಥೆ ವಿದೇಶಿ ಹಣ ವಿನಿಮಯ ಪುಟ 2

## ನಿತೀಶ್‌ರೆಡ್ಡಿ ಭರ್ಜರಿ ಶತಕ ಭಾರತದ ದಿಟ್ಟ ಉತ್ತರ

**ಮೆಲ್ಬೋರ್ನ್:** ಮೆಲ್ಬೋರ್ನ್‌ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ 4ನೇ ಟೆಸ್ಟ್ ಪಂದ್ಯದಲ್ಲಿ ನಿತೀಶ್‌ಕುಮಾರ್ ರೆಡ್ಡಿ ಭರ್ಜರಿ ಶತಕ ಸಿಡಿಸಿ ಆಸೀಸ್ ಬೌಲಿಂಗ್ ದಾಳಿಗೆ ದಿಟ್ಟ ಉತ್ತರ ನೀಡಿದ್ದಾರೆ.



ದಿನದ ಆಟದ ಅಂತ್ಯಕ್ಕೆ ಭಾರತ 358 ರನ್‌ಗಳಿಗೆ 9 ವಿಕೆಟ್ ಕಳೆದುಕೊಂಡಿದ್ದು, ಇನ್ನೂ 116 ರನ್‌ಗಳ ಹಿನ್ನಡೆ ಅನುಭವಿಸಿದೆ.

ನಿನ್ನೆ 2ನೇ ದಿನದ ಆಟ ಅಂತ್ಯಗೊಂಡಾಗ ಭಾರತ 16ರನ್‌ಗಳಿಗೆ 5 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು. ಇಂದು 3ನೇ ದಿನದ ಆಟ ಮುಂದುವರೆಸಿದ ಭಾರತ, 17 ರನ್ ಗಳಿಸಿ ರವೀಂದ್ರಜಡೇಜಾ ನಿರ್ಗಮಿಸಿದರು. ಈ ವೇಳೆ ಒತ್ತಡಕ್ಕೆ ಸಿಲುಕಿದ್ದ ಭಾರತ ತಂಡಕ್ಕೆ ನಿತೀಶ್‌ರೆಡ್ಡಿ ಮತ್ತು ವಾಷಿಂಗ್ಟನ್ ಸುಂದರ್ ತಂಡಕ್ಕೆ ಆಸರೆಯಾಗಿ ಆಸೀಸ್ ಬೌಲಿಂಗ್ ದಾಳಿಗೆ ದಿಟ್ಟ ಉತ್ತರ ನೀಡಿದರು.

ಒಂದು ಹಂತದಲ್ಲಿ 221 ರನ್‌ಗಳಿಗೆ 7 ವಿಕೆಟ್ ಕಳೆದುಕೊಂಡು ಸಂಕಷ್ಟದಲ್ಲಿತ್ತು. ಈ ವೇಳೆ ನಿತೀಶ್‌ಕುಮಾರ್ ರೆಡ್ಡಿ ಕಾಂಗರೂಗಳ ಪುಟ 2




ದೆಹಲಿಯ ಎಐಸಿಸಿ ಕಚೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಡಾ. ಮನಮೋಹನ ಸಿಂಗ್ ಪಾರ್ಥೀವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು.



ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ನವದೆಹಲಿಯಲ್ಲಿ ಇಂದು ಡಾ.ಮನಮೋಹನ್ ಸಿಂಗ್ ಅವರ ಅಂತಿಮ ದರ್ಶನ ಪಡೆದು ನಮನ ಸಲ್ಲಿಸಿದರು.

# ಹೊಸ ವರ್ಷಾಚರಣೆ ನಗರದಲ್ಲಿ ಕಟ್ಟೆಚ್ಚರ

ಬೆಂಗಳೂರು: ಹೊಸ ವರ್ಷದ ಸಂಭ್ರಮಾಚರಣೆ ವೇಳೆ ನಗರದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಕಟ್ಟೆಚ್ಚರ ವಹಿಸಿರುವ ನಗರ ಪೊಲೀಸರು ಮಾದಕ ವಸ್ತುಗಳ ಜಾಲದ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ.

ಈಗಾಗಲೇ ಮೂವರು ವಿದೇಶಿ ಡ್ರಗ್ ಪೆಡ್ಲರ್ ಸೇರಿದಂತೆ 70 ಮಂದಿ ಡ್ರಗ್ಸ್ ಪೆಡ್ಲರ್‌ಗಳನ್ನು ಬಂಧಿಸಿ ಎರಡೂವರೆ ಕೋಟಿಗೂ ಅಧಿಕ ಮೌಲ್ಯದ ಡ್ರಗ್ಸ್ ಸೇರಿದಂತೆ, ವಿವಿಧ ಮಾದಕ ವಸ್ತು ಜಪ್ತಿ ಮಾಡಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರೆಸ್ಟೋರೆಂಟ್, ಹೋಟೆಲ್ ಮತ್ತು ಪಬ್‌ಗಳನ್ನು ಹೊಸ ವರ್ಷಾಚರಣೆ ದಿನ ಡಿಸೆಂಬರ್ 31 ರಂದು ರಾತ್ರಿ 1 ಗಂಟೆಯ ಒಳಗಾಗಿ ಬಂದ್ ಮಾಡಬೇಕೆಂದು ಸೂಚನೆ ನೀಡಲಾಗಿದೆ.

ಅಂದು, ನಶೆಯಲ್ಲಿ ಮೇಲ್ಸೇತುವೆಗಳ ಮೇಲೆ ರಂಪಾಟ ಮಾಡುವ, ಅಹಿತಕರ ಘಟನೆಗಳು

ನಡೆಯುವ ಸಾಧ್ಯತೆ ಇರುತ್ತದೆ. ಹೀಗಾಗಿ, ವಿಮಾನ ನಿಲ್ದಾಣಕ್ಕೆ ಸಂಪರ್ಕಿಸುವ ಮೇಲ್ಸೇತುವೆ ಸೇರಿದಂತೆ ನಗರದ ಎಲ್ಲಾ ಮೇಲ್ಸೇತುವೆ ರಸ್ತೆಗಳನ್ನು ಬಂದ್ ಮಾಡಲಾಗುತ್ತದೆ ಎಂದರು.



ನಗರದ ಹೊರ ವಲಯದಲ್ಲಿ ನಡೆಯುವ ರೇವ್ ಪಾರ್ಟಿ ಸೇರಿದಂತೆ ಎಲ್ಲ ಪಾರ್ಟಿಗಳ ಮೇಲೆ ಕಣ್ಣಿಡಲಾಗಿದೆ. ಇನ್ನು, ನಗರದಲ್ಲಿ ಎಂಜಿ ರೋಡ್, ಬ್ರಿಗೇಡ್ ರೋಡ್, ಕೋರಮಂಗಲ, ಇಂದಿರಾನಗರ ಸೇರಿ ಎಲ್ಲಿ ಹೆಚ್ಚು ಜನರು ಸೇರುತ್ತಾರೆ ಅಲ್ಲಿ ಸೇಫ್ಟಿ ಐಲ್ಯಾಂಡ್, ಸಿಸಿಟಿವಿ, ಡ್ರೋಣ್ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಅಲ್ಲದೇ, ಶ್ವಾನದಳದಿಂದ ತಪಾಸಣೆ ಮಾಡಲಾಗುತ್ತೆ. ಹೆಚ್ಚಿನ ಲೈಟಿಂಗ್ ವ್ಯವಸ್ಥೆ, ಬ್ಯಾರಿಕೇಡ್ ವ್ಯವಸ್ಥೆ, ಅಗ್ನಿಶಾಮಕ ದಳ ವಾಹನ ಇರುತ್ತದೆ ಎಂದು ತಿಳಿಸಿದರು.

ಬ್ರಿಗೇಡ್, ಎಂಜಿ ರೋಡ್‌ನಲ್ಲಿ ಏಕಮುಖ ಸಂಚಾರವಿರುತ್ತದೆ. ಡಿಸೆಂಬರ್ 31ರಂದು ರಾತ್ರಿ 11 ಗಂಟೆಯಿಂದ ಎಂಜಿ ರಸ್ತೆ ಮೆಟ್ರೋ ನಿಲ್ದಾಣದ ಪ್ರವೇಶ ದ್ವಾರಗಳನ್ನು ಮುಚ್ಚಲಾಗುತ್ತದೆ. ಹತ್ತಿರದ ಟ್ರಿನಿಟಿ ಮತ್ತು ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣಗಳಲ್ಲಿ ರೈಲುಗಳು ನಿಲ್ಲುತ್ತವೆ ಎಂದು ಮಾಹಿತಿ ನೀಡಿದರು.

ಬೆಂಗಳೂರು ಸೈಬರ್ ವಂಚನೆಗೆ ಒಳಗಾಗಿದ್ದರೆ ಟೋಲ್ ಫ್ರೀ ನಂಬರ್ 1930ಗೆ ಕರೆ ಮಾಡಿ ಮಾಹಿತಿ ನೀಡಿ. ಅದನ್ನ ಹೊರತುಪಡಿಸಿ ಪೊಲೀಸ್ ಸಿಬ್ಬಂದಿಯ ವೈಯಕ್ತಿಕ ನಂಬರ್‌ಗೆ ಕರೆ ಮಾಡಬೇಡಿ. ಏಕೆಂದರೆ, ಅಧಿಕಾರಿಗಳು ಬೇರೆ ಕೆಲಸದಲ್ಲಿ ನಿರತರಾಗಿದ್ದರೆ ಕೂಡಲೇ ಪ್ರತಿಕ್ರಿಯೆ ನೀಡಲು ಸಾಧ್ಯವಾಗುವುದಿಲ್ಲ. ಹೀಗಾಗಿ, 1930 ಕರೆ ಮಾಡಿ ಮಾಹಿತಿ ನೀಡಿ ಎಂದು ಮನವಿ ಮಾಡಿಕೊಂಡರು.

ಚಿನ್ನದ ಅಂಗಡಿ ಮಾಲೀಕರಿಗೆ ವಂಚನೆ ಮಾಡಿದ ಪ್ರಕರಣ ಸಂಬಂಧ ಎರಡು ಕೇಸ್ ದಾಖಲಾಗಿವೆ. ಎರಡೂ ವಂಚನೆ ಪ್ರಕರಣದ ಬಗ್ಗೆ ಪ್ರತ್ಯೇಕವಾಗಿ ತನಿಖೆ ನಡೆಸಲಾಗುತ್ತಿದೆ. ಆರೋಪಿಗಳ ವಿರುದ್ಧ ದಾಖಲಾಗಿರುವ ಸೆಕ್ಷನ್‌ಗಳ ಆಧಾರದಲ್ಲಿ, ಆರೋಪಿಗಳ ಸಹಕಾರದ ಅನ್ವಯ ಬಂಧನ ಮಾಡಲಾಗುವುದು.

ಚಂದ್ರಾಲೇಔಟ್ ಠಾಣೆ ಪ್ರಕರಣದ ಆರೋಪಿಗಳಿಗೆ ನೋಟಿಸ್ ನೀಡಲಾಗಿದೆ. ಠಾಣೆಗೆ ಕರೆಸಿ ವಿಚಾರಣೆ ನಡೆಸುತ್ತೇವೆ ಎಂದರು.

# ನಟ ಶಿವರಾಜ್ ಕುಮಾರ್ ಆರೋಗ್ಯ ಸುಧಾರಣೆ

ಮೈಸೂರು: ನಟ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಅವರ ಕ್ಯಾನ್ಸರ್ ಶಸ್ತ್ರಚಿಕಿತ್ಸೆ ಅಮೆರಿಕದಲ್ಲಿ ಯಶಸ್ವಿಯಾಗಿ ನಡೆದಿದ್ದು ಅವರ ಆರೋಗ್ಯ ಸುಧಾರಿಸಿದೆ ಎಂಬ ಮಾಹಿತಿ ಲಭ್ಯವಾಗಿದೆ.

ಈ ಕುರಿತು ಮೈಸೂರಿನಲ್ಲಿ ಮಾತನಾಡಿ ಮಾಹಿತಿ ನೀಡಿರುವ ನಟ ಶಿವರಾಜ್ ಕುಮಾರ್ ಅವರ ಬಾಮೈದ ಗೋವಿಂದರಾಜ್, ಶಿವಣ್ಣನ ಆರೋಗ್ಯ ಚೆನ್ನಾಗಿದೆ. ನಾವೇ ಕರೆ ಮಾಡಿ ಮಾತನಾಡಿದ್ದೇವೆ.

ಅಪರೇಷನ್ ಯಶಸ್ವಿಯಾಗಿದೆ. ಈಗ



ಅಮೇರಿಕಾದಲ್ಲಿ ರೆಸ್ಟ್ ಮಾಡುತ್ತಿದ್ದಾರೆ. ಒಂದು ತಿಂಗಳ ವಿಶ್ರಾಂತಿ ಬಳಿಕ ಭಾರತಕ್ಕೆ ಬರುತ್ತಾರೆ. ಶಿವರಾಜ್ ಕುಮಾರ್ ಹುಷಾರಾಗಿದ್ದಾರೆ ಯಾವುದೇ ಆತಂಕವಿಲ್ಲ ಎಂದಿದ್ದಾರೆ.

ನಟ ಶಿವಣ್ಣ ತಂಗಿ ಲಕ್ಷ್ಮೀ ಮಾತನಾಡಿ, ನಮಗೆಮೊದಲು ಆತಂಕವಿತ್ತು. ಶಿವಣ್ಣ ಆರೋಗ್ಯ ಚೆನ್ನಾಗಿತ್ತು. ಇದ್ದಕ್ಕಿದ್ದಂತೆ ಅನಾರೋಗ್ಯ ವಿಚಾರ ತಿಳಿದಾಗ ಬೇಸರವಾಯಿತು.

ಎಲ್ಲರಿಗಿಂತ ಲವಲವಕೆಯಿಂದ ಇದ್ದಿದ್ದು ಶಿವಣ್ಣ. ನನ್ನನ್ನ ಶಿವಣ್ಣ ಅಕ್ಕ ಅಂತಾರೆ. ಆದರೆ ನಾನು ಶಿವಣ್ಣನ ತಂಗಿ. ದೇವರ ದಯೆ ಎಲ್ಲರ ಆಶೀರ್ವಾದ ಶಿವಣ್ಣ ಆರೋಗ್ಯ ಸುಧಾರಣೆ ಆಗಿದೆ. ಭಾರತಕ್ಕೆ ಬಂದ ಬಳಿಕ ಮೈಸೂರಿಗೆ ಬಂದು ಯೋಗಾನರಸಿಂಹಸ್ವಾಮಿ ದರ್ಶನ ಪಡೆಯುತ್ತಾರೆ ಎಂದು ತಿಳಿಸಿದರು.

## ಅಕ್ರಮ ಆಸ್ತಿ ನೋಂದಣಿ; ಅಮಾನತು

**ಬೆಂಗಳೂರು:** ಆಸ್ತಿ ನೋಂದಣಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ನಿಗದಿಪಡಿಸಿದ ನಿಯಮಗಳನ್ನು ಪಾಲಿಸದ ಕಾರಣಕ್ಕಾಗಿ ಬೆಂಗಳೂರಿನ ಮುದ್ರಾಂಕ ಮತ್ತು ನೋಂದಣಿ ಇಲಾಖೆಯ ಇಬ್ಬರು ಸಬ್ ರಿಜಿಸ್ಟ್ರಾರ್‌ಗಳನ್ನು ಅಮಾನತುಗೊಳಿಸಲಾಗಿದೆ.

ಇವರಿಬ್ಬರು ಬೇರೆ ಬೇರೆ ಕಚೇರಿಗಳಲ್ಲಿ ಕಳೆದ ಎರಡು ತಿಂಗಳಿನಿಂದ ಸರ್ಕಾರದಿಂದ ನಿಷೇಧಿತ ಭೌತಿಕ ಖಾತಾಗಳನ್ನು ಬಳಸಿಕೊಂಡು ನೋಂದಣಿಯನ್ನು ಮುಂದುವರೆಸಿದರು. ಅಕ್ರಮ ದಾಖಲಾತಿಗಾಗಿ ನಾಗವಾರದ ಕಾಚರಕನಹಳ್ಳಿ ಕಚೇರಿಯ ಸಬ್ ರಿಜಿಸ್ಟ್ರಾರ್ ಕುಮಾರಿ ರೂಪ ಮತ್ತು ಬೆಂಗಳೂರು ಉತ್ತರ ತಾಲೂಕಿನ ಹೆಸರಘಟ್ಟದ ಹಿರಿಯ ಸಬ್ ರಿಜಿಸ್ಟ್ರಾರ್ ಎನ್ ಮಂಜುನಾಥ್ ಅವರನ್ನು ಡಿಸೆಂಬರ್ 24 ರಂದು ಅಮಾನತುಗೊಳಿಸಲಾಗಿದೆ ಎಂದು ನೋಂದಣಿ ಇಲಾಖೆಯ ಮೂಲಗಳು ತಿಳಿಸಿವೆ.

ರಾಜ್ಯಾದ್ಯಂತ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು, ಮುಖ್ಯ ಕಾರ್ಯದರ್ಶಿ ಅಕ್ಟೋಬರ್ 7, 2024 ರಂದು ಯಾವುದೇ ಆಸ್ತಿ ನೋಂದಣಿಯನ್ನು ಪೂರ್ಣಗೊಳಿಸಲು ಇ-ಖಾತಾ ಪ್ರಮಾಣಪತ್ರಗಳನ್ನು ಮಾನ್ಯ ದಾಖಲೆಯಾಗಿ ಬಳಸಬೇಕೆಂದು ಕಡ್ಡಾಯಗೊಳಿಸಿ ಆದೇಶ ಹೊರಡಿಸಿದ್ದರು.

# ಜ.7ರೊಳಗೆ ಕನ್ನಡ್ಡದಲ್ಲಿ ನಾಮಫಲಕಗಳು ಅಳವಡಿಕೆಯಾಗಬೇಕು

**ಚಿಕ್ಕಬಳ್ಳಾಪುರ:** ಜಿಲ್ಲೆಯ ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಎಲ್ಲಾ ರೀತಿಯ ವ್ಯಾಪಾರಿ ಮಳಿಗೆಗಳು, ಸಂಘ ಸಂಸ್ಥೆಗಳು, ಖಾಸಗಿ ಶಾಲಾ ಕಾಲೇಜುಗಳ ನಾಮಫಲಕಗಳಲ್ಲಿ ಶೇ 60 ರಷ್ಟು ಪ್ರಮಾಣದಲ್ಲಿ ಕನ್ನಡ ಭಾಷೆಯಲ್ಲಿ ಬರೆದಿರಬೇಕು. ಈ ವರೆಗೂ ಯಾರಾದ್ರೂ ಈ ರೀತಿ ಫಲಕ ಅಳವಡಿಸದಿದ್ದಲ್ಲಿ ಜನವರಿ 7 ರೊಳಗೆ ಕಡ್ಡಾಯವಾಗಿ ಅಳವಡಿಸಬೇಕು ಈ ಕುರಿತು ಪರಿಶೀಲಿಸಿ ನಿಗಾ ವಹಿಸಲು ಜಾರಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ "ಕನ್ನಡ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರ ಅಥವಾ ಸ್ಥಳೀಯ ಅಧಿಕಾರಿಗಳ ಅನುಮೋದನೆ ಮತ್ತು ಅನುಮೋದನೆಯೊಂದಿಗೆ ಕಾರ್ಯನಿರ್ವಹಿಸುವ ವಾಣಿಜ್ಯ, ಕೈಗಾರಿಕೆಗಳು ಮತ್ತು ವ್ಯಾಪಾರ ಸಂಸ್ಥೆಗಳು, ಟ್ರಸ್ಟುಳು, ಸಲಹಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನಾ ಕೇಂದ್ರಗಳು ಮತ್ತು ಹೋಟೆಲ್‌ಗಳು ಇತ್ಯಾದಿಗಳ ನಾಮಫಲಕಗಳು ತಮ್ಮ ಹೆಸರಿನ ಫಲಕವನ್ನು ಶೇ 60ರಷ್ಟು ಪ್ರಮಾಣ ಕನ್ನಡದಲ್ಲಿ ಪ್ರದರ್ಶಿಸಿರುವ ಬಗ್ಗೆ ಅಧಿಕಾರಿಗಳು ಭೇಟಿ ನೀಡಿ ವರದಿ ನೀಡಬೇಕು ಉಲ್ಲಂಘನೆ ಮಾಡಿರುವವರಿಗೆ ದಂಡ ವಿಧಿಸಬೇಕು. ಮೊದಲ ಬಾರಿಗೆ ನಿಯಮ ಉಲ್ಲಂಘಿಸಿದವರಿಗೆ 5000, ಎರಡನೇ ಬಾರಿಗೆ ಉಲ್ಲಂಘಿಸಿದವರಿಗೆ 10,000 ಮೂರನೇ ಬಾರಿಗೆ ಉಲ್ಲಂಘಿಸಿದವರಿಗೆ ಗರಿಷ್ಠ 20 ಸಾವಿರ ವರೆಗೆ ದಂಡ ವಿಧಿಸುವುದು ಮತ್ತು ಪರವಾನಿಗೆಯನ್ನು ರದ್ದುಗೊಳಿಸಬೇಕು ಎಂದು ತಿಳಿಸಿದರು.

ಹೊಸದಾಗಿ ಅಂಗಡಿ-ಮುಂಗಟ್ಟು, ಮಳಿಗೆಗಳನ್ನು ತೆರೆಯುವವರು ಕನ್ನಡ ಪ್ರಧಾನವಾಗಿ ಕಾಣಿಸುವಂತೆ ನಾಮಫಲಕ ಅಳವಡಿಸಿದ್ದರೆ ಮಾತ್ರ ಪರವಾನಗಿ ನೀಡಬೇಕು. ಕನ್ನಡಕ್ಕೆ ಪ್ರಥಮ ಆದ್ಯತೆ. ಅಂದರೆ ನಾಮಫಲಕದಲ್ಲಿ ಶೇ.60 ರಷ್ಟು ಭಾಗ ಕನ್ನಡ ಇರಬೇಕು. ಇದರ ಜೊತೆಗೆ ಇಂಗ್ಲಿಷ್ ಸೇರಿದಂತೆ ಇತರೆ ಭಾಷೆ ಅಳವಡಿಸಿಕೊಳ್ಳಲು ಯಾವುದೇ ನಿರ್ಬಂಧವಿಲ್ಲ. ಇತರೆ ಭಾಷೆ ಕನ್ನಡ ಅಕ್ಷರಗಳಿಗಿಂತ ದಪ್ಪ ಅಕ್ಷರದ ಪ್ರಮಾಣದಲ್ಲಿ ಇರಬಾರದು, ಉಲ್ಲಂಘನೆ ಮಾಡಿದಲ್ಲಿ ಅಂತಹ ಮಳಿಗೆಗಳಿಗೆ 5 ಸಾವಿರದಿಂದ 20 ಸಾವಿರ ದವರೆಗೆ ದಂಡ ವಿಧಿಸಿ, ಮಾಲೀಕನ




ಪರವಾನಗಿ ರದ್ದು ಮಾಡಬಹುದು. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ನಗರಸಭೆ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳು ಜಾರಿ ಅಧಿಕಾರಿಗಳಾಗಿರುತ್ತಾರೆ. ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಪರಿಶೀಲಿಸಬೇಕು. ಈ ಕುರಿತು ಮೇಲುಸ್ತುವಾರಿ ಪರಿಶೀಲಿಸಲು ತಾಲೂಕು ಮಟ್ಟದ ಕನ್ನಡ ಅನುಷ್ಠಾನ ಸಮಿತಿ ಸಭೆಗಳನ್ನು ಕರೆದು ಪ್ರಗತಿ ಪರಿಶೀಲನೆ ನಡೆಸಿ ಜಿಲ್ಲಾ ಮಟ್ಟದ ಕನ್ನಡ ಅನುಷ್ಠಾನ ಸಮಿತಿಗೆ ವರದಿ ನೀಡಬೇಕು ಎಂದು ತಿಳಿಸಿದರು. ಸರ್ಕಾರದ ಎಲ್ಲಾ ಕಚೇರಿಗಳ ವೆಬ್ ಸೈಟ್ ನಲ್ಲಿ ಕನ್ನಡ ಭಾಷೆಯಲ್ಲಿ ಮಾಹಿತಿ ನೀಡುವ ಬಗ್ಗೆ ಪರಿಶೀಲನೆ ಮಾಡಿ ಕ್ರಮ ವಹಿಸಬೇಕು.ಜಿಲ್ಲೆಯ ಎಲ್ಲ ಕೈಗಾರಿಕೆಗಳಲ್ಲಿ ಎಷ್ಟು ಕಾರ್ಮಿಕರು ಕಾರ್ಯನಿರತರಾಗಿದ್ದಾರೆ ಈ ಪೈಕಿ ಸ್ಥಳೀಯರು ಮತ್ತು ಕನ್ನಡಿಗರ ಸಂಖ್ಯೆ ಎಷ್ಟಿದೆ ಎಂಬ ನಿಖರ ಮಾಹಿತಿಯನ್ನು ನೀಡಬೇಕು ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಬೇಕು ಎಂದರು.

ಕನ್ನಡ ಬಳಸದಿರುವ ಅನ್ಯಭಾಷೆಯ ನಾಮಫಲಕಗಳನ್ನು ಕಡ್ಡಾಯವಾಗಿ ತೆರವುಗೊಳಿಸಬೇಕು. ಸರ್ಕಾರಿ ವಾಹನಗಳ ಮೇಲೆ ಹಾಗೂ ಕಚೇರಿಯ ನಾಮಫಲಕಗಳ ಮೇಲೆ ಕಡ್ಡಾಯವಾಗಿ ಕನ್ನಡ ಭಾಷೆಯನ್ನು ಬಳಕೆ ಮಾಡಬೇಕು. ಎಲ್ಲ ವಿದ್ಯಾಸಂಸ್ಥೆಗಳ ದೈನಂದಿನ ಬಳಕೆಯಲ್ಲಿ ಕನ್ನಡವನ್ನು ಬಳಸಬೇಕು ಈ ಕುರಿತ ಸರ್ಕಾರದ ನಿಯಮಗಳನ್ನು ಶಿಕ್ಷಣ ಇಲಾಖೆ ಅಧಿಕಾರಿಗಳು ತಮ್ಮ ಅಧೀನದ ಸರ್ಕಾರಿ ಹಾಗೂ ಖಾಸಗಿ ಶಾಲಾ ಸಂಸ್ಥೆಗಳ ಮುಖ್ಯಸ್ಥರಿಗೆ ತಿಳಿಸಬೇಕು.

ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಕನ್ನಡ ಅನುಷ್ಠಾನ ಪರಿಶೀಲನಾ ಸಮಿತಿಗಳು ನಿಯಮಿತವಾಗಿ ಸಭೆ ನಡೆಸಿ ಕನ್ನಡ ಅನುಷ್ಠಾನಕ್ಕಾಗಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಣೆ ಮಾಡಬೇಕು. ಮಕ್ಕಳ ಮತ್ತು ಮಹಿಳೆಯರ ಮೇಲಿನ ದೌರ್ಜನ್ಯ ನಿಯಂತ್ರಣಕ್ಕಾಗಿ ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿ "ಲೋಕಲ್ ಕಂಪ್ಲೇಂಟ್ ಕಮಿಟಿ" ಹಾಗೂ "ಇಂಟರ್ನಲ್ ಕಂಪ್ಲೇಂಟ್ ಕಮಿಟಿ" ರಚಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು,

ಈ ಸಂದರ್ಭದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ರವಿ ಕುಮಾರ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಸ್. ಮಹೇಶ್ ಕುಮಾರ್, ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಈಶ್ವರಪ್ಪ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೋಡಿರಂಗಪ್ಪ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಅತಿಯಾದ ರಸಾಯನಿಕಗಳಿಂದ ಭೂಮಿ ಬಂಜೆಯಾಗಲಿದೆ: ಕುಲಪತಿ

**ಚಿಕ್ಕಬಳ್ಳಾಪುರ:** ಕೊಟ್ಟಿಗೆ ಗೊಬ್ಬರದಿಂದ ವಿಮುಖವಾಗಿರುವ ಕೃಷಿ ಸಮುದಾಯ ಸಾಧ್ಯವಾದಷ್ಟು ಕೂಡ ಸಾವಯವ ಕೃಷಿಯತ್ತ ಮುಖಮಾಡುವುದು ಅಗತ್ಯವಿದೆ.ಅತಿಯಾದ ರಸಾಯನಿಕಗಳ ಬಳಕೆ ಹೆಚ್ಚಾಗಿ ಭೂಮಿ ಬಂಜೆಯಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ನಗರದ ಹರ್ಷೋದಯ ಕನ್ವೆಂಷನಲ್ ಹಾಲ್‌ನಲ್ಲಿ ರಾಷ್ಟ್ರೀಯ ದಾಳಿಂಬೆ ಸಂಶೋಧನಾ ಕೇಂದ್ರ ಸೊಲ್ಲಾಪುರ, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆ, ಇಫ್ಕೋ ಮತ್ತು ಕಾಫ್‌ಬರ್ ಅಗ್ರಿ ಸೈನ್ಸ್ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಡೆದ ದಾಳಿಂಬೆ ಬೆಳೆಗಾರರ ರಾಜ್ಯ ಮಟ್ಟದ ತಾಂತ್ರಿಕ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ದಾಳಿಂಬೆ ಬೆಳೆ ಲಾಭದಾಯಕ ಕೃಷಿಯೆಂಬ ಭ್ರಮೆಯಲ್ಲಿ ಕೃಷಿವಲಯದಲ್ಲಿ ಇದೆ. ಆದರೆ ಇದು ತಪ್ಪು, ಏಕೆಂದರೆ ದಾಳಿಂಬೆ ಬೆಳೆಯೆಂಬುದು ಐಸಿಯೂನಲ್ಲಿರುವ ಮಗುವಿದ್ದಂತೆ ಸೂಕ್ಷ್ □□ಬೆಳೆಯಾಗಿದೆ.ಹೇಗೆ ವೈದ್ಯರು ಮಗುವನ್ನು ಸದಾಕಾಲ ಗಮನಿಸಿ ಅದಕ್ಕೆ ಚಿಕಿತ್ಸೆ ನೀಡುತ್ತಾರೋ ಹಾಗೆ ಇದರಲ್ಲಿ ತೊಡಗಿಸಿಕೊಳ್ಳುವ ರೈತರು ತಮ್ಮ ಸಮಯ ಮತ್ತು ವೈಜ್ಞಾನಿವಾದ ಜ್ಞಾನವನ್ನು ಸಂಪೂರ್ಣವಾಗಿ ಬೆಳೆಯತ್ತ ಕೊಡಲಿಲ್ಲ ಎಂದರೆ ಲಾಭತರುವ ಬೆಳೆ ನಷ್ಟವನ್ನೇ ತರವುದು ಖಚಿತ ಎಂದು ಎಚ್ಚರಿಕೆ ನೀಡಿದರು.

ದೇಶದಲ್ಲಿ ದಾಳಿಂಬೆ ಬೆಳೆಗೆ ಮಾರುಕಟ್ಟೆಯಿದ್ದರೂ, ರಫ್ತಿಗೆ ವಿಫುಲ ಅವಕಾಶಗಳಿದ್ದರೂ ಕೂಡ ಸದ್ಯ ಶೇ.2.5ರಷ್ಟು ಮಾತ್ರ ರಫ್ತಾಗುತ್ತಿದೆ. ಇದಕ್ಕೆ ಕಾರಣಗಳೇನೇ ಇದ್ದರೂ ಉತ್ಪಾದನಾ ವೆಚ್ಚ ಕಡಿಮೆ ಮಾಡಿ ವೈಜ್ಞಾನಿಕವಾಗಿ ಉತ್ತಮ ಗುಣಮಟ್ಟದ ಹಣ್ಣು ಬೆಳೆಯುವಂತಾದಾಗ ಮಾತ್ರ ದಾಳಿಂಬೆ ಲಾಭದಾಯಕ ಕೃಷಿ ಎನಿಸಿಕೊಳ್ಳಲಿದೆ.ಇದಕ್ಕೆ ಬೇಕಾದ ಎಲ್ಲಾ ನೆರವನ್ನು ರಾಷ್ಟ್ರೀಯ ದಾಳಿಂಬೆ ಸಂಶೋಧನಾ ಕೇಂದ್ರ ಮತ್ತು ತೋಟಗಾರಿಕಾ




ವಿಜ್ಞಾನಗಳ ವಿಶ್ವವಿದ್ಯಾಲಯ ನೀಡಲು ಬದ್ಧವಿದೆ ಎಂದು ಹೇಳಿದರು.

ಭಾರತೀಯ ಸಿಲ್ಕ್ ಮಾರ್ಕ್ ಸಂಸ್ಥೆಯ ಡಾ.ನರೇಶ್ ಮಾತನಾಡಿ ಜಿಲ್ಲೆಯ ರೈತರು ವಿಜ್ಞಾನದ ಜತೆ ಸದಾ ಸಂಪರ್ಕ ಸಾಧಿಸಿ ಆಧುನಿಕವಾಗಿ ಕೃಷಿಯಲ್ಲಿ ತೊಡಗಿರುವುದು ಸಂತೋಷದ ಸಂಗತಿಯಾಗಿದೆ.ಹನಿ ನೀರಾವರಿಯಲ್ಲಿಯೇ ಸ್ವಾವಲಂಭನೆ ಕಂಡಿರುವ ನಮ್ಮ ರೈತರು ಹಿಪ್ಪುನೇರಳೆ, ಬಿಟ್ಟು ದ್ರಾಕ್ಷಿ, ದ್ರಾಕ್ಷಿ ಬಿಟ್ಟು, ಗೋಡಂಬಿ,ಪುಷ್ಪಕೃಷಿ, ದಾಳಿಂಬೆ,ಬೆಳೆಯಲು ಮುಂದಾಗಿರುವ ಹಿಂದೆ ರೋಚಕವಾಗಿ ಪರಿಶೋಧನೆಯಿದೆ.ಇಲ್ಲಿನ ರೈತರು ತುಂಡುಭೂಮಿಯಲ್ಲಿಯೂ ಚಿನ್ನ ಬೆಳೆಯುವ ಸಾಹಸಿಗಳಾಗಿದ್ದಾರೆ.ದಾಳಿಂಬೆ ಬೆಳೆಗೆ ಸಸಿಯ ಆಯ್ಕೆಯೇ ಪ್ರಥಮವಾಗಿದ್ದು, ನಂತರ ನಾಟಿ, ಭೂಮಿ, ಗೊಬ್ಬರ ಔಷದೋಪಚಾರ, ಆರೈಕೆ ಮುಖ್ಯವಾಗುತ್ತದೆ ಎಂದರು.

ವೇದಿಕೆಯಲ್ಲಿ ಇಫ್ಕೋ ಸಂಸ್ಥೆಯ ಡಾ.ಸಿ.ನಾರಾಯಣಸ್ವಾಮಿ,ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಡಾ.ಬಿ.ಫಕ್ರುದ್ದೀನ್, ಚಿಂತಾಮಣಿ ಕೃಷಿ ವಿಜ್ಞಾನ ಕೇಂದ್ರದ ಡಾ.ಪಾಪಿರೆಡ್ಡಿ,ತೋಟಗಾರಿಕೆ ಉಪ ನಿರ್ದೇಶಕಿ ಡಾ.ಗಾಯಿತ್ರಿ,ಬೆಂಗಳೂರು ಗ್ರಾಮಾಂತರ ಉಪನಿರ್ದೇಶಕ ಡಾ.ಗುಣವಂತ,ಕರ್ನಾಟಕ ದಾಳಿಂಬೆ ಬೆಳೆಗಾರರ ಸಂಘದ ಅಧ್ಯಕ್ಷ ಜಿ.ಸಿ.ಮುನೇಗೌಡ, ರಾಷ್ಟ್ರೀಯ ದಾಳಿಂಬೆ ಸಂಶೋಧನಾ ಕೇಂದ್ರದ ನಿವೃತ್ತ ನಿರ್ದೇಶಕಿ ಡಾ,ಜ್ಯೋತ್ಸ್ನಾ □□ ಶರ್ಮ,ಡಾ.ಮಂಜುನಾಥ್.ಜಿ, ಡಾ.ಮಂಜುನಾಥ್. ಎನ್ ಮತ್ತಿತರರು ಇದ್ದರು.

## ಮೊದಲ ಪುಟದಿಂದ

# ತುಂಬಲಾಗದ ನಷ್ಟ

ವಿಭಾಗಗಳಿಂದ ಆಳವಾಗಿ ಗೌರವಿಸಲ್ಪಟ್ಟು ಪ್ರಪಂಚದಾದ್ಯಂತದ ಮೆಚ್ಚಿದ ಅತ್ಯಂತ ಬುದ್ಧಿವಂತ ಮತ್ತು ಹೆಚ್ಚು ಗೌರವಾನ್ವಿತ ರಾಜನೀತಿಜ್ಞರಾಗಿದ್ದರು. ಅವರು ಯಾವುದೇ ಉನ್ನತ ಸ್ಥಾನವನ್ನು ಹೊಂದಿದ್ದರೂ ಭಾರತಕ್ಕೆ ಕೀರ್ತಿ ಮತ್ತು ಗೌರವವನ್ನು ತಂದರು ಎಂದು ಸೋನಿಯಾ ಹೇಳಿದ್ದಾರೆ. ಡಾ.ಮನಮೋಹನ್ ಸಿಂಗ್ ಅವರ ಕೊಡುಗೆಗಳನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಸೋನಿಯಾ ಗಾಂಧಿ ಹೇಳಿದರು. ಅವರು ನಮ್ಮ ರಾಷ್ಟ್ರೀಯ ಜೀವನದಲ್ಲಿ ಎಂದಿಗೂ ತುಂಬಲಾರದ ಶೂನ್ಯವನ್ನು ಬಿಟ್ಟಿದ್ದಾರೆ. ಕಾಂಗ್ರೆಸ್ ಪಕ್ಷ ಮತ್ತು ಭಾರತದ ಜನರು ಯಾವಾಗಲೂ ಹೆಮ್ಮೆಪಡುತ್ತೇವೆ ಮತ್ತು ಭಾರತದ ಪ್ರಗತಿ ಮತ್ತು ಅಭಿವೃದ್ಧಿಗೆ ಅಳೆಯಲಾಗದ ಕೊಡುಗೆಗಳಿಗಾಗಿ ಕೃತಜ್ಞರಾಗಿರುತ್ತೇವೆ ಎಂದು ಸೋನಿಯಾ ಹೇಳಿದ್ದಾರೆ.

# ಪಂತ್ ಮೂರ್ಖ

ಎಂದಿದ್ದಾರ. 3 ನೇ ದಿನದಂದು ತನ್ನ ಇನ್ನಿಂಗ್ಸ್‌ನ ಆರಂಭದಿಂದಲೂ ಪಂತ್ ಜಡವಾಗಿ ಕಾಣುತ್ತಿದ್ದರು. ಆಟದ ಮೊದಲ ಗಂಟೆಯಲ್ಲಿ ಅವರು ಸ್ಲಿಪ್ ಕಾರ್ಡನ್‌ನಲ್ಲಿ ಸುಮಾರು ಎರಡು ಬಾರಿ ಕ್ಯಾಚ್ ಪಡೆದರು ಮತ್ತು ನಂತರ ರವೀಂದ್ರ ಜಡೇಜಾ ಅವರೊಂದಿಗೆ ಮೈದಾನದಲ್ಲಿ ಮಿಶ್ರಣ-ಅಪ್‌ಗಳ ಕಾರಣದಿಂದಾಗಿ 2 ರನ್-ಔಟ್ ಪ್ರಯತ್ನಗಳಲ್ಲಿ ಬದುಕುಳಿದರು.

ಗಂಟೆಯ ಗಡಿಯಲ್ಲಿ ತನ್ನ ನರಗಳನ್ನು ಸ್ಥಿರಗೊಳಿಸಿದ ನಂತರ, ಪಂತ್ ಸ್ಕಾಟ್ ಬೋಲ್ಯಾಂಡ್‌ನ ಪೂರ್ಣ-ಉದ್ದದ ಎಸೆತವನ್ನು ಕೀಪರ್‌ನ ಹಿಂದೆ ಸ್ಕೂಪ್ ಮಾಡಲು ನಿರ್ಧರಿಸಿದರು. ಬ್ಯಾಟರ್ ಆದರ್ಶ ಸಂಪರ್ಕವನ್ನು ಪಡೆಯಲಿಲ್ಲ ಮತ್ತು ಚೆಂಡನ್ನು ಅಗ್ರ-ಎಡ್ಜ್ ಮಾಡಿದ ನಂತರ ಡೀಪ್ ಥರ್ಡ್ ವ್ಯಾನ್‌ನಲ್ಲಿ ಕ್ಯಾಚ್ ಪಡೆದರು.

ಸ್ಟುಪಿಡ್, ಸ್ಟುಪಿಡ್, ಸ್ಟುಪಿಡ್! ನಿಮಲ್ಲಿ ಇಬ್ಬರು ಫೀಲ್ಡರ್‌ಗಳಿದ್ದಾರೆ, ನೀವು ಇನ್ನೂ ಆ ಶಾಟ್‌ಗೆ ಹೋಗುತ್ತೀರಿ. ನೀವು ಹಿಂದಿನ ಹೊಡೆತವನ್ನು ಕಳೆದುಕೊಂಡಿದ್ದೀರಿ ಮತ್ತು ನೀವು ಎಲ್ಲಿ ಕ್ಯಾಚ್ ಪಡೆದಿದ್ದೀರಿ ಎಂದು ನೋಡಿ. ನೀವು ಡೀಪ್ ಥರ್ಡ್ ವ್ಯಾನ್‌ನಲ್ಲಿ ಸಿಕ್ಕಿಬಿದ್ದಿದ್ದೀರಿ. ಅದು ನಿಮ ವಿಕೆಟ್ ಅನ್ನು ಎಸೆಯುತ್ತಿದೆ. ಭಾರತ ಇದ್ದ ಪರಿಸ್ಥಿತಿಯಲ್ಲಿ ಇಂತಹ ಹೊಡೆತ ಬೇಕಿರಲಿಲ್ಲ ಎಂದು ಗಾವಾಸ್ಕರ್ ಕಿಡಿ ಕಾರಿದರು.

# ನಾಲ್ವರು ಸಾವು

ಮೃತಪಟ್ಟಿದ್ದು, 8 ಮಂದಿಗೆ ಗಾಯಗಳಾಗಿರುವ ಘಟನೆ ಅಂಚೆಪಾಳ್ಯದ ಬಳಿ ಅಪಘಾತ ನಡೆದಿದೆ.

ಮಹಮ್ಮದ್ ಇಬ್ರಾಹಿಂ(40) ಮೃತ ದುರ್ದೈವಿ.ಖಾಸಗಿ ಬಸ್ ಉಡುಪಿಯ ಸುಭಾಷ್ ನಗರದಿಂದ ಬೆಂಗಳೂರು ಕಡೆಗೆ ಶುಕ್ರವಾರ ರಾತ್ರಿ ಹೊರಡಿತ್ತು.ಚಾಳಕನ ನಿಯಂತ್ರಣ ತಪ್ಪಿ ಬಸ್ ಸ್ವಾಗತ ಕೋರುವ ನಾಮಫಳಕಕ್ಕೆ ಡಿಕ್ಕಿ ಹೊಡೆದು ಬಸ್ ಪಲ್ಟಿಯಾಗಿದೆ. ಘಟನೆಯಲ್ಲಿ ಗಾಯಗೊಂಡವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಎಲ್ಲರೂ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನೆ ಸಂಬಂಧ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಹೆಗ್ಗುರುತಾಗಿವೆ

ಡಾ. ಮನಮೋಹನ್ ಸಿಂಗ್ ಅವರು ಸೆಪ್ಟೆಂಬರ್ 16, 1982ರಿಂದ ಜನವರಿ 14, 1985ರವರೆಗೆ ಆರ್‌ಬಿಐ ಗವರ್ನರ್ ಆಗಿ ಸೇವೆ ಸಲ್ಲಿಸಿದ್ದರು. ಅವರ ಅಧಿಕಾರಾವಧಿಯಲ್ಲಿ ಭಾರತದ ಆರ್ಥಿಕ ಸುಧಾರಣೆ ರೂಪಿಸುವ ಹಲವಾರು ಪ್ರಮುಖ ನೀತಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ. 1982-83ರ ಸಮಯದಲ್ಲಿ ದೇಶದಲ್ಲಿ ಉಂಟಾದ ತೀವ್ರ ಬರ ಪರಿಸ್ಥಿತಿಗಳು ಕೃಷಿ ಉತ್ಪಾದನೆಗೆ ಗಂಭೀರ ಹಿನ್ನಡೆ ಮತ್ತು ಕೈಗಾರಿಕಾ ಉತ್ಪಾದನೆಯಲ್ಲಿ ಕುಸಿತಕ್ಕೆ ಕಾರಣವಾಯಿತು. ಆಗ ಮನಮೋಹನ್ ಸಿಂಗ್ ಆರ್‌ಬಿಐ ಮೂಲಕ ತೆಗೆದುಕೊಂಡ ನಿರ್ಧಾರಗಳು ಬಹಳ ಮಹತ್ವದ್ದಾಗಿವೆ. ವಿತ್ತೀಯ ವ್ಯವಸ್ಥೆಯ ಕಾರ್ಯನಿರ್ವಹಣೆಯನ್ನು ಪರಿಶೀಲಿಸಲು ಪ್ರೊ. ಸುಖಮೋಯ್ ಚಕ್ರವರ್ತಿ ನೇತೃತ್ವದಲ್ಲಿ ಸಮಿತಿಯನ್ನು ಡಿಸೆಂಬರ್ 1982ರಲ್ಲಿ ಸ್ಥಾಪಿಸಲಾಯಿತು.

# ದಿಟ್ಟ ಉತ್ತರ

ದಾಳಿಯನ್ನು ಲೀಲಾಜಾಲವಾಗಿ ಎದುರಿಸಿ 176 ಎಸೆತಗಳಲ್ಲಿ 10 ಬೌಂಡರಿ ಮತ್ತು 1 ಸಿಕ್ಸರ್ ಬಾರಿಸುವ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ ಚೊಚ್ಚಲ ಶತಕ ಬಾರಿಸಿದರು. ಮತ್ತೊಂದೆಡೆ ವಾಷಿಂಗ್ಟನ್ ಸುಂದರ್ 50 ರನ್ ಗಳಿಸಿ ತಂಡಕ್ಕೆ ಆಸರೆಯಾದರು. ಜಸ್‌ಪ್ರೀತ್‌ಬೂಂಬ್ರಾ ಶೂನ್ಯಕ್ಕೆ ಔಟಾದರು. ದಿನದಾಟದ ಅಂತ್ಯಕ್ಕೆ ನಿತೀಶ್‌ರೆಡ್ಡಿ ಅಜೇಯ 105 ಹಾಗೂ ಮೊಹ್ಮದ್ ಸಿರಾಜ್ 2 ರನ್ ಗಳಿಸಿ ಆಡುತ್ತಿದ್ದಾರೆ.

ಆಸ್ಟ್ರೇಲಿಯಾ ಪರ ಬ್ಯಾಟ್ ಕಮಿಂಗ್ಸ್ ಹಾಗೂ ಸ್ಕಾಟ್‌ಬೋಲ್ಯಾಂಡ್ ತಲಾ 3 ವಿಕೆಟ್ ಗಳಿಸಿದರೆ, ನಾಥನ್ ಲಿಯಾನ್ 2 ವಿಕೆಟ್ ಗಳಿಸಿದರು.

# ಇಡಿ ಸಮನ್ಸ್

ಉಲ್ಲಂಘನೆ ಸಾಧ್ಯತೆ ಕುರಿತು ವಿದೇಶಿ ವಿನಿಮಯ ನಿರ್ವಹಣಾ ಕಾಯಿದೆ (ಎಫ್‌ಇಎಂಎ) ನಿಬಂಧನೆಗಳ ಅಡಿ ಜಾರಿ ನಿರ್ದೇಶನಾಲಯ ತನಿಖೆ ನಡೆಸುತ್ತಿದೆ.

ಈ ಎಲ್ಲ ಆರೋಪಗಳನ್ನು ತಳ್ಳಿಹಾಕಿರುವ ಕೆಟಿಆರ್, ಇದರಲ್ಲಿ ಭ್ರಷ್ಟಚಾರ ಎಲ್ಲಿ ಆಗಿದೆ, 55 ಕೋಟಿಯನ್ನು ನಾವು ಪಾವತಿ ಮಾಡಿದ್ದೇವೆ. ಅವರು ಪಾವತಿಯನ್ನು ಮಾನ್ಯತೆ ಮಾಡಿದ್ದಾರೆ. ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ನಲ್ಲಿ ಎಚ್‌ಎಂಡಿಎ ಖಾತೆ ಇದ್ದು, ಹಣವನ್ನು ಖಾತೆಗೆ ಜಮೆ ಮಾಡಲಾಗಿದೆ ಎಂದು ಪ್ರಕರಣ ಸಂಬಂಧ ಆರೋಪಗಳಿಗೆ ಪ್ರತಿಕ್ರಿಯಿಸಿದ್ದಾರೆ. ಬಿಆರ್‌ಎಸ್ ಆಡಳಿತದಲ್ಲಿ ಪೌರಾಡಳಿತ ಸಚಿವರಾಗಿದ್ದ ರಾಮರಾವ್ ಅವರು ಕಳೆದ ವರ್ಷ ಹೈದರಾಬಾದ್‌ನಲ್ಲಿ ಫಾರ್ಮುಲಾ ಒನ್ ರೇಸ್ ಆಯೋಜಿಸಿದ್ದರು

# ಮಳೆಯ ನಡುವೆಯೇ ಡಾಂಬರೀಕರಣ: ಕಾಮಗಾರಿ ಸ್ಥಗಿತಗೊಳಿಸಲು ಒತ್ತಾಯ

**ಕಾಮಗಾರಿ ಸ್ಥಗಿತಗೊಳಿಸಲು ಸ್ಥಳೀಯರು ಒತ್ತಾಯಿಸಿದರೂ ಕಿವಿಗೊಡದ ಕಾಮಗಾರಿ ಮೇಲ್ವಿಚಾರು । ಸಾಮಾಜಿಕ ಜಾಲದಲ್ಲಿ ರಸ್ತೆ ಕಾಮಗಾರಿ ವೈರಲ್ ವಿಡಿಯೋ...**

**ಶಿರಾ:** ಶಿರಾ–ಬುಕ್ಕಾಪಟ್ಟಣ– ಹುಳಿಯಾರು ರಸ್ತೆ ಕಾಮಗಾರಿ 15 ವರ್ಷಗಳಿಂದ ನಡೆಯುತ್ತಿದ್ದರೂ ಪೂರ್ಣಗೊಂಡಿಲ್ಲ. ರಾಜ್ಯದಲ್ಲಿಯೇ ಹಳೆಯ ಯೋಜನೆ ಇದಾಗಿದ್ದು.

ಇತ್ತೀಚಿಗೆ ನವೆಂಬರ್ 2024, ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ವೀಕ್ಷಿಸಿ ರಸ್ತೆಯನ್ನು ವೀಕ್ಷಣೆ ಮಾಡುತ್ತಿದ್ದು ಕಾಮಗಾರಿ ಕುಂಠಿತವಾಗಲು ಏನು ಕಾರಣ ಎನ್ನುವುದನ್ನು ಅರಿತು ಯೋಜನೆಗೆ ಇನ್ನು 15 ದಿನದೊಳಗೆ ಕಾಯಕಲ್ಪ ನೀಡಲಾಗುವುದು. ರಸ್ತೆ ಕಾಮಗಾರಿಗೆ ಕೆಲವೆಡೆ ಭೂ ಸ್ವಾಧೀನ ಮಾಡಿಕೊಳ್ಳಬೇಕಿದೆ ಈ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು ಈ ಹಿನ್ನೆಲೆಯಲ್ಲಿ ಕಳೆದ ಸುಮಾರು ಒಂದು ವಾರದಿಂದ ಶಿರಾ ತಾಲ್ಲೂಕಿನ ಪ್ರಕೃತಿ ವಿಕೋಪದಲ್ಲಿ ಮೋಡ ಕವಿದ ವಾತಾವರಣ ಸಾಮಾನ್ಯವಾಗಿದ್ದು ಆದರೂ ಶುಕ್ರವಾರದಂದು ಸ್ವಲ್ಪ ಮಟ್ಟಿಗೆ ಮಳೆಯಾಗಿದೆ ಈ ನಡುವೆ ರಾಷ್ಟ್ರೀಯ ಹೆದ್ದಾರಿ– 234ರ ಶಿರಾ–ಬುಕ್ಕಾಪಟ್ಟಣ– ಹುಳಿಯಾರು ರಸ್ತೆಯ ಕಾಮಗಾರಿಯನ್ನು ಮಳೆಯಲ್ಲೂ ರಸ್ತೆ ಕಾಮಗಾರಿಮಳೆ ನಡುವೆ



ರಸ್ತೆಗೆ ಟಾರು ಹಾಕುವ ಕಾಮಗಾರಿ ನಡೆಸುತ್ತಿದ್ದು ಮಳೆಯಲ್ಲಿ ಟಾರುರಸ್ತೆಗೆ ಕಚ್ಚುವುದೇ ಗುಣಮಟ್ಟ ಬಗ್ಗೆ ಸಾರ್ವಜನಿಕ ಚರ್ಚೆ ಯಾಗಿದೆ ಸಾಮಾನ್ಯವಾಗಿ ಮಳೆ ಬರುವಾಗ 'ಡಾಂಬರೀಕರಣ ನಡೆಸುವಾಗ ನಿಯಮಗಳನ್ನು ಪಾಲಿಸುತ್ತಿಲ್ಲ. ಕಾಟಾಚಾರಕ್ಕೆ ಬೇಕಾಬಿಟ್ಟಿ ಡಾಂಬರು ಹಾಕಿದ್ದಾರೆ.

'ಮಳೆ ಬರುವಾಗ ಡಾಂಬರು ಹಾಕಿದರೆ ಅದು ಹೆಚ್ಚು ಕಾಲ ಬಾಳಿಕೆ ಬರುವುದಿಲ್ಲ. ಡಾಂಬರೀಕರಣದ ವೇಳೆ ಮಿಶ್ರಣದ ಉಷ್ಣಾಂಶ ಕಾಯ್ದುಕೊಳ್ಳುವಿಕೆ ತುಂಬಾ ಮುಖ್ಯ. ಅದರ ಆಧಾರದಲ್ಲೇ ಡಾಂಬರೀಕರಣದ ಗುಣಮಟ್ಟ ನಿರ್ಧಾರವಾಗುತ್ತದೆ' ಹಿರಿಯ ಎಂಜಿನಿಯರ್ ಒಬ್ಬರು ಅಭಿಪ್ರಾಯಪಟ್ಟರು.

'ಬಿಸಿ ಡಾಂಬರು ಜಲ್ಲಿ ಮಿಶ್ರಣವು ಕನಿಷ್ಠ ಪಕ್ಷ 160 ಡಿಗ್ರಿ ಸೆಂಟಿಗ್ರೇಡ್ ಉಷ್ಣಾಂಶವನ್ನು ಹೊಂದಿರಬೇಕು. ಜಲ್ಲಿ ಡಾಂಬರು ಮಿಶ್ರಣವನ್ನು ರಸ್ತೆಗೆ ಹಾಕುವಾಗ ಅದರ ಉಷ್ಣಾಂಶ ಕಡಿಮೆ ಎಂದರೂ 120 ಡಿಗ್ರಿ ಸೆಂಟಿಗ್ರೇಡ್‌ನಷ್ಟು ಇರಬೇಕು. ಅದಕ್ಕಿಂತ ಕಡಿಮೆ ಆದರೆ ರಸ್ತೆಯ ಮೇಲ್ಮೈಗೆ ಮಿಶ್ರಣವು ಸರಿಯಾಗಿ ಅಂಟಿಕೊಳ್ಳುವುದಿಲ್ಲ. ರಸ್ತೆ ಮೇಲ್ಮೈಗೆ ಅಂಟು ಪದರದ ರೂಪದಲ್ಲಿ ಹಾಕುವ ದ್ರವ ಡಾಂಬರು ಕೂಡಾಮಳೆ ಬರುವಾಗ ತಣ್ಣಗಾಗುತ್ತದೆ. ಆಗ ರಸ್ತೆಯ ಮೇಲ್ಮೈ ಡಾಂಬರು ಮಿಶ್ರಣವನ್ನು ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯವನ್ನು ಕಳೆದುಕೊಳ್ಳುತ್ತದೆ' ಎಂದು ಅವರು ವಿವರಿಸಿದರು.

'ಮಳೆಗಾಲದಲ್ಲಿ ಡಾಂಬರೀಕರಣ ಕಾಮಗಾರಿ ನಡೆಸಬಾರದು ಎಂದು ಸಂಬಂಧಿಸಿದ ಇಲಾಖೆ ಪ್ರತಿವರ್ಷವೂ ಸುತ್ತೋಲೆ ಹೊರಡಿಸುತ್ತದೆ. ಮಳೆ ಬರುವಾಗ ಡಾಂಬರೀಕರಣ ನಡೆಸಬಾರದು ಎಂದು ಗುತ್ತಿಗೆದಾರರಿಗೂ ಸೂಚನೆ ನೀಡಲಾಗಿರುತ್ತದೆ. ಕಾಮಗಾರಿಯ ಗುಣಮಟ್ಟ ನೋಡಿಕೊಳ್ಳುವುದಕ್ಕಾಗಿಯೇ ಯೋಜನಾ ನಿರ್ವಹಣೆ ಸಲಹೆಗಾರರನ್ನು ನೇಮಿಸಲಾಗುತ್ತದೆ. ಜಲ್ಲಿ ಡಾಂಬರು ಮಿಶ್ರಣ ನಿಗದಿತ ಉಷ್ಣಾಂಶದಲ್ಲಿದೆಯೇ ಎಂಬುದನ್ನು ತಪಾಸಣೆ ನಡೆಸುವುದು ಅವರ ಜವಾಬ್ದಾರಿ' ಎಂದರು.

'ತಣ್ಣಗಾದ ಜಲ್ಲಿ ಡಾಂಬರು ಮಿಶ್ರಣ ಬಳಸಿದರೆ ಅದು ದೋಸೆಯಂತೆ ಕಿತ್ತುಬರುತ್ತದೆ. ಈ ಡಾಂಬರೀಕರಣ ಮೂರು ತಿಂಗಳು ಬಾಳಿಕೆ ಬಂದರೆ ಹೆಚ್ಚು' ಆಕ್ಷೇಪ ವ್ಯಕ್ತ ಪಡಿಸುತ್ತಿದ್ದಾರೆ.

ಒಟ್ಟಾರೆರಸ್ತೆ ಕಾಮಗಾರಿ ಅಧಿಕಾರಿಗಳು ಪ್ರಶ್ನೆ ಮಾಡಿದ ಸಾರ್ವಜನಿಕರಿಗೆ ಉತ್ತರಿಸಿಟ್ಟು ಮಳೆಯ ನಡುವೆಯೂ ರಸ್ತೆಗೆ ಕಾರು ಹಾಕುವುದು ಎಷ್ಟರಮಟ್ಟಿಗೆ ಸರಿ ಟಾರು ಹಾಕಿರುವ ರಸ್ತೆಗಳು ಗುಂಡಿ ಬಿದ್ದಿದ್ದು ಅಪಘಾತಕ್ಕೆ ಕಾರಣವಾಗಿದೆ ಇಂತಹ ಸಂದರ್ಭದಲ್ಲಿ ಮಳೆಯಲ್ಲಿ ನೆನೆದಿರುವ ರಸ್ತೆಗೆ ಹಾಕುತ್ತಿರುವ ಟಾರು ಎತ್ತರ ಮಟ್ಟಿಗೆ ಗುಣಮಟ್ಟದಿಂದ ಕೂಡಿರುತ್ತದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



# ಕಾನೂನಿನ ಅರಿವ ಅಗತ್ಯ

**ಶಿಡ್ಲಘಟ್ಟ:** ಕಾನೂನಿನ ಬಗ್ಗೆ ಅರಿವು ಇದ್ದರೆ ಮಾತ್ರ ಅಪರಾಧ ಕೃತ್ಯಗಳು ತಂತಾನೇ ಕಡಿಮೆಯಾಗುತ್ತವೆ ಪೊಲೀಸರು ಜನಸ್ನೇಹಿಗಳು ವಿದ್ಯಾರ್ಥಿಗಳಿಗೆ ಕಾನೂನು ಮಾಹಿತಿ ಬೇಕಾದಲ್ಲಿ ಇಲಾಖೆಗೆ ಬಂದು ಪಡೆಬಹುದು ಎಂದು ಸರ್ಕಲ್ ಇನ್ಸ್‌ಪೆಕ್ಟರ್ ಶ್ರೀನಿವಾಸ್ ತಿಳಿಸಿದರು.

ನಗರದ ಶ್ರೀ ಸರಸ್ವತಿ ಕಾನ್ವೆಂಟ್ ಶಾಲೆಯಲ್ಲಿ ಅಪರಾಧ ತಡೆ ಮಾಸಾಚರಣೆ ಅಂಗವಾಗಿ ಪೊಲೀಸ್ ಇಲಾಖೆಯಿಂದ ಆಯೋಜಿಸಿದ್ದ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆ ಶಿಕ್ಷಣದ ಹಕ್ಕಿನ ಜೊತೆ ಅಭಿಪ್ರಾಯ ವ್ಯಕ್ತಪಡಿಸುವ ಹಕ್ಕು ಇದೆ ಸಮಾನತೆಯ ಹಕ್ಕು ಹಾಗೂ ಸಾಮಾಜಿಕ ಅನ್ಯಾಯದ ಮತ್ತು ಶೋಷಣೆಯಿಂದ ರಕ್ಷಿಸಲ್ಪಡುವ ಹಕ್ಕನ್ನು ನೀಡಲಾಗಿದೆ ಎಂದರು.

ಬಾಲ್ಯದಿಂದಲೇ ವಿದ್ಯಾರ್ಥಿಗಳಲ್ಲಿ ಶಿಸ್ತು, ಸಂಯಮ ಬೆಳೆಯಬೇಕು ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ದೌರ್ಜನ್ಯ ಅತ್ಯಂತ ಅಮಾನವೀಯ ಕೃತ್ಯವಾಗಿದ್ದು, ಅದನ್ನು ಎದುರಿಸುವ ಬಗ್ಗೆ ಶಾಲೆಗಳಲ್ಲೇ ಮಕ್ಕಳಿಗೆ ಅರಿವು ಮೂಡಿಸುವ ಅತ್ಯಂತ ಅಗತ್ಯವಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರ ಠಾಣೆಯ ಸಬ್ ಇನ್ಸ್ ಪೆಕ್ಟರ್ ವೇಣುಗೋಪಾಲ್, ಸರಸ್ವತಿ ಕಾನ್ವೆಂಟ್ ಶಾಲೆಯ ಅಧ್ಯಕ್ಷ ಎನ್.ಶ್ರೀಕಾಂತ್,ಕಾರ್ಯದರ್ಶಿ ಆರ್.ನಾಗಲಕ್ಷ್ಮಿ,ಶಿಕ್ಷಕರು ಹಾಗು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



# ಮನಮೋಹನ್ ಸಿಂಗ್‌ಗೆ ಶ್ರದ್ಧಾಂಜಲಿ




**ಮುಳಬಾಗಲು:** ಎರಡು ಬಾರಿ ದೇಶದ ಪ್ರಧಾನಿಯಾಗಿದ್ದಡಾ. ಮನಮೋಹನ್ ಸಿಂಗ್ ಕ್ರಾಂತಿಕಾರಿ ಕಾರ್ಯಕ್ರಮ ಗಳನ್ನು ಜಾರಿಗೆ ತರುವ ಮೂಲಕ ಜನರ ಮೆಚ್ಚುಗೆಗೆ ಪಾತ್ರ ರಾಗಿದ್ದರು ಎಂದು ಮುಳಬಾಗಿಲು ತಾಲೂಕಿನ ದೇವರಾಯ ಸಮುದ್ರ ಗ್ರಾ.ಪಂ ಅಧ್ಯಕ್ಷ ಜಮನಹಳ್ಳಿ ಕೃಷ್ಣಪ್ಪ ತಿಳಿಸಿದರು.

ನಗರ ಹೊರವಲಯದ ಕಾಂಗ್ರೆಸ್ ಕಚೇರಿಯಲ್ಲಿ ಡಾ. ಮನಮೋಹನ್‌ಸಿಂಗ್ ಅವರಿಗೆ ಏರ್ಪಡಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಮನರೇಗಾ, ಶಿಕ್ಷಣ ಹಕ್ಕು ಕಾಯಿದೆ. ಸರ್ವಶಿಕ್ಷಣ ಅಭಿಯಾನ ಸೇರಿದಂತೆ ಇತರೆ ವಿಶೇಷ ಯೋಜನೆಗಳನ್ನು ಸಂಪೂರ್ಣ ಅನುಷ್ಠಾನಗೊಳಿಸುವಲ್ಲಿ ಸಫಲರಾಗಿದ್ದರು. ಆರ್ಥಿಕ ಸುಧಾರಕರಾಗಿದ್ದ ಇವರು ದೇಶದ ಉದಾರೀಕರಣ, ಖಾಸಗೀಕರಣ, ಜಾಗತೀಕರಣದ ರೂವಾರಿಗಳಾಗಿದ್ದರು. ಆಬಿಐ ಗವರ್ನರ್ ಆಗಿದ್ದಾಗ ಬ್ಯಾಂಕಿಂಗ್ ವಲಯ ಸಾಕಷ್ಟು ಅಭಿವೃದ್ಧಿ ಹೊಂದಲು ಶ್ರಮಿಸಿದ್ದರು. ಹಣಕಾಸು ಸಚಿವರಾಗಿ ದೇಶದ ಆರ್ಥಿಕ ವ್ಯವಸ್ಥೆಯ ಅಭಿವೃದ್ಧಿಗೆ ಕಾರಣ ಕರ್ತರಾಗಿದ್ದರು ಎಂದು ತಿಳಿಸಿದರು. ಕಾಂಗ್ರೆಸ್ ಮುಖಂಡರಾದ ನಗರಸಭಾ ಸದಸ್ಯರಾದ ಜಬಿವುಲ್ಲಾ ,ವೆಂಕಟಪತಿ ಕಿಸಾನ್ ಸಂಘದ ಶಂಕರ್ ನಾರಾಯಣಗೌಡ , ಗುಜ್ಜನಹಳ್ಳಿ ಮಂಜುನಾಥ್ ಮುಂತಾದ ಕಾಂಗ್ರೆಸ್ನ ಗಣ್ಯರು ಹಾಜರಿದ್ದರು,

# ಹಣ ದುಬ್ಬರ ನಿಯಂತ್ರಣದಲ್ಲಿ ಸಿಂಗ್ ಅವರ ಪಾತ್ರ ದೊಡ್ಡದು

**ಶಿಡ್ಲಘಟ್ಟ:** ಹಣ ದುಬ್ಬರ ನಿಯಂತ್ರಣಕ್ಕೆ ಸಾಕಷ್ಟು ಶ್ರಮಿಸಿದ್ದ ನಮ್ಮ ದೇಶದ ಪ್ರಧಾನಿಯಾದ ಮನಮೋಹನ್ ಸಿಂಗ್ ಅವರು 2004 ರಿಂದ 2014 ರವರೆಗೆ ದೇಶವನ್ನು ಮುನ್ನಡೆಸಿದ್ದರು ಎಂದು ಕಾಂಗ್ರೆಸ್ ಮುಖಂಡ ಡಾಲ್ಫಿನ್ ಎ.ನಾಗರಾಜ್ ತಿಳಿಸಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಮಾತನಾಡಿದರು.

ಸರ್ವ ಶಿಕ್ಷಣ ಅಭಿಯಾನ ಆರ್‌ಟಿಐ ಕಾಯ್ದೆ, ನರೇಗಾ ಯೋಜನೆ, ಕಡ್ಡಾಯ ಶಿಕ್ಷಣವನ್ನು ಮೂಲಭೂತ ಹಕ್ಕನ್ನಾಗಿಸಿದ್ದು ಸೇರಿದಂತೆ ಹಲವು ಕ್ರಾಂತಿಕಾರಿ ಯೋಜನೆಗಳನ್ನು ಜಾರಿಗೊಳಿಸಿ ದೇಶದ ಸರ್ವಾಂಗೀಣ ಅಭ್ಯುದಯಕ್ಕೆ ಶ್ರಮಿಸಿದ್ದರು ಎಂದು ಹೇಳಿದರು.

ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಎ. ನಾಗರಾಜ್, ಗುತ್ತಿಗೆದಾರ ಟಿ.ಕೆ.ನಟರಾಜ್, ಬ್ಲಾಕ್ ಕಾಂಗ್ರೆಸ್ ಉಪಾಧ್ಯಕ್ಷ ಶ್ರೀನಾಥ್, ನಗರಸಭೆಯ ಮಾಜಿ ಅಧ್ಯಕ್ಷ ಅಪ್ಸರ್ ಪಾಷಾ, ನಗರಸಭಾ ಸದಸ್ಯರಾದ ಶ್ರೀನಿವಾಸ್,ಮೌಲಾ, ರಿಯಾಸ್ ಪಾಷಾ,ಜಿಲ್ಲಾ ಕಾಂಗ್ರೆಸ್ ಸಾಮಾಜಿಕ ಜಾಲತಾಣ ವಿಭಾಗದ ಸಂಚಾಲಕ ಮಹಮ್ಮದ್ ಹಫೀಜ್, ಕುರುಬರ ಸಂಘದ ಕಾರ್ಯದರ್ಶಿ ರಾಮಾಂಜಿ,ಮಂಜುನಾಥ್, ರಾಜಕುಮಾರ್,ಸೈಯದ್ ಬಾಬಾ, ಅಲ್ತಾಫ್ ಹುಸೇನ್, ಮತ್ತಿತರರು ಪಾಲ್ಗೊಂಡಿದ್ದರು.



# ಬಾಣಂತಿಯರಿಗೆ ನೀಡಲಾಗಿದ್ದ ಐವಿ ದ್ರಾವಣ ಬಳಕೆಗೆ ಯೋಗ್ಯವಲ್ಲ

**ರಾಯಚೂರು:** ಸಿಂಧನೂರು ತಾಲೂಕು ಆಸ್ಪತ್ರೆಯಲ್ಲಿ ನಾಲ್ವರು ಬಾಣಂತಿಯರ ಸಾವಿಗೆ ಕಾರಣವಾಗಿದೆ ಎನ್ನಲಾಗಿರುವ ಖಗಿ ರಿಂಗರ್ ಲ್ಯಾಕ್ಟೇಟ್ ದ್ರಾವಣವನ್ನು ಪರೀಕ್ಷೆಗೆ ಒಳಪಡಿಸಿದ್ದು, ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ. ವಿ ರಿಂಗರ್ ಲ್ಯಾಕ್ಟೇಟ್ ದ್ರಾವಣದಲ್ಲಿನ ಎಂಡೋ ಟಾಕ್ಸಿನ್ ಎಂಬ ಅಂಶ ಬಳಕೆಗೆ ಯೋಗ್ಯವಲ್ಲ ಅಂತ ಬೆಂಗಳೂರು ಮತ್ತು ಹೈದರಾಬಾದ್‌ನ ಲ್ಯಾಬ್‌ಗಳ ವರದಿಯಲ್ಲಿ ಬಹಿರಂಗಗೊಂಡಿದೆ. ರಾಯಚೂರು ಜಿಲ್ಲಾಡಳಿತ ಒಟ್ಟು ಮೂರು ಲ್ಯಾಬ್‌ಗಳಿಗೆ ತಲಾ 6 ಐವಿ ರಿಂಗರ್ ಲ್ಯಾಕ್ಟೇಟ್ ದ್ರಾವಣ ಸ್ಯಾಂಪಲ್ ಪರೀಕ್ಷೆಗೆ ಕಳುಹಿಸಿತ್ತು. ಬೆಂಗಳೂರಿನ ವೈದ್ಯಕೀಯ ಕಾಲೇಜು ನೀಡಿದ ವರದಿಯಲ್ಲಿ 6 ಸ್ಯಾಂಪಲ್ ಪೈಕಿ 4 ಸ್ಯಾಂಪಲ್‌ಗಳು ಉಪಯೋಗಕ್ಕೆ ಯೋಗ್ಯವಲ್ಲ, ಎರಡು ಉಪಯೋಗಕ್ಕೆ ಯೋಗ್ಯವಾಗಿವೆ ಎಂದು ಹೇಳಿದೆ. ಇನ್ನು, ಹೈದರಾಬಾದ್‌ನ ವಿಂಪ್ಟಾ ಲ್ಯಾಬ್ ವರದಿಯಲ್ಲಿ 6 ಸ್ಯಾಂಪಲ್ ಪೈಕಿ, ನಾಲ್ಕು ಉಪಯೋಗಕ್ಕೆ ಯೋಗ್ಯವಿದ್ದು, ಎರಡು ಯೋಗ್ಯವಲ್ಲ ಅಂತ ವರದಿಯಲ್ಲಿ ಉಲ್ಲೇಖವಾಗಿದೆ. ಸದ್ಯ, ಸರ್ಕಾರದ ಡ್ರಗ್ ಕಂಟ್ರೋಲ್ ಲ್ಯಾಬ್‌ನ ವರದಿ ಮಾತ್ರ ಬಾಕಿ ಇದೆ ಎಂದು ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ ಮಾಹಿತಿ ನೀಡಿದ್ದಾರೆ.

ಬೆಂಗಳೂರು ಮತ್ತು ಹೈದರಾಬಾದ್‌ನ ಲ್ಯಾಬ್‌ಗಳು ನೀಡಿದ್ದ ವರದಿಯಲ್ಲಿ ಜಿಲ್ಲಾಡಳಿತ ಸರ್ಕಾರಕ್ಕೆ ಸಲ್ಲಿಸಿದ್ದು ತನಿಖೆ ಮುಂದುವರಿಸಿದೆ. ರಾಯಚೂರು ಜಿಲ್ಲೆಯಲ್ಲಿ ಕಳೆದ 3 ತಿಂಗಳಲ್ಲಿ 10 ಬಾಣಂತಿಯರು ಮೃತಪಟ್ಟಿದ್ದಾರೆ. ಸಿಂಧನೂರು ತಾಲೂಕು ಆಸ್ಪತ್ರೆ ಒಂದರಲ್ಲೇ ನಾಲ್ವರು ಬಾಣಂತಿಯರು ಮೃತಪಟ್ಟಿದ್ದರು.

ಸಿಂಧನೂರು ತಾಲೂಕು ಆಸ್ಪತ್ರೆಗೆ ಅಕ್ಟೋಬರ್ ತಿಂಗಳಲ್ಲಿ ದಾಖಲಾಗಿದ್ದ ನಾಲ್ವರು ಬಾಣಂತಿಯರು ಸಿಸೇರಿಯನ್ ಬಳಿಕ ಮೃತಪಟ್ಟಿದ್ದರು. ರಾಯಚೂರು ಜಿಲ್ಲೆಯವರೇಯಾದ ಮೌಸಂಬಿ ಮಂಡಲ್, ಚನ್ನಮ್ಮ, ಚಂದ್ರಕಲಾ, ರೇಣುಕಮ್ಮ ಮೃತ ಬಾಣಂತಿಯರು. ಈ ನಾಲ್ವರು ಬಾಣಂತಿಯರಿಗೂ ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಳಕೆಯಾಗಿದ್ದ ಖಗಿದ್ರಾವಣವೇ ನೀಡಲಾಗಿತ್ತು ಎಂದು ಹೇಳಲಾಗಿತ್ತು.

ತನಿಖೆ ನಡೆಸುತ್ತಿರುವ ಸರ್ಕಾರ


ಬಳ್ಳಾರಿ, ರಾಯಚೂರು, ಬೆಳಗಾವಿ ಮತ್ತು ಹುಬ್ಬಳ್ಳಿಯಲ್ಲಿನ ಬಾಣಂತಿಯರ ಸಾವಿನ ಸಂಖ್ಯೆ ಬೆಳಕಿಗೆ ಬರುತ್ತಿದ್ದಂತೆ ಆರೋಗ್ಯ ಇಲಾಖೆ ತನಿಖೆ ನಡೆಸುತ್ತಿದೆ. ಕಳೆದ ಮೂರು ತಿಂಗಳಲ್ಲಿ ಕರ್ನಾಟಕದಲ್ಲಿ ಎಷ್ಟು ಬಾಣಂತಿಯರು ಮೃತಪಟ್ಟಿದ್ದಾರೆ? ಇವರ ಸಾವಿಗೆ ಕಾರಣವೇನು? ಎಂಬುವುದರ ಕುರಿತು ಸಮಗ್ರವಾಗಿ ತನಿಖೆ ನಡೆಸುತ್ತಿದ್ದು, ಎಲ್ಲ ಮಾಹಿತಿಯನ್ನು ಕಲೆ ಹಾಕುತ್ತಿದೆ.

# ಶವ ಬಾವಿಯಲ್ಲಿ ಪತ್ತೆ: ವಿದ್ಯಾರ್ಥಿ ನೀರುಪಾಲು

ರಾಯಚೂರು/ವಿಜಯಪುರ: ರಾಯಚೂರು ಜಿಲ್ಲೆಯ ಲಿಂಗಸೂಗೂರು ತಾಲೂಕಿನ ಐದನಾಳ ಗ್ರಾಮದ ಹೊರವಲಯದ ಬಾವಿಯಲ್ಲಿ ಯುವಕನ ಶವ ದೊರೆತಿದೆ. ಗಣೇಶ ಮಾನಪ್ಪ ಸೋಮಲಾಪುರ (21) ಮೃತಪಟ್ಟ ಯುವಕನೆಂದು ಗುರುತಿಸಲಾಗಿದೆ.

ಲಿಂಗಸೂಗೂರು ಪೊಲೀಸರು ಸ್ಥಳಕ್ಕೆ ಆಗಮಿಸಿ, ಮೃತದೇಹವನ್ನು ಬಾವಿಯಿಂದ ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಲಿಂಗಸೂಗೂರು ಸರ್ಕಾರಿ ಆಸ್ಪತ್ರೆಗೆ ರವಾನಿಸಿದ್ದಾರೆ. ಮಗ ಮೃತಪಟ್ಟ ವಿಷಯ ತಿಳಿದು ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಸಾವಿನ ಕುರಿತು ಸಂಶಯ ವ್ಯಕ್ತಪಡಿಸಲಾಗಿದೆ.

ಲಿಂಗಸೂಗೂರು ಪೊಲೀಸರು ಸ್ಥಳಕ್ಕೆ ಆಗಮಿಸಿ, ಮೃತದೇಹವನ್ನು ಬಾವಿಯಿಂದ ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಲಿಂಗಸೂಗೂರು ಸರ್ಕಾರಿ ಆಸ್ಪತ್ರೆಗೆ ರವಾನಿಸಿದ್ದಾರೆ. ಮಗ ಮೃತಪಟ್ಟ ವಿಷಯ ತಿಳಿದು ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಸಾವಿನ ಕುರಿತು ಸಂಶಯ ವ್ಯಕ್ತಪಡಿಸಲಾಗಿದೆ.



ಈ ಕುರಿತು ದೂರವಾಣಿ ಮೂಲಕ ಲಿಂಗಸೂಗೂರು ಪೊಲೀಸರನ್ನು ಸಂಪರ್ಕಿಸಿದಾಗ, ಬಾವಿಯಲ್ಲಿ ಯುವಕ ಮೃತಪಟ್ಟಿದ್ದಾನೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಕುಟುಂಬಸ್ಥರು ನೀಡುವ ದೂರಿನ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ದುರುದ್ದೇಶ ಪೂರಕವಾಗಿ ರಾತ್ರಿ 9 ಗಂಟೆಯ ಸುಮಾರಿಗೆ ಯುವಕನನ್ನು ಮನೆಯಿಂದ ಹೊರಗಡೆ ಕರೆದುಕೊಂಡು ಬಂದು ಪಾರ್ಟಿ ಮಾಡಿ ಬಳಿಕ ಬಾವಿಗೆ ತಳ್ಳಿ ಕೊಲೆ ಮಾಡಿದ್ದಾರೆ ಎಂದು ಮೃತನ ಕುಟುಂಬಸ್ಥರು ಲಿಂಗಸೂಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು, ತನಿಖೆ ಮುಂದುವರೆಸಿದ್ದಾರೆ.

ವಿಜಯಪುರದಲ್ಲಿ ಈಜಲು ಹೋದ ವಿದ್ಯಾರ್ಥಿ ನೀರುಪಾಲು: ವಿಜಯಪುರ ನಗರದ ಬೇಗಂ ತಲಾಬ್‌ನಲ್ಲಿ ಗೆಳೆಯರೊಂದಿಗೆ ಈಜಲು ಹೋಗಿದ್ದ ಯುವಕ ನೀರುಪಾಲಾಗಿದ್ದಾನೆ. ಹವೇಲಿ ನಿವಾಸಿ ಅನಿರುದ್ಧ ಕಲ್ಯಾಣಕುಮಾರ ಸಾಮ್ರಾಣಿ (20) ನೀರುಪಾಲಾದ ಯುವಕ.

ರಜೆ ಹಿನ್ನೆಲೆಯಲ್ಲಿ ತನ್ನ ಇಬ್ಬರು ಗೆಳೆಯರು ಹಾಗೂ ತನ್ನ ಸಹೋದರ ಅನಿಕೇತ ಜೊತೆ ಸೇರಿ ಬೇಗಂ ತಲಾಬ್‌ಗೆ ಅನಿರುದ್ಧ ಹೋಗಿದ್ದರು. ಈ ವೇಳೆ ಬೇಗಂ ತಲಾಬ್‌ನಲ್ಲಿ ಈಜಲು ಇಳಿದಾದ ನೀರುಪಾಲಾಗಿದ್ದಾರೆ. ಸ್ನೇಹಿತರು ಮತ್ತು ಸಹೋದರ ಬೇಡ ಅಂದರೂ ಈಜಲು ತೆರಳಿದ್ದರು ಎಂದು ತಿಳಿದುಬಂದಿದೆ.

ಸ್ಥಳಕ್ಕೆ ಅಗ್ನಿಶಾಮಕ ಅಧಿಕಾರಿಗಳು ಭೇಟಿ ನೀಡಿ, ಪತ್ತೆಗೆ ಶೋಧ ಕಾರ್ಯ ಆರಂಭಿಸಿದ್ದಾರೆ. ಜಲನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಡಾ.ಮನಮೋಹನ್ ಸಿಂಗ್ ಅವರ ಜೊತೆ ನಾನೂ ರಾಜ್ಯಸಭಾ ಸದಸ್ಯನಾಗಿದ್ದೆ

ಬೆಳಗಾವಿ: "ದೇಶ ಕಂಡ ಮುತ್ಸದ್ಧಿ ಪ್ರಧಾನಿ, ಶ್ರೇಷ್ಠ ಆರ್ಥಿಕ ತಜ್ಞ, ಉದಾರೀಕರಣದ ಹರಿಕಾರರಾಗಿದ್ದ ಡಾ.ಮನಮೋಹನ್ ಸಿಂಗ್ ಅವರ ಅಗಲಿಕೆ ದೇಶವಷ್ಟೇ ಅಲ್ಲದೇ ಜಗತ್ತಿಗೆ ದೊಡ್ಡ ನಷ್ಟ" ಎಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ.ಪ್ರಭಾಕರ ಕೋರೆ ತೀವ್ರ ಸಂತಾಪ ಸೂಚಿಸಿದರು.

ಈಟಿವಿ ಭಾರತ್ ಜೊತೆಗೆ ಮಾತನಾಡಿದ ಡಾ.ಕೋರೆ, "ನಾನು 1990ರಲ್ಲಿ ಮೊದಲ ಬಾರಿ ರಾಜ್ಯಸಭಾ ಸದಸ್ಯನಾಗಿದ್ದೆ. ಆಗ 1991ರಲ್ಲಿ ದೇಶದಲ್ಲಿ ಪಿ.ವಿ.ನರಸಿಂಹರಾವ್ ಪ್ರಧಾನಮಂತ್ರಿಯಾದರು. ಈ ವೇಳೆ ನರಸಿಂಹರಾವ್, ವಿಶ್ವ ಬ್ಯಾಂಕ್‌ನಲ್ಲಿ ಕೆಲಸ ಮಾಡುತ್ತಿದ್ದ ಡಾ.ಮನಮೋಹನ್ ಸಿಂಗ್ ಅವರನ್ನು ರಾಜೀನಾಮೆ ಕೊಡಿಸಿ ಕರೆದುಕೊಂಡು ಬಂದು ತಮ್ಮ ಸಂಪುಟಕ್ಕೆ ಸೇರಿಸಿಕೊಂಡರು. ಕೇಂದ್ರದ ಹಣಕಾಸು ಸಚಿವರನ್ನಾಗಿ ಮಾಡಿದರು. ಮುಂದೆ ರಾಜ್ಯಸಭಾ ಸದಸ್ಯರನ್ನಾಗಿ ಮಾಡಿದ್ದರು. ಈ ವ್ಯಕ್ತಿ ಮಾತು ಕಡಿಮೆ, ಕೃತಿಗೆ ಹೆಚ್ಚು ಪ್ರಾಮುಖ್ಯತೆ ಕೊಡುತ್ತಿದ್ದರು. ಸೌಮ್ಯ ಸ್ವಭಾವ ಅವರದ್ದಾಗಿತ್ತು" ಎಂದು ನೆನಪಿಸಿಕೊಂಡರು.

"ಇಬ್ಬರೂ ರಾಜ್ಯಸಭಾ ಸದಸ್ಯರಾಗಿದ್ದರಿಂದ ನಾನು ಅವರನ್ನು ಅನೇಕ ಬಾರಿ ಭೇಟಿಯಾಗಿದ್ದೆ. ಒಮ್ಮೆ ಇಚಲಕರಂಜಿಯಲ್ಲಿ ಸ್ಪಿನ್ನಿಂಗ್ ಮಿಲ್ ಉದ್ಘಾಟನೆಗೆ ಅವರನ್ನು ಕರೆದುಕೊಂಡು ಬಂದಿದ್ದೆ. ಆಗ ಕೆಎ ಆಸ್ಪತ್ರೆ ಕಟ್ಟಡ ಕೆಲಸ ನಡೆಯುತ್ತಿತ್ತು. ಇದನ್ನು ನೋಡಿ ಅವರು ತುಂಬಾ ಖುಷಿಪಟ್ಟಿದ್ದರು. ನಮ್ಮ ದೇಶದಲ್ಲಿ ಇನ್ನೂ ಹೆಚ್ಚು ಮೆಡಿಕಲ್ ಕಾಲೇಜುಗಳ ಅಗತ್ಯತೆಯಿದೆ. ಎಲ್ಲವನ್ನೂ ಸರ್ಕಾರ ಮಾಡಲು ಸಾಧ್ಯವಾಗುವುದಿಲ್ಲ. ಅದಕ್ಕಾಗಿ ಆಸ್ಪತ್ರೆ ನಿರ್ಮಾಣಕ್ಕೆ ಇಂಥ ಖಾಸಗಿ ಸಂಸ್ಥೆಗಳು ಮುಂದೆ ಬರಬೇಕು" ಎಂದು ಅಭಿಪ್ರಾಯಪಟ್ಟಿದ್ದರು ಎಂದು ಮೆಲುಕು ಹಾಕಿದರು.

"1991ರ ಕಾಲಘಟ್ಟದಲ್ಲಿ ದೇಶದಲ್ಲಿ ಆರ್ಥಿಕ ಪರಿಸ್ಥಿತಿ ತುಂಬಾ ಹದಗೆಟ್ಟಿತ್ತು. ಆ ಸಂದರ್ಭದಲ್ಲಿ ಅಂದಿನ ಪ್ರಧಾನಿ ಪಿ.ವಿ.ನರಸಿಂಹರಾವ್ ಅವರು ಡಾ.ಮನಮೋಹನ್ ಸಿಂಗ್ ಅವರಿಗೆ ಮುಕ್ತವಾಗಿ ಕೆಲಸ ಮಾಡಲು ಅವಕಾಶಕೊಟ್ಟರು. ಸರ್ಕಾರದ ಬಳಿ ಇದ್ದ ಬಂಗಾರವನ್ನು ಒತ್ತೆ ಇಟ್ಟು ದುಡ್ಡು ತರಿಸಿಕೊಳ್ಳುವ ಪರಿಸ್ಥಿತಿಯಿತ್ತು. ಆಗ ಸಿಂಗ್ ಅವರು ಜಾರಿಗೆ ತಂದ ವಿದೇಶಿ ನೇರ ಬಂಡವಾಳ ಹೂಡಿಕೆ, ಲೈಸೆನ್ಸ್ ರಾಜ್ ತೆಗೆದುಹಾಕುವುದೂ ಸೇರಿದಂತೆ ಅನೇಕ ಆರ್ಥಿಕ ಧೋರಣೆಗಳು ದೇಶವನ್ನು ಪುನಶ್ಚೇತನಗೊಳಿಸುವಲ್ಲಿ ಮಹತ್ವದ ಪಾತ್ರವಹಿಸಿದ್ದವು. ಈ ನೀತಿಗಳಿಂದಾಗಿ ಅವರನ್ನು ಅನೇಕರು ಟೀಕಿಸಿದರು. ಇದ್ಯಾವುದಕ್ಕೂ ತಲೆಕೆಡಿಸಿಕೊಳ್ಳದೇ ದಿಟ್ಟ ನಿರ್ಧಾರ ಕೈಗೊಂಡ ಪರಿಣಾಮ ಇಂದು ಭಾರತ ಆರ್ಥಿಕತೆಯಲ್ಲಿ ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಲು ಸಾಧ್ಯವಾಯಿತು" ಎಂದು ಕೋರೆ ಹೇಳಿದರು.

"ಡಾ.ಮನಮೋಹನ್ ಸಿಂಗ್ ಅವರು ಎರಡು ಬಾರಿ ದೇಶದ ಪ್ರಧಾನಮಂತ್ರಿಯಾದರೂ ಕೂಡ ಯಾವ ವಿಷಯದ ಮೇಲೂ ಯಾರೂ ಬೊಟ್ಟು ಮಾಡುವಂತೆ ನಡೆದುಕೊಂಡವರಲ್ಲ. ರಾಜಕೀಯ ಬದ್ಧತೆಯನ್ನು ಎತ್ತಿಹಿಡಿದಿದ್ದ ಅಪರೂಪದ ವ್ಯಕ್ತಿಯಾಗಿದ್ದರು. ಜಗತ್ತಿನ ಶ್ರೇಷ್ಠ ಆರ್ಥಿಕ ತಜ್ಞನ ಕಳೆದುಕೊಂಡು ಭಾರತ ಬಡವಾಗಿದೆ. ಅತ್ಯಂತ ಕಡು ಬಡತನದಿಂದ ಬಂದಿದ್ದ ಅವರು, ಶಾಲೆ ಕಲಿಯಲು ತುಂಬಾ ಕಷ್ಟಪಟ್ಟಿದ್ದರು. ಆರಂಭದಲ್ಲಿ ಶಿಕ್ಷಕರಾಗಿ ಕೆಲಸ ಮಾಡಿದ ವ್ಯಕ್ತಿ ತಮ್ಮಲ್ಲಿನ ಜ್ಞಾನದಿಂದ ದೇಶದ ಪ್ರಧಾನಮಂತ್ರಿ ಆಗಿದ್ದರು. ಮುಂದುವರೆದ ದೇಶಗಳೂ ಕೂಡ ಅವರ ಸಲಹೆಗಳನ್ನು ಪಡೆಯುತ್ತಿದ್ದವು ಎಂದರೆ ಅವರ ಸಾಮರ್ಥ್ಯ ಎಂಥದ್ದು ಎಂಬುದನ್ನು ಅರಿಯಬೇಕಿದೆ" ಎಂದರು.

"ಇಡೀ ದೇಶದಲ್ಲಿ ಖಾಸಗೀಕರಣ, ಉದಾರೀಕರಣ ನೀತಿ ಜಾರಿಗೆ ತಂದ ಶ್ರೇಯಸ್ಸು ಡಾ.ಸಿಂಗ್ ಅವರಿಗೆ ಸಲ್ಲುತ್ತದೆ. ಅವರ ಸೇವೆ ಅನುಪಮ. ಅಂತಹ ಘನತೆವೆತ್ತ ಪ್ರಧಾನಿ ಇಂದಿನ ಯುವ ಜನಾಂಗಕ್ಕೆ ಹಾಗೂ ಯುವ ಜನಪ್ರತಿನಿಧಿಗಳಿಗೆ ಮಾದರಿಯಾಗಿದ್ದಾರೆ. ಭಗವಂತನು ಅವರ ದಿವ್ಯಾತ್ಮಕ್ಕೆ ಚಿರಶಾಂತಿಯನ್ನು ನೀಡಿ, ಅವರ ಕುಟುಂಬಕ್ಕೆ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿ ಕರುಣಿಸಲಿ" ಎಂದು ಪ್ರಾರ್ಥಿಸಿದರು.

# ಡ್ರಗ್ಸ್ ಜಪ್ತಿಯಾದ 48 ಗಂಟೆಯೊಳಗೆ ಕೋರ್ಟ್‌ಗೆ ಪಂಚನಾಮೆ ವರದಿ

**ಬೆಂಗಳೂರು:** ಮಾದಕವಸ್ತುಗಳು ಹಾಗೂ ಅಮಲು ಪದಾರ್ಥಗಳ ನಿಯಂತ್ರಣ ಕಾಯ್ದೆಯಡಿ (ಎನ್‌ಡಿಪಿಎಸ್) ದಾಳಿ ನಡೆಸುವಾಗ ಹಾಗೂ ಶಂಕಿತರ ಬಂಧನದ ವೇಳೆ ಪೊಲೀಸರ ವಿರುದ್ಧವೇ ಆರೋಪಗಳು ಕೇಳಿ ಬರುತ್ತಿರುವ ಹಿನ್ನೆಲೆಯಲ್ಲಿ ಇದನ್ನು ತಡೆಗಟ್ಟಲು ರಾಜ್ಯ ಪೊಲೀಸ್ ಇಲಾಖೆ ಪ್ರತ್ಯೇಕ ಮಾರ್ಗಸೂಚಿ ಹೊರಡಿಸಿದೆ.

ಡ್ರಗ್ಸ್ ಪ್ರಕರಣದಲ್ಲಿ ದಾಳಿಗೂ ಮುನ್ನ, ದಾಳಿ ವೇಳೆ ಹಾಗೂ ದಾಳಿ ನಂತರ ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ರಾಜ್ಯ ಪೊಲೀಸ್ ಇಲಾಖೆಯ ಮಹಾನಿರ್ದೇಶಕ ಡಾ.ಅಲೋಕ್ ಮೋಹನ್ ಮಾರ್ಗಸೂಚಿ ಹೊರಡಿಸಿದ್ದಾರೆ.

ಮಾದಕವಸ್ತು ಜಪ್ತಿಯಾದ 48 ಗಂಟೆಯೊಳಗೆ ನ್ಯಾಯಾಲಯಕ್ಕೆ ಪಂಚನಾಮೆ ವರದಿ ಸಲ್ಲಿಸಬೇಕು. ಇದರಲ್ಲಿ ಫೋಟೋ ಹಾಗೂ ವಿಡಿಯೋಗ್ರಾಫಿ ಕಡ್ಡಾಯವಾಗಿ ನಮೂದಿಸಬೇಕೆಂದು ಹೇಳಿದೆ.

ಬೆಂಗಳೂರು ಮಾತ್ರವಲ್ಲದೇ ರಾಜ್ಯದಲ್ಲಿ ಆಫ್ರಿಕಾ ಮೂಲದ ಪ್ರಜೆಗಳು ನಿರಂತರವಾಗಿ ಡ್ರಗ್ಸ್ ದಂಧೆಯಲ್ಲಿ ನಿರತರಾಗಿದ್ದಾರೆ. ಮಾಹಿತಿ ಪ್ರಕಾರ, ವರ್ಷಕ್ಕೆ ಎನ್‌ಡಿಪಿಎಸ್ ಕಾಯ್ದೆಯಡಿ 1 ಸಾವಿರಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗುತ್ತಿವೆ. ಅವ್ಯಾಹತವಾಗಿ ದಂಧೆಯಲ್ಲಿ ತೊಡಗಿರುವ ಜಾಲ ವ್ಯಾಪಕವಾಗಿದ್ದು, ಇವರನ್ನು ಮಟ್ಟಹಾಕಲು ಕಟ್ಟುನಿಟ್ಟಿನ ಮಾರ್ಗಸೂಚಿ ಹೊರಡಿಸಲಾಗಿದೆ.

ದಾಳಿ ಪೂರ್ವದಲ್ಲಿ ಏನು ಮಾಡಬೇಕು?: ಘಟನಾ ಸ್ಥಳಕ್ಕೆ ತೆರಳುವ ಮುನ್ನ ಡೈರಿಯಲ್ಲಿ ಅನುಮತಿ ಪಡೆದಿರುವ ಬಗ್ಗೆ ದಾಳಿ ಮಾಡಲು ಶೋಧನಾ ವಾರೆಂಟ್ ಪಡೆದಿದ್ದರೆ ಅಥವಾ ಪಡೆಯದಿದ್ದರ ಬಗ್ಗೆ ನಮೂದಿಸಬೇಕು.

ದಾಳಿ ಮಾಡಿದ ಅಧಿಕಾರಿ ಅಧಿಕೃತವಾಗಿ ರಿವಾಲ್ವರ್ ಇಟ್ಟುಕೊಂಡಿರಬೇಕು.

ಮಾಹಿತಿ ದೊರೆತ 72 ಗಂಟೆಗಳ ಒಳಗಾಗಿ ಲಿಖಿತ ರೂಪದಲ್ಲಿ ಮಾಹಿತಿ ನೀಡಿ ಮೇಲಾಧಿಕಾರಿಗಳಿಂದ ಅನುಮತಿ ಪಡೆಯಬೇಕು. ಶೋಧ ನಡೆಸಬೇಕಾದ ಸ್ಥಳ, ಯಾವ ರೀತಿ ಮಾಹಿತಿ ಸಿಕ್ಕಿದೆ ಎಂಬುದೂ ಒಳಗೊಂಡಂತೆ ಪೂರ್ಣ ವಿವರವನ್ನು ಡೈರಿಯಲ್ಲಿ ನಮೂದಿಸಬೇಕು.

**ದಾಳಿ ವೇಳೆ ಪೊಲೀಸರು ಮಾಡಬೇಕಿರುವುದೇನು:** ಸರ್ಚ್ ವಾರೆಂಟ್ ತೋರಿಸಿ ದಾಳಿ ಮಾಡಬೇಕು. ದಾಳಿ ವೇಳೆ ತಮ್ಮ ಬಳಿ ಮಾದಕವಸ್ತುಗಳು ಇಲ್ಲವೆಂಬುದನ್ನು ಅಧಿಕಾರಿ ಹಾಗೂ ಸಿಬ್ಬಂದಿ ಖಚಿತಪಡಿಸಿಕೊಳ್ಳಬೇಕು. ದಾಳಿ ಆರಂಭದಿಂದ ಮಹಜರು ಪ್ರಕ್ರಿಯೆಯನ್ನು ಮುಗಿಸಿ ಮಹಜರು ಸಾಕ್ಷಿದಾರರ ಸಹಿ ಪಡೆಯುವವರೆಗೂ ಆಡಿಯೋ–ವಿಡಿಯೋ ಮಾಡುವುದು ಕಡ್ಡಾಯ.

ಆರೋಪಿಗಳ ಮೊಬೈಲ್‌ನಲ್ಲಿರುವ ಡೇಟಾ ಹಾಗೂ ಇತರೆ ಸಾಕ್ಷ್ಯಗಳ ಪರಿಶೀಲನೆದಾಳಿ ನಂತರ ಮಾಡಬೇಕಾಗಿರುವುದು ಏನು?: ಶೋಧ ಕಾರ್ಯ ಮುಗಿದ ಬಳಿದ ದಾಳಿ ಸಂಪೂರ್ಣ ಪ್ರಕ್ರಿಯೆಯನ್ನು ಸಂಬಂಧಿಸಿದ ಪೊಲೀಸ್ ಅಧೀಕ್ಷಕರಿಗೆ 48 ಗಂಟೆಯೊಳಗೆ ವರದಿ ಮಾಡಬೇಕು

ನ್ಯಾಯಾಲಯದ ಆದೇಶದವರೆಗೆ ಠಾಣಾಧಿಕಾರಿಯೇ ಜಪ್ತಿಯಾದ ವಸ್ತುಗಳನ್ನು ರಕ್ಷಿಸಬೇಕು. ಪರಿಶೀಲನೆ ಮುಕ್ತಾಯ ಬಳಿಕ ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಬೇಕು. ಎಷ್ಟೋ ವೇಳೆ ಶಂಕಿತರನ್ನು ಪೊಲೀಸರು ವಶಕ್ಕೆ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸದೆ ತಮ್ಮ ಕಸ್ಟಡಿಯಲ್ಲಿ ಇಟ್ಟುಕೊಳ್ಳುವುದು, ಜಪ್ತಿ ಮಾಡಲಾದ ಮಾದಕವಸ್ತುಗಳನ್ನು ನ್ಯಾಯಾಲಯಕ್ಕೆ ತಿಳಿಸದೆ ದುರ್ಬಳಕೆ ಹಾಗೂ ಪ್ರಭಾವಿಗಳ ಒತ್ತಡಕ್ಕೆ ಮಣಿದು ಬಂಧಿಸದೆ ಬಿಟ್ಟು ಕಳುಹಿಸುವುದನ್ನು ತಡೆಯಲು ಈ ಮಾರ್ಗಸೂಚಿಗಳು ನೆರವಿಗೆ ಬರಲಿದೆ.

# ‘ವಿದ್ಯಾರ್ಥಿಗಳ ದೈಹಿಕ ಹಾಗೂ ಮಾನಸಿಕ ಸದೃಡತೆಗೆ ಕ್ರೀಡೆಗಳು ಸಹಕಾರಿ’

**ಚಾಮರಾಜನಗರ:** ವಿದ್ಯಾರ್ಥಿಗಳು ದೈಹಿಕವಾಗಿ ಹಾಗೂ ಮಾನಸಿಕವಾಗಿ ಸದೃಢವಾಗಲು ಕ್ರೀಡೆ ಅತ್ಯಗತ್ಯವಾಗಿದೆ ಎಂದು ಕೇಂದ್ರ ಪರಿಹಾರ ಸಮಿತಿ ನಿಕಟ ಪೂರ್ವರಾಜ್ಯಾಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಎಂ.ರಾಮಚಂದ್ರು ಅವರು ತಿಳಿಸಿದರು.

ಚಾಮರಾಜನಗರ ಜಿಲ್ಲಾ ನೆಟ್ಬಾಲ್ ಅಸೋಸಿಯೇಷನ್ ವತಿಯಿಂದ ನಗರದ ಡಾ.ಬಿ.ಆರ್.ಅಂಬೇಡ್ಕರ್‌ಜಿಲ್ಲಾಕ್ರೀಡಾಂಗಣದಲ್ಲಿ ಶುಕ್ರವಾರಆಯೋಜಿಸಲಾಗಿದ್ದ 6ನೇ ರಾಜ್ಯ ಮಟ್ಟದ 19 ವರ್ಷದೊಳಗಿನ ನೆಟ್ಬಾಲ್ ಪಂದ್ಯಾವಳಿ 2024ರ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ನಂತರಕ್ರೀಡೆಯಲ್ಲಿ ಗೆಲುವು ಸಾಧಿಸಿದ ವಿದ್ಯಾಥಿಗಳ ತಂಡಕ್ಕೆ ಬಹುಮಾನವನ್ನುವಿತರಿಸಿ ಮಾತನಾಡಿದರು.

ನೆಟ್ಬಾಲ್ ಪಂದ್ಯಾವಳಿಗೆ ರಾಜ್ಯದಎಲ್ಲಾಜಿಲ್ಲೆಯ ಕ್ರೀಡಾಪಟುಗಳು ಪಾಲ್ಗೊಳ್ಳುವ ಮೂಲಕ ಕ್ರೀಡೆಯಲ್ಲಿಉತ್ತಮ ಪ್ರದರ್ಶನ ನೀಡಿದ್ದೀರಿ. ಕ್ರೀಡಾಪಟುಗಳು ಸೋಲು ಹಾಗೂ ಗೆಲುವನ್ನು ಸಮಾನಾಂತರವಾಗಿ ಸ್ವೀಕರಿಸಬೇಕು ಸೋತಾಗಕುಗ್ಗದೆ, ಗೆದ್ದಾಗ ಹಿಗ್ಗಬಾರದುಎಂದು ಕಿವಿಮಾತು ಹೇಳಿದರು. ವಿದ್ಯಾರ್ಥಿಗಳು ಓದಿನ ಜೊತೆಗೆಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು. ಇದರಿಂದ ಮುಂದಿನ ಭವಿಷ್ಯಉಜ್ವಲವಾಗಲು ಸಹಕಾರಿಯಾಗಲಿದೆಎಂದಅವರು, ನಮ್ಮಜಿಲ್ಲೆಯ ಕ್ರೀಡಾಪಟುಗಳು ರಾಜ್ಯ ಮತ್ತುರಾಷ್ಟಮಟ್ಟದಲ್ಲೂತಮ್ಮಅದ್ಭುತ ಪ್ರದರ್ಶನ ನೀಡುವ ಮೂಲಕ ಉತ್ತಮ ಹೆಸರು ಗಳಿಸುತ್ತಿರುವುದು ಹೆಮ್ಮೆಯ ವಿಚಾರಎಂದು ಸಂತಸ ವ್ಯಕ್ತಪಡಿಸಿದರು.

ನಂತರಕ್ರೀಡೆಯಲ್ಲಿ ಗೆಲುವು ಸಾಧಿಸಿದ ವಿದ್ಯಾಥಿಗಳ ತಂಡಕ್ಕೆ ಬಹುಮಾನವನ್ನು ವಿತರಿಸಿದರು.

ಅಸೋಸಿಯೇಷನ್ನ ಗೌರವಾಧ್ಯಕ್ಷ ಶ್ರೀಮತಿ ನರ್ಗೀಸ್ಬಾನುಅವರು ಮಾತನಾಡಿ, ನಮ್ಮ ಅಸೋಸಿಯೇಷನ್ ಪ್ರಾರಂಭವಾದ ವರ್ಷದೊಳಗೆ ಇಂತಹಅವಕಾಶವನ್ನು ನಮಗೆ ರಾಜ್ಯಅಮೆಚೂರ್ ನೆಟ್ಬಾಲ್ ಅಸೋಸಿಯೇಷನ್ ನಮಗೆ ಕಲ್ಪಿಸಿರುವುದು ನಮಗೆ ಸಂತೋಷದ ವಿಚಾರಎಂದರು.

ಒಂದುಕಾರ್ಯಕ್ರಮ ಯಶಸ್ವಿಯಾಗಬೇಕಾದರೆ ಎಲ್ಲರ ಸಹಕಾರಅತ್ಯಗತ್ಯವಾಗಿದೆ.ನಮ್ಮ ಪಂದ್ಯಾವಳಿ ಯಶಸ್ವಿಯಾಗಿರುವುದಕ್ಕೆ ಹಲವರು ದಾನಿಗಳ ಸಹಾಯ ಹಾಗೂ ಸಹಕಾರಕ್ಕೆಧನ್ಯವಾದವನ್ನು ತಿಳಿಸಿದರು.

ವಿದ್ಯಾರ್ಥಿಗಳು ಪಂದ್ಯಾವಳಿಯಲ್ಲಿ ಭಾಗವಹಿಸುವುದು ಬಹಳ ಮುಖ್ಯವಾಗುತ್ತದೆ. ಗೆಲುವು ಸಂತೋಷಕೊಡುತ್ತದೆ.ಸೋಲು ಪಾಠ ಕಲಿಸುತ್ತದೆ. ಎಲ್ಲಿಎಡವಿದ್ದೇವೆಎಂಬುದನ್ನು ಸರಿಪಡಿಸಿಕೊಳ್ಳಲು ಸಹಕಾರಿಯಾಗುತ್ತದೆ.ಸೋಲೆ ಗೆಲುವಿನ ಸೋಪಾನ ಎಂಬಂತೆ ಸೋತವರು ಬೇಸರಪಟ್ಟು ಕೊಳ್ಳಬಾರದು ಕ್ರೀಡೆಯಲ್ಲಿ ತಾಳ್ಮೆ ಅಗತ್ಯಎಂದರು.




ಅಧ್ಯಕ್ಷತೆ ವಹಿಸಿ ಮಾತನಾಡಿದ ಅಸೋಸಿಯೇಷನ್ ಅಧ್ಯಕ್ಷರಾದ ವಿ.ಶ್ರೀನಿವಾಸ ಪ್ರಸಾದ್ ಮಾತನಾಡಿ, ಕಳೆದ ಎರಡು ತಿಂಗಳುಗಳ ನಿರಂತರ ಪ್ರಯತ್ನದಿಂದಾಗಿಇಂದ ಕಾರ್ಯಕ್ರಮ ಯಶಸ್ವಿಯಾಗಿ ನಡೆದಿದೆಎಂದರು.

ವಿದ್ಯಾರ್ಥಿಗಳಿಗೆ ಶಿಕ್ಷಣದ ಗುಣಮಟ್ಟ ಹೆಚ್ಚಾಗಿರಬೇಕು.ಶಿಕ್ಷಣದ ಜೊತೆಜೊತೆಗೆಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಸಹ ಅತ್ಯಗತ್ಯವಾಗಿದೆಎಂದರು.

16 ಬಾಲಕರತಂಡ, 12 ಬಾಲಕಿಯರತಂಡದ ಪೈಕಿ ಬಾಲಕಿಯರತಂಡದಲ್ಲಿ ಪ್ರಥಮ ಸ್ಥಾನವನ್ನುಚಾಮರಾಜನಗರದ ಬಾಲಕಿಯರತಂಡ ಪಡೆದುಕೊಂಡಿತು. ದ್ವಿತೀಯ ಸ್ಥಾನವನ್ನು ಹಾಸನ, ತೃತೀಯ ಸ್ಥಾನವನ್ನು ಬೆಂಗಳೂರು ನಗರ ಹಾಗೂ ದಾವಣಗೆರೆತೃತೀಯ ಸ್ಥಾನ ಪಡೆದುಕೊಂಡಿದೆ

ಬಾಲಕರ ವಿಭಾಗದಲ್ಲಿ ಹಾಸನ ಜಿಲ್ಲೆಯ ಬಾಲಕರತಂಡ ಪ್ರಥಮ ಸ್ಥಾನ, ಸಮಬಲದ ಹೋರಾಟ ಮಾಡುವ ಮೂಲಕ ದ್ವಿತೀಯ ಸ್ಥಾನವನ್ನುಚಾಮರಾಜನಗರದ ಬಾಲಕರಜಿಲ್ಲಾತಂಡ ಪಡೆದಿದ್ದು, ತೃತೀಯ ಸ್ಥಾನವನ್ನು ಬೆಂಗಳೂರು ನಗರ ಹಾಗೂ ದಕ್ಷಿಣಕನ್ನಡಜಿಲ್ಲೆಜಂಟಿತೃತೀಯ ಸ್ಥಾನವನು ಪಡೆದುಕೊಂಡಿದೆ.

ಇದೇವೇಳೆ ಗುರುವಾರರಾತ್ರಿ ನಿಧನರಾದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರಗೌರವಾರ್ಥಒಂದು ನಿಮಿಷ ಮೌನಾಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿರಾಜ್ಯ ನೆಟ್ಬಾಲ್ ಅಸೋಸಿಯೇಷನ್ನ ಕಾರ್ಯದರ್ಶಿ ಸಿ.ಗಿರೀಶ್, ರಾಜ್ಯಉಪಾಧ್ಯಕ್ಷ ಅನಿಲ್, ರಾಜ್ಯಖಜಾಂಚಿ ವಿಶ್ವನಾಥ್ ಎ.ಸಿ., ಭಾರತತಂಡದ ನೆಟ್ಬಾಲ್‌ಆಟಗಾರ್ತಿ ಸುರಭಿ, ಮೈಸೂರು ನೆಟ್ಬಾಲ್ ಅಸೋಸಿಯೇಷನ್ನ ಕಾರ್ಯದರ್ಶಿ ಲೋಕೇಶ್, ಗೌರವ ಸಲಹೆಗಾರರಾದಅಲಿಖಾನ್ ಸಾಹೇಬ್, ಜಿಲ್ಲಾ ಖೋ ಖೋ ಅಸೋಸಿಯೇಷನ್ನ ಅಧ್ಯಕ್ಷರಾದ ಶಮಿತ್ಕುಮಾರ್, ಹಿರಿಯಕ್ರೀಡಾಪಟು ಶ್ರೀನಿವಾಸಗೌಡ, ಆರ್.ಕೃಷ್ಣಮೂರ್ತಿ, ಜಿಲ್ಲಾ ನೆಟ್ಬಾಲ್ ಅಸೋಸಿಯೇಷನ್ನ ಉಪಾಧ್ಯಕ್ಷರಾದರಾಜೇಂದ್ರ ಸಿ., ಪ್ರಧಾನ ಕಾರ್ಯದರ್ಶಿ ಮಹದೇವಪ್ರಸಾದ್ ಬಿ., ಸಹ ಕಾರ್ಯದರ್ಶಿ ಸುರೇಶ್ಕುಮಾರ್ ಜಿ., ಖಜಾಂಚಿ ಎಂ.ಸಿ.ಮಹದೇವಸ್ವಾಮಿ, ಸಂಘಟನಾ ಕಾರ್ಯದರ್ಶಿ ಮಧುಕುಮಾರ್ ಸಿ.ಎಂ, ಸದಸ್ಯರಾದದುಂಡಯ್ಯ, ಮಂಜುನಾಥ್, ಅಕ್ಷಯ್ಸಿ.ಎಸ್, ಲೋಕೇಶ್, ನಾಗೇಂದ್ರ ಸಿ., ಶ್ರೀಧರ್, ಶಾಂತಕುಮಾರ್‌ಎಲ್., ಗಂಗಪ್ಪ ಮತ್ತಿತರರಿದ್ದರು.

# ಭ್ರಷ್ಟಾಚಾರ ಮುಕ್ತ ಕರ್ನಾಟಕಕ್ಕಾಗಿ ಜಾಗೃತಿ ಅಭಿಯಾನ

**ಶಿಡ್ಲಘಟ್ಟ:** ಭ್ರಷ್ಟಾಚಾರ ಮುಕ್ತ ಕರ್ನಾಟಕವನ್ನಾಗಿ ಹಲವಾರು ಜಾಗೃತಿ ಅಭಿಯಾನಗಳನ್ನು ಕೆ.ಆರ್.ಎಸ್. ಪಕ್ಷ ನಡೆಸುತ್ತಿದೆ ಎಂದು ಕೆ.ಆರ್.ಎಸ್. ಪಕ್ಷದ ದಕ್ಷಿಣ ಕನ್ನಡ ಜಿಲ್ಲಾಧ್ಯಕ್ಷ ವಿ.ವೇಣುಗೋಪಾಲ್ ತಿಳಿಸಿದರು.

ಕೆ.ಆರ್.ಎಸ್.ಪಕ್ಷದ ತಾಲ್ಲೂಕು ಘಟದ ಸ್ಥಾಪನೆಯ ನಂತರ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.ರಾಜಕಾರಣವನ್ನು ಸ್ವಚ್ಚ, ಪ್ರಾಮಾಣಿಕ ರೀತಿಯಲ್ಲಿ ನಡೆಸಬೇಕು ಎಂದು 2008 ರಿಂದ ಕರ್ನಾಟಕದ ರಾಜಕೀಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಹೋರಾಟ ಮಾಡುತ್ತಿರುವ ರವಿಕೃಷ್ಣಾರೆಡ್ಡಿಯವರ ನೇತೃತ್ವದಲ್ಲಿ ರಾಜ್ಯದೆಲ್ಲೆಡೆ ಕೆ.ಆರ್.ಎಸ್.ಪಕ್ಷದ ಘಟಕಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಹೇಳಿದರು.

ರಾಜ್ಯದ ಮತ್ತು ದೇಶದ ರಾಜಕೀಯದಲ್ಲಿ ಮೌಲ್ಯಗಳನ್ನುಆಗ್ರಹಿಸಿ ರಾಜಕಾರಣವನ್ನುಸ್ವಚ್ಚ, ಪ್ರಾಮಾಣಿಕ ರೀತಿಯಲ್ಲಿ ನಡೆಸಬೇಕು ಎಂದು 2008 ರಿಂದ ಕರ್ನಾಟಕದ ರಾಜಕೀಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಹೋರಾಟ ಮಾಡುತ್ತಿರುವ ರವಿಕೃಷ್ಣಾರೆಡ್ಡಿಯವರ ನೇತೃತ್ವದಲ್ಲಿ ರಾಜ್ಯದೆಲ್ಲೆಡೆ ಕೆ.ಆರ್.ಎಸ್.ಪಕ್ಷದ ಘಟಕಗಳನ್ನು ಸ್ಥಾಪಿಸಲಾಗುತ್ತಿದೆ ಎಂದರು.




ಚಿಕ್ಕಬಳ್ಳಾಪುರ ಜಿಲ್ಲಾ ಅಧ್ಯಕ್ಷ ಶಿವಾರೆಡ್ಡಿ ಮಾತನಾಡಿ, ನಮ್ಮ ತೆರಿಗೆಯಲ್ಲಿ ಸರ್ಕಾರ ಆಡಳಿತ ನಡೆಸುತ್ತಿದೆ ಲಂಚಮುಕ್ತ ಕರ್ನಾಟಕ ನಮ್ಮ ಪಕ್ಷ ಮಾಡಲಿದೆ.ಪ್ರಜೆಗಳು ರಾಜಕೀಯ ಪಕ್ಷಗಳ ಗುಲಾಮರಾಗಬಾರದು, ಅವುಗಳ ಮಾಲೀಕರಾಗಬೇಕು ಪ್ರಾದೇಶಿಕತೆ ಮತ್ತು ಒಕ್ಕೂಟ ವ್ಯವಸ್ಥೆಯ ಬಲವರ್ಧನೆ ಆಗಬೇಕು ಎಂಬ ಉದ್ದೇಶದಿಂದ ಪಕ್ಷವು ಕೆಲಸ ಮಾಡುತ್ತಿದೆ ಶಿಡ್ಲಘಟ್ಟ ತಾಲ್ಲೂಕಿನಲ್ಲಿಯೂ ಸರ್ಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡುವ ಉದ್ದೇಶದಿಂದ ತಾಲ್ಲೂಕು ಘಟಕ ಸ್ಥಾಪನೆ ಮಾಡಿರುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಕೆ.ಆರ್.ಎಸ್.ಪಕ್ಷದ ತಾಲ್ಲೂಕು ಘಟದ ಅಧ್ಯಕ್ಷ ಪಿಂಡಿಪಾಪನಹಳ್ಳಿ ವೇಣುಗೋಪಾಲ್, ಪ್ರ.ಕಾರ್ಯದರ್ಶಿ ಆರ್.ನಾರಾಯಣಸ್ವಾಮಿ, ಕಾರ್ಯದರ್ಶಿ ಗಳಾದ ಆನಂದಕುಮಾರ್, ನರಸಿಂಹಯ್ಯ, ರಾಜಶೇಖರ್,ವೆಂಕಟೇಶ್,ಸಂಘಟನಾ ಕಾರ್ಯದರ್ಶಿ ಶ್ರೀನಾಥ್ ಗೌಡ ಮುಂತಾದವರು ಹಾಜರಿದ್ದರು.

# ತಾಂತ್ರಿಕತೆ ಬಳಸಿಕೊಂಡು ಉತ್ತಮ ಬೆಳೆ ಬೆಳೆಯಿರಿ

**ಮುಳುಬಾಗಿಲು:** ಅಟಲ್ ಭೂ ಜಲ್ ಯೋಜನೆಯಿಂದ ಸರ್ಕಾರದಿಂದ ಬರುವ ಸವಲತ್ತುಗಳನ್ನು ಪಡೆದುಕೊಂಡು ತರಬೇತಿಯ ತಾಂತ್ರಿಕತೆಯನ್ನು ವ್ಯವಸಾಯದಲ್ಲಿ ಬಳಸಿಕೊಂಡು ಉತ್ತಮ ರೀತಿಯಲ್ಲಿ ಬೆಳೆಗಳನ್ನು ಬೆಳೆಯ ಬೇಕೆಂದು ಕೃಷಿ ಇಲಾಖೆ, ಉಪನಿರ್ದೇಶಕರಾದ ನಾಗರಾಜ್ ರೈತರಿಗೆ ತಿಳಿಸಿದರು. ಬೈರಕೂರುನಲ್ಲಿ ನಡೆದ ಅಟಲ್ ಭೂಜಲ್ ಯೋಜನೆಯ ತಾಂತ್ರಿಕ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಮಾತನಾಡಿದರು ತಾಲೂಕಿನ ಅಟಲ್ ಬುಜಲ್ ಯೋಜನೆಯನು ರೈತರ ಸದ್ಬಳಕೆ ಮಾಡಿಕೊಂಡು ಉನ್ನತ ಮಟ್ಟದ ಬೆಳೆಗಳನ್ನು ಬೆಳೆಯುವುದರಲ್ಲಿ ಯಶಸ್ವಿಯಾಗಿದ್ದಾರೆ ಎಲ್ಲ ರೈತರು ಇದರ ಸದುಪಯೋಗ ಪಡೆದುಕೊಂಡು ಸಮುದಾಯದ ಸಹಭಾಗಿತ್ವದೊಂದಿಗೆ ನಿರ್ವಹಣೆ ಅಲ್ಲದೆ ಜಲಭದ್ರತ ಯೋಜನೆ ಸಿದ್ಧಪಡಿಸಲಾಗುವುದೆಂದರು ನೀರಿನ ಬೇಡಿಕೆ ಕಡಿಮೆ ಮಾಡುವುದು ತಾಂತ್ರಿಕತೆಗಳು ಮತ್ತು ನೀರಿನ ಮರು ಪೂರೈಕೆ ಕ್ರಮಗಳ ಕುರಿತು ಸಹಾಯಕ ನಿರ್ದೇಶಕರಾದ ರವಿಕುಮಾರ್ ರೈತರಿಗೆ ಸವಿವರವಾಗಿ ತರಬೇತಿ ನೀಡಿದರು. ಸಂದರ್ಭದಲ್ಲಿ ಬೈರ್ಕೂರು ಕೃಷಿ ಅಧಿಕಾರಿ ಅಕ್ಷಯ್ ಕುಮಾರ್ ಮಾತನಾಡಿದರು ಸಂಜಯ್ ಇರಿಗೇಶನ್ ಸಮಸ್ತೆರಘು ಎಟಿಎಂ ಸುರೇಶ್ ಮಹೇಶ್ ಸೀನಪ್ಪ ಹಾಗೂ ಎಲ್ಲಾ ರೈತರು ಈ ತರಬೇತಿಯಲ್ಲಿ ಪಾಲ್ಗೊಂಡಿದ್ದರು.




# ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನಕ್ಕೆ ಸುತ್ತೂರು ಶ್ರೀಗಳ ಸಂತಾಪ

**ಮೈಸೂರು:** ಭಾರತದ ಖ್ಯಾತ ಆರ್ಥಿಕ ತಜ್ಞರು, ಅಭಿವೃದ್ಧಿಯ ಹರಿಕಾರರು, ರಾಜಕೀಯದ ಅಜಾತಶತ್ರುಗಳು, ಸಜ್ಜನ ಮುತ್ಸದ್ದಿಗಳೂ ಆಗಿದ್ದ ಡಾ.ಮನಮೋಹನ್ ಸಿಂಗ್ ಅವರು ಅಗಲಿರುವುದು ಅತೀವ ದುಃಖದ ಸಂಗತಿ ಎಂದು ಸುತ್ತೂರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಂತಾಪ ವ್ಯಕ್ತಪಡಿಸಿದ್ದಾರೆ.

ಡಾ.ಸಿಂಗ್ ಅವರು ಕೇಂಬ್ರಿಡ್ಜ್ ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರದಲ್ಲಿ ಅತ್ಯುನ್ನತ ಪದವಿ ಪಡೆದಿದ್ದರು. ಪಂಜಾಬ್ ವಿಶ್ವವಿದ್ಯಾನಿಲಯದಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ ಅವರು ಮೂಲತಃ ಖ್ಯಾತ ಶಿಕ್ಷಣ ತಜ್ಞರು. ದೆಹಲಿ ಸ್ಕೂಲ್ ಆಫ್ ಎಕನಾಮಿಕ್ಸ್‌ನಲ್ಲೂ ಅಧ್ಯಾಪನ ಮಾಡಿದ್ದರು. ಆಕಸ್ಮಿಕವಾಗಿ ರಾಜಕೀಯ ಪ್ರವೇಶ ಮಾಡಿ ಮೂರು ದಶಕಗಳಿಗೂ ಹೆಚ್ಚು ಕಾಲ ಸಕ್ರಿಯ ರಾಜಕಾರಣದಲ್ಲಿ ತೊಡಗಿಸಿಕೊಂಡಿದ್ದರು. ಹಣಕಾಸು ಸಚಿವಾಲಯದ ಪ್ರಧಾನ ಸಲಹೆಗಾರರು, ಕಾರ್ಯದರ್ಶಿಗಳು, ಯೋಜನಾ ಆಯೋಗದ ಸದಸ್ಯರು, ರಿಸರ್ವ್ ಬ್ಯಾಂಕ್ ಗವರ್ನರ್, ಯೋಜನಾ ಆಯೋಗದ ಉಪಾಧ್ಯಕ್ಷರು, ಅಂದಿನ ಪ್ರಧಾನಿಗಳ ಆರ್ಥಿಕ ಸಲಹೆಗಾರರು, ವಿಶ್ವವಿದ್ಯಾನಿಲಯ ಧನಸಹಾಯ ಆಯೋಗದ ಅಧ್ಯಕ್ಷರು – ಹೀಗೆ ಹಲವಾರು ಹುದ್ದೆಗಳನ್ನು ಸಮರ್ಥವಾಗಿ ನಿಭಾಯಿಸಿದ್ದರು ಎಂದು ಶ್ರೀಗಳು ಸ್ಮರಿಸಿದ್ದಾರೆ.

ಅಪ್ರತಿಮ ಪ್ರತಿಭಾವಂತರಾಗಿದ್ದರೂ ಅತ್ಯಂತ ಸರಳ, ಸಜ್ಜನ, ನಿಗರ್ವಿ, ವಿನೀತರಾಗಿದ್ದರು. ಇವೆಲ್ಲಕ್ಕೂ ಕಿರೀಟವಿಟ್ಟಂತೆ ಪಿ.ವಿ.ನರಸಿಂಹರಾವ್ ಅವರ ಸಂಪುಟದಲ್ಲಿ ಅರ್ಥಸಚಿವರಾಗಿ ಜಾಗತೀಕರಣ, ಉದಾರೀಕರಣ ಮೊದಲಾದವುಗಳ ಹರಿಕಾರರಾಗಿ ಭಾರತದ ಆರ್ಥಿಕ ಚಿತ್ರಣವನ್ನೇ ಬದಲಾಯಿಸಿದವರು ಎಂದು ತಿಳಿಸಿದ್ದಾರೆ.

ಡಾ.ಮನಮೋಹನ್ ಸಿಂಗ್ ಜೆಎಸ್‌ಎಸ್ ದಂತವೈದ್ಯಕೀಯ ಕಾಲೇಜಿನ ಕಟ್ಟಡದ ಭೂಮಿಪೂಜೆ ನೆರವೇರಿಸಿದ್ದುದು ಹಾಗೂ ಸುತ್ತೂರು ಶ್ರೀಕ್ಷೇತ್ರದಲ್ಲಿ ದಾಸೋಹ ಭವನ ಉದ್ಘಾಟಿಸಿದ್ದು ನಮ್ಮೆಲ್ಲರ ನೆನಪಿನಲ್ಲಿ ಚಿರಸ್ಥಾಯಿಯಾಗಿದೆ. ಪಕ್ಷಗಳ ಚೌಕಟ್ಟನ್ನು ಮೀರಿ ಬೆಳೆದಿದ್ದರು. ಮಾನವೀಯ ಮೌಲ್ಯಗಳಿಗೆ ಬೆಲೆ ನೀಡುತ್ತಿದ್ದ ಧೀಮಂತ ಚೇತನ. ರಾಜಕೀಯದಲ್ಲಿ ಸಜ್ಜನಿಕೆಯ ಕೊಂಡಿಯಂತಿದ್ದ ಹಳೆಯ ತಲೆಮಾರಿನ ಈ ಹಿರಿಯರ ಅಗಲುವಿಕೆ ಒಂದು ನಿರ್ವಾತ ಸ್ಥಿತಿ ನಿರ್ಮಿಸಿದೆ ಎಂದು ತಿಳಿಸಿದ್ದಾರೆ.

ದಿವಂಗತರ ಅಗಲುವಿಕೆಗೆ ತೀವ್ರ ಸಂತಾಪ ವ್ಯಕ್ತಪಡಿಸುತ್ತಾ ಭಗವಂತನು ಅವರ ಆತ್ಮಕ್ಕೆ ಚಿರಶಾಂತಿಯನ್ನು, ಅವರ ಕುಟುಂಬವರ್ಗದವರು, ಬಂಧುಮಿತ್ರರು ಹಾಗೂ ಕೋಟ್ಯಂತರ ಅಭಿಮಾನಿಗಳಿಗೆ ಈ ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲೆಂದು ಹಾರೈಸುತ್ತೇವೆ ಎಂದು ಪ್ರಕಟಣೆಯಲ್ಲಿ ಶ್ರೀಗಳು ತಿಳಿಸಿದ್ದಾರೆ.

# ಡಿ.31ರಿಂದ ಸಾರಿಗೆ ಬಸ್ ನೌಕರರ ಮುಷ್ಕರ

**ದಾವಣಗೆರೆ:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕರು ಡಿ.31ರಿಂದ ಮುಷ್ಕರ ನಡೆಸಲು ಕರೆ ನೀಡಿದ್ದಾರೆ. ಅಂದು ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ನಾಲ್ಕು ನಿಗಮದ ಬಸ್‌ಗಳ ಸಂಚಾರ ಅನುಮಾನವಾಗಿದೆ.

ವಿಭಾಗೀಯ ಸಾರಿಗೆ ನೌಕರರ ಸಂಘದ ಅಧ್ಯಕ್ಷ ಹೆಚ್.ಜಿ.ಉಮೇಶ್ ಮಾತನಾಡಿ, "ನೌಕರರ ಬೇಡಿಕೆಗಳನ್ನು ಈಡೇರಿಸುವ ಸಲುವಾಗಿ ಸರ್ಕಾರಕ್ಕೆ ಮನವಿ ಮಾಡಿದ್ದೇವೆ. ಸರ್ಕಾರ ಕೆಎಸ್‌ಆರ್‌ಟಿಸಿ, ನೌಕರರ ಬೇಡಿಕೆಗಳನ್ನು ಈಡೇರಿಸದೇ ಕಾಲಹರಣ ಮಾಡುತ್ತಿದೆ.

ರಾಜ್ಯದ ನಾಲ್ಕು ನಿಗಮದ ಜಂಟಿ ಕ್ರಿಯ ಸಮಿತಿ ಮಾಡಿಕೊಂಡು ಮುಷ್ಕರ ನಡೆಸಲು ತೀರ್ಮಾನಿಸಿದ್ದೇವೆ. ನಮ್ಮ ಹಿಂಬಾಕಿ, ಹೆಚ್ಚುವರಿ ವೇತನ ಮತ್ತು ರಜೆ ವೇತನ ಸೇರಿ ಐದು ಸಾವಿರದ ಹತ್ತು ಕೋಟಿ ಹಣ ನೌಕರಿಗೆ ಬರಬೇಕಿದೆ. ಡಿ.31 ರಿಂದ ನಾಲ್ಕು ನಿಗಮಗಳ ನೌಕರರು ಕೆಲಸವನ್ನು ಬಹಿಷ್ಕರಿಸಿ ಮುಷ್ಕರ ನಡೆಸಲಿದ್ದೇವೆ" ಎಂದು ತಿಳಿಸಿದರು.

ದಾವಣಗೆರೆ ಘಟಕದ ಸ್ಟಾಫ್‌ಆ್ಯಂಡ್ ವರ್ಕರ್ಸ್ ಯೂನಿಯನ್‌ನ ಅಧ್ಯಕ್ಷ ಮಿರ್ಜಾ ರಹಮತುಲ್ಲ ಮಾತನಾಡಿ, "ನಾಲ್ಕು ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆ ಮಾಡಬೇಕೆಂಬ ನಿಯಮ ಜಾರಿಯಲ್ಲಿದೆ. 2023ರಲ್ಲಿ ಸರ್ಕಾರ ವೇತನ ಪರಿಷ್ಕರಿಸಿ, ನೌಕರರ ವೇತನವನ್ನು ಹೆಚ್ಚಳ ಮಾಡಿದೆ. 2020 ಮಾರ್ಚ್ 23ರತನಕ ಪರಿಷ್ಕರಣೆ ಮಾಡಿದ ವೇತನವನ್ನು ಇನ್ನೂ ಸಂದಾಯ ಮಾಡಿಲ್ಲ. ಸರ್ಕಾರಕ್ಕೆ ಈ ಬಗ್ಗೆ ಮನವಿ ಕೊಟ್ಟರೂ ಯಾವುದೇ ಪ್ರಯೋಜನವಾಗಿಲ್ಲ" ಎಂದು ಹೇಳಿದರು.



### ನೌಕರರ ಬೇಡಿಕೆಗಳೇನು

**1. 01-01-2020ರಿಂದ ಆಗಿರುವ ಶೇ.15ರಷ್ಟು ವೇತನ ಹೆಚ್ಚಳದ ನಂತರದ 38 ತಿಂಗಳ ಬಾಕಿ ಹಣವನ್ನು ವಿಳಂಬವಿಲ್ಲದೆ ಪಾವತಿಸಬೇಕು.**

**2. ಶಕ್ತಿ ಯೋಜನೆಯ ಸಂಪೂರ್ಣ ಅನುದಾನವನ್ನು ನಾಲ್ಕು ಸಾರಿಗೆ ನಿಗಮಗಳಿಗೆ ಕೂಡಲೇ ಪಾವತಿಸಬೇಕು.**

**3. ಸದ್ಯ ನೌಕರರು ಪಡೆಯುತ್ತಿರುವ ವಿವಿಧ ಭತ್ಯೆಗಳನ್ನು ಐದು ಪಟ್ಟು ಹೆಚ್ಚಳ ಮಾಡಬೇಕು.**

**4. ವೈದ್ಯಕೀಯ ಸೌಲಭ್ಯ ನೀಡಬೇಕು. ಎಲ್ಲಾ ನೌಕರರಿಗೂ ಪ್ರತೀ ತಿಂಗಳೂ ಹೊರ ರೋಗಿ ಚಿಕಿತ್ಸೆ ವೆಚ್ಚಕ್ಕಾಗಿ ಎರಡು ಸಾವಿರ ರೂಪಾಯಿ ನೀಡಬೇಕು. ಎಲ್ಲಾ ನೌಕರರಿಗೂ ಉಚಿತ ಔಷಧಿ ನೀಡಬೇಕು. ಇಎಸ್‌ಐ ಮಾದರಿಯಲ್ಲಿ ನೌಕರರ ಮೂಲ ವೇತನದ ಶೇ.4.5 ಹಾಗೂ ನೌಕರರಿಂದ ಶೇ.0.5 ವಂತಿಗೆ ಸಂಗ್ರಹಿಸಿ ಟ್ರಸ್ಟ್ ರಚಿಸಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ಕೊಡುವ ಯೋಜನೆ ರೂಪಿಸಬೇಕು. ಈ ಮೇಲ್ಕಂಡ ಸೌಲಭ್ಯಗಳನ್ನು ನಿವೃತ್ತ ನೌಕರರಿಗೆ ಮತ್ತು ಅವರ ಪತಿ/ಪತ್ನಿ ಹಾಗೂ ಮಕ್ಕಳಿಗೆ ನೀಡಬೇಕು.**

# ಶಾ ಹೇಳಿಕೆಗೆ ಖಂಡನೆ: ಡಿ.31ಕ್ಕೆ ಚಾಮರಾಜನಗರ ಬಂದ್ ಕರೆ



**ಚಾಮರಾಜನಗರ:** ಇತ್ತೀಚೆಗಷ್ಟೇ ರಾಜ್ಯಸಭೆಯಲ್ಲಿ ನಡೆದ ಚರ್ಚೆಯ ವೇಳೆ ಡಾ.ಬಿ.ಆರ್.ಅಂಬೇಡ್ಕರ್ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿದ ಹೇಳಿಕೆಯನ್ನು ವಿರೋಧಿಸಿ ದಲಿತ ಹಾಗೂ ಪ್ರಗತಿಪರ ಸಂಘಟನೆಗಳು ಡಿ.31ರಂದು ಚಾಮರಾಜನಗರ ಬಂದ್ ಆಚರಿಸಲು ನಿರ್ಧರಿಸಿವೆ.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ದಲಿತ ಮಹಾಸಭಾದ ರಾಜ್ಯ ಉಪಾಧ್ಯಕ್ಷ ವೆಂಕಟರಮಣಸ್ವಾಮಿ(ಪಾಪು) ನೇತೃತ್ವದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಚಾಮರಾಜನಗರ ಬಂದ್‌ಗೆ ನಿರ್ಧರಿಸಲಾಯಿತು. ಸಭೆಯಲ್ಲಿ ಎಸ್‌ಡಿಪಿಐ ನಗರಸಭಾ ಸದಸ್ಯ ಎಂ.ಮಹೇಶ, ದಲಿತ ಸಂಘರ್ಷ ಸಮಿತಿ ಸಂಚಾಲಕ ಸಿ.ಎಂ.ಶಿವಣ್ಣ, ಯ.ನಾಗರಾಜು, ಲಾರಿ ಮಾಲೀಕರ ಸಂಘದ ಇರ್ಷಾದ್, ರಾಮಸಮುದ್ರ ಸುರೇಶ್ ಬಂದ್‌ಗೆ ಸಂಪೂರ್ಣ ಬೆಂಬಲ ನೀಡುವುದಾಗಿ ತಿಳಿಸಿದರು.

ಸಭೆಯ ನೇತೃತ್ವವಹಿಸಿದ್ದ ವೆಂಕಟರಮಣಸ್ವಾಮಿ ಮಾತನಾಡಿ, "ಸಂಸತ್‌ನಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಿ, ದೇಶದಿಂದ ಗಡಿಪಾರು ಮಾಡುವಂತೆ ಆಗ್ರಹಿಸಿ ಚಾಮರಾಜನಗರ ಬಂದ್‌ಗೆ ಕರೆ ನೀಡಲಾಗಿದೆ. ಬಂದ್‌ಗೆ ಬೆಂಬಲ ನೀಡುವಂತೆ ವರ್ತಕರು, ಚಿತ್ರಮಂದಿರ ಮಾಲೀಕರು, ಬಸ್ ಮಾಲೀಕರ ಸಂಘ, ಲಾರಿ ಮಾಲೀಕರ ಸಂಘ, ಪಟ್ಟಣದ ಎಲ್ಲಾ ಕೋಮಿನ ಸಮುದಾಯದವರು ಹಾಗೂ ಸಂಘ-ಸಂಸ್ಥೆಗಳಲ್ಲಿ ಮನವಿ ಮಾಡಲಾಗಿದ್ದು, ಅವರು ಬೆಂಬಲ ಕೊಡುವುದಾಗಿ ತಿಳಿಸಿದ್ದಾರೆ" ಎಂದರು.

# ಬೈಕ್ ವ್ಹೀಲಿಂಗ್ ಹುಚ್ಚಾಟ ದೇವನಹಳ್ಳಿಯಲ್ಲಿ ಇಬ್ಬರು ಬಲಿ

**ದೇವನಹಳ್ಳಿ:** ಬೈಕ್ ವ್ಹೀಲಿಂಗ್ ಮಾಡುವ ವೇಳೆ ಎದುರಗಡೆಯಿಂದ ಬರುತ್ತಿದ್ದ ಕ್ಯಾಂಟರ್‌ಗೆ ಡಿಕ್ಕಿ ಹೊಡೆದು ಯುವಕರಿಬ್ಬರು ಮೃತಪಟ್ಟ ಘಟನೆ ದೇವನಹಳ್ಳಿಯ ವಿಜಯಪುರ ಪಟ್ಟಣದ ಬೈಪಾಸ್ ರಸ್ತೆಯಲ್ಲಿ ನಡೆದಿದೆ. ವಿಜಯಪುರ ಪಟ್ಟಣದ ಮನೋಜ್ (19) ಮತ್ತು ಹರ್ಭಾಜ್ (19) ಮೃತರು.

ದೇವನಹಳ್ಳಿ ತಾಲೂಕಿನ ವಿಜಯಪುರ ಪಟ್ಟಣದ ಬೈಪಾಸ್ ರಸ್ತೆಯಲ್ಲಿ ಇಂದು ಬೆಳಗ್ಗೆ ಮಳೆಯ ನಡುವೆ ಇಬ್ಬರು ದ್ವಿಚಕ್ರ ವಾಹನದಲ್ಲಿ ಬೈಕ್ ವ್ಹೀಲಿಂಗ್ ಮಾಡುತ್ತಿದ್ದರು. ಈ ವೇಳೆ ಎದುರುಗಡೆ ಬರುತ್ತಿದ್ದ ಕ್ಯಾಂಟರ್‌ಗೆ ಡಿಕ್ಕಿ ಹೊಡೆದು ತೀವ್ರ ರಕ್ತಸ್ರಾವವಾಗಿ ಇಬ್ಬರೂ ಮೃತಪಟ್ಟಿದ್ದಾರೆ.

ಅಪಘಾತ ತಪ್ಪಿಸಲು ಪ್ರಯತ್ನಿಸಿದ ಕ್ಯಾಂಟರ್ ಚಾಲಕ, ತಕ್ಷಣ ಕ್ಯಾಂಟರ್ ಅನ್ನು ರಸ್ತೆ ಬದಿಗೆ ಎಳೆದಿದ್ದಾರೆ. ಅದೃಷ್ಟವಶಾತ್ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆಯದೇ ಸ್ವಲ್ಪದರಲ್ಲೇ ಅವರು ಪ್ರಾಣಾಪಾಯ ದಿಂದ ಪಾರಾಗಿದ್ದಾರೆ. ಸುದ್ದಿ ತಿಳಿದು ಸ್ಥಳಕ್ಕೆ ಬಂದ ಪೊಲೀಸರು ಪರಿಶೀಲನೆ ನಡೆಸಿದರು. ಬಳಿಕ ಮೃತದೇಹಗಳನ್ನು ದೇವನಹಳ್ಳಿಯ ಆಕಾಶ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಗೆ ಸಾಗಿಸಿದರು.

ಪಟ್ಟಣದ ಜನಸಂದಣಿಯ ರಸ್ತೆ ಹಾಗೂ ಬೈಪಾಸ್‌ನಲ್ಲಿ ದಿನನಿತ್ಯ ಬೈಕ್ ವ್ಹೀಲಿಂಗ್ ಮಾಡುವವರ ಸಂಖ್ಯೆ ಹೆಚ್ಚಾಗಿದೆ. ಪೊಲೀಸರ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಪುರಸಭೆಯವರು ಪ್ರಮುಖ ವೃತ್ತಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಿದ್ದರೂ ಕ್ಯಾಮರಾಗಳಲ್ಲಿ ದಾಖಲಾಗಿರುವ ದೃಶ್ಯಾವಳಿಗಳನ್ನು ಆಧರಿಸಿ, ಕಾನೂನು ಕ್ರಮ ಕೈಗೊಂಡಿದ್ದರೆ ಪ್ರಾಣಾಪಾಯ ಸಂಭವಿಸುವ ಹಂತಕ್ಕೆ ಹೋಗುತ್ತಿರಲಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಮುನಿರತ್ನ ವಿರುದ್ಧ ಅತ್ಯಾಚಾರ, ಹನಿಟ್ರ್ಯಾಪ್ ಆರೋಪ ಸಾಬೀತು: ಜಾರ್ಜ್‌ಶೀಟ್ ಸಲ್ಲಿಕೆ

ಬೆಂಗಳೂರು: ರಾಜರಾಜೇಶ್ವರಿ ನಗರ ಕ್ಷೇತ್ರದ ಬಿಜೆಪಿ ಶಾಸಕ ಹಾಗೂ ಮಾಜಿ ಸಚಿವ ಮುನಿರತ್ನಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಶಾಸಕ ಮುನಿರತ್ನ ವಿರುದ್ಧ ಕೇಳಿಬಂದಿರುವ ಅತ್ಯಾಚಾರ, ಹನಿಟ್ರ್ಯಾಪ್ ಆರೋಪ ತನಿಖೆಯಲ್ಲಿ ರಜುವಾತಾಗಿದೆ ಎಂದು ನಗರದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಸಿಐಡಿ ವಿಶೇಷ ತನಿಖಾ ತಂಡ ಆರೋಪ ಪಟ್ಟಿ ಸಲ್ಲಿಸಿದೆ.

ತಮ್ಮ ವಿರೋಧಿಗಳನ್ನು ಹೆಚ್‌ಐವಿ-ಏಡ್ಸ್ ಪೀಡಿತರ ಮೂಲಕ ಹನಿಟ್ರ್ಯಾಪ್ ಬಲಗೆ ಬೀಳಿಸಿ ಏಡ್ಸ್ ಹರಡುವಿಕೆಗೆ ಶಾಸಕ ಮುನಿರತ್ನ ದುಷ್ಕೃತ್ಯ ಎಸಗಿದ್ದರು ಎಂದು ಎಸ್‌ಐಟಿ ಸಲ್ಲಿಸಿದ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖವಾಗಿದೆ. ಶಾಸಕ ಮುನಿರತ್ನ ಕೃತ್ಯಕ್ಕೆ ನೆರವು ನೀಡಿದ ಆರೋಪದ ಹೊತ್ತಿದ್ದ ಪ್ರಕರಣದ ಎ3 ಸುಧಾಕರ್, ಎ7 ಪಿ.ಶ್ರೀನಿವಾಸ್ ಮತ್ತು ಎ8 ಇನ್ಸ್‌ಪೆಕ್ಟರ್ ಐಯ್ಯಣ್ಣ ರೆಡ್ಡಿ ವಿರುದ್ಧ ದಾಖಲಾದ ಆಪಾದನೆ ಕೂಡ ತನಿಖೆಯಲ್ಲಿ ಸಾಬೀತಾಗಿದೆ. ಸದ್ಯ ಇನ್ಸ್‌ಪೆಕ್ಟರ್ ಬಿ. ಐಯ್ಯಣ್ಣ ರೆಡ್ಡಿಯನ್ನು ಎಸ್‌ಐಟಿ ಪೊಲೀಸರು ಬಂಧಿಸಿದ್ದಾರೆ.

ಸೆಪ್ಟೆಂಬರ್ 18ರಂದು ಕಗ್ಗಲೀಪುರ ಪೊಲೀಸ್ ಠಾಣೆಯಲ್ಲಿ ಮಹಿಳೆಯೊಬ್ಬರು ಒಟ್ಟು ಏಳು ಜನರ ವಿರುದ್ಧ ಅತ್ಯಾಚಾರ ಆರೋಪ ಮಾಡಿ ದೂರು ದಾಖಲಿಸಿದ್ದರು. ಪ್ರಕರಣದ ತನಿಖೆಗೆ ಸರ್ಕಾರ ಎಸ್‌ಐಟಿ ರಚಿಸಿತ್ತು. ಈ ಬಗ್ಗೆ ತನಿಖೆ ನಡೆಸಿದ ಎಸ್‌ಐಟಿ, ಶಾಸಕ ಮುನಿರತ್ನ ವಿರುದ್ಧ ಅತ್ಯಾಚಾರ ಹಾಗೂ ಅವರ ಸಹಚರರ ಮೇಲೆ ಕೃತ್ಯಕ್ಕೆ ಸಹಕರಿಸಿದ ಆರೋಪದಡಿ ಆರೋಪ ಪಟ್ಟಿ ಸಲ್ಲಿಸಿದೆ. ಪ್ರಕರಣ ಸಂಬಂಧ ಎಸ್‌ಐಟಿ 146 ಸಾಕ್ಷಿಗಳನ್ನು ವಿಚಾರಣೆಗೊಳಪಡಿಸಿತ್ತು. ಇದರಲ್ಲಿ ನ್ಯಾಯಾಧೀಶರ ಮುಂದೆ ಸಿಆರ್‌ಪಿಸಿ 164ರಡಿ 8 ಜನರ ಸಾಕ್ಷಿದಾರರು ಹೇಳಿಕೆ ನೀಡಿದ್ದಾರೆ. 850 ದಾಖಲೆ ಒಳಗೊಂಡ 2,481 ಪುಟಗಳ ಚಾರ್ಜ್‌ಶೀಟ್ ಸಲ್ಲಿಕೆ ಎಸ್‌ಐಟಿ ಸಲ್ಲಿಕೆ ಮಾಡಿದೆ.

**ಯಾವ್ಯಾವ ಸೆಕ್ಷನ್‌ಗಳಡಿ ಜಾರ್ಜ್‌ಶೀಟ್:**
376(2)ಎನ್ (ನಿರಂತರ ಅತ್ಯಾಚಾರ), 3081202 (ಸಂಚು), 504 (ಉದ್ದೇಶಪೂರ್ವಕ ಅವಮಾನ), 506 (ಜೀವ ಬೆದರಿಕೆ),270 ಅಪಾಯಕಾರಿ ರೋಗಹರಡುವಿಕೆ. ಆರೋಪಿಗಳ ವಿರುದ್ಧ ಲೈಂಗಿಕ ಕಿರುಕುಳಕ್ಕಾಗಿ ಐಪಿಸಿ 354ಎ, ಅನುಮತಿ ಇಲ್ಲದೆ ಮಹಿಳೆಯ ಅಶ್ಲೀಲ ದೃಶ್ಯ ಸೆರೆಹಿಡಿದಿರುವುದಕ್ಕೆ ಸೆಕ್ಷನ್ 354 ಸಿ, ಮಹಿಳೆಯ ಮೇಲೆ ಪದೇ ಪದೇ ಅತ್ಯಾಚಾರವೆಸಗಿದ್ದಕ್ಕಾಗಿ ಐಪಿಸಿ ಸೆಕ್ಷನ್ 376 (2) (ಟಿ), ಸಂತ್ರಸ್ತೆಯ ಕೊಲ್ಲುವ ಉದ್ದೇಶಕ್ಕೆ ಸೆಕ್ಷನ್ 308, ಅಪರಾಧಿಕ ಒಳಸಂಚಿಗೆ ಸೆಕ್ಷನ್ 120 ಃ, ಉದ್ದೇಶಪೂರ್ವಕವಾಗಿ ಅವಮಾನಕ್ಕಾಗಿ ಸೆಕ್ಷನ್ 504, ಜೀವಕ್ಕೆ ಅಪಾಯಕಾರಿ ಕಾಯಿಲೆಯ ಸೋಂಕನ್ನು ಹರಡುವ ಮಾರಣಾಂತಿಕ ಕೃತ್ಯಕ್ಕಾಗಿ ಸೆಕ್ಷನ್ 270 ಮತ್ತು ವ್ಯಕ್ತಿಯ ಖಾಸಗಿ ಚಿತ್ರವನ್ನ ಒಪ್ಪಿಗೆಯಿಲ್ಲದೆ ಸೆರೆಹಿಡಿದಿದ್ದಕ್ಕೆ ಐಟಿ ಕಾಯ್ದೆ 2000ರ ಸೆಕ್ಷನ್ 66ಇ ಅಡಿಯಲ್ಲಿ ಚಾರ್ಜ್‌ಶೀಟ್ ಸಲ್ಲಿಕೆಯಾಗಿದೆ. ಮುನಿರತ್ನ ವಿರುದ್ಧ ಅತ್ಯಾಚಾರ, ಜಾತಿ ನಿಂದನೆ, ಬೆದರಿಕೆ ಹಾಗೂ ಹನಿಟ್ರ್ಯಾಪ್ ಯತ್ನ ಸೇರಿ 4 ಪ್ರಕರಣಗಳು ದಾಖಲಾಗಿದ್ದವು.ಈ ಪೈಕಿ ಬಿಬಿಎಂಪಿ ಮಾಜಿ ಸದಸ್ಯ ವೇಲು ನಾಯ್ಕರ್‌ಗೆ ಜಾತಿನಿಂದನೆ ಹಾಗೂ ಬಿಜೆಪಿ ಕಾರ್ಯಕರ್ತೆ ಮೇಲಿನ ಅತ್ಯಾಚಾರ ಪ್ರಕರಣಗಳ ತನಿಖೆಯನ್ನು ಪೂರ್ಣಗೊಳಿಸಿ ಸಿಐಡಿ ನ.30ರಂದು ಚಾರ್ಜ್‌ಶೀಟ್ ಸಲ್ಲಿಕ್ಕೆ ಮಾಡಿತ್ತು. ಸದ್ಯ ಗುತ್ತಿಗೆದಾರನ ಬಳಿ ಲಂಚ ಕೇಳಿದ ಪ್ರಕರಣ ಸಂಬಂಧ ಪ್ರಾಸಿಕ್ಯೂಷನ್ ಅನುಮತಿಗೆ ಎಸ್‌ಐಟಿ ಕಾಯುತ್ತಿದೆ.

# ಶ್ರೀನಗರದಲ್ಲಿ ಭಾರಿ ಹಿಮಪಾತ: ಹೆದ್ದಾರಿಯಲ್ಲಿ ಸಾಲುಗಟ್ಟಿ ನಿಂತ ವಾಹನಗಳು

**ಶ್ರೀನಗರ:** ಕಾಶ್ಮೀರದಲ್ಲಿ ಭಾರಿ ಹಿಮಪಾತವಾಗುತ್ತಿದ್ದು, ಇದರಿಂದ ಜನಜೀವನ ಅಸ್ತವ್ಯಸ್ತವಾಗಿದೆ. ರಸ್ತೆಗಳಲ್ಲಿ ಹಿಮದ ರಾಶಿ ದಟ್ಟವಾಗಿರುವ ಹಿನ್ನೆಲೆಯಲ್ಲಿ ಜಮ್ಮು ಮತ್ತು ಕಾಶ್ಮೀರ ಹೆದ್ದಾರಿಯ ಮಧ್ಯದ ಪಿರ್ ಪಂಜಲ್ ಟನಲ್ ಮತ್ತು ಶ್ರೀನಗರ ನಗರದಲ್ಲಿ ರಸ್ತೆಗಳಲ್ಲಿ ವಾಹನಗಳು ಸಾಲುಗಟ್ಟಿ ನಿಲ್ಲುವಂತೆ ಆಗಿದೆ.

ಶುಕ್ರವಾರ ಮಧ್ಯಾಹ್ನದಿಂದ ಭಾರಿ ಹಿಮಪಾತವಾಗುತ್ತಿದ್ದು, ಇದು ಶನಿವಾರ ಕೂಡ ಮುಂದುವರೆದಿದ್ದು, ಅನೇಕ ಪ್ರದೇಶದಲ್ಲಿ ಸಾಧಾರಣ ಹಿಮಪಾತವಾಗಿದೆ. ರಸ್ತೆಗಳಲ್ಲಿ ಹಿಮದ ರಾಶಿಯಿಂದಾಗಿ ರಸ್ತೆಗಳಲ್ಲಿ ಜಾರುವಿಕೆ ಪರಿಸ್ಥಿತಿ ನಿರ್ಮಾಣವಾಗಿದ್ದು, ವಾಹನಗಳು ಮುಂದೆ ಸಾಗದೇ ಅಲ್ಲಿಯೇ ನಿಲ್ಲುವಂತಾಗಿದೆ.

ಹೆದ್ದಾರಿಯಲ್ಲಿ ಥರಗುಟ್ಟುವ ಚಳಿ ಮತ್ತು ಹಿಮದ ನಡುವೆ ಅನೇಕಗಂಟೆಗಳ ಕಾಲ ವಾಹನಗಳು ಮುಂದೆಸಾಗದೇ ಟನಲ್‌ನಲ್ಲೇ ನಿಂತಿವೆ. ಅಧಿಕಾರಿಗಳು ರಸ್ತೆಯಲ್ಲಿ ಸಾಲುಗಟ್ಟಿ ನಿಂತಿರುವ ವಾಹನಗಳ ಸಾಗಾಟಕ್ಕೆ ಅನುವು ಮಾಡಿಕೊಡುವ ಪ್ರಯತ್ನಕ್ಕೆ ಮುಂದಾದರೂ, ದಟ್ಟ ಮಂಜಿನ ಮಳೆ ಅದಕ್ಕೆ ಅವಕಾಶ ನೀಡುತ್ತಿಲ್ಲ.



ಇದರಿಂದ ವಾಹನಗಳು ನಿಧಾನವಾಗಿ ತೆರಳುವ ಪರಿಸ್ಥಿತಿ ಉಂಟಾಗಿದೆ.

ಭಾರಿ ಹಿಮಪಾತದಿಂದಾಗಿ ಭಾರಿ ಮತ್ತು ಸಣ್ಣ ವಾಹನಗಳು ರಸ್ತೆಯಲ್ಲಿ ಜಾರಿದ್ದು, ಚಾಲಕರು ಕೂಡ ಪ್ರಯಾಣ ಮುಂದುವರೆಸಲು ಹರಸಾಹಸ ಪಡಬೇಕಾಗಿದೆ. ಶನಿವಾರ ಬೆಳಗಿನವರೆಗೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾಲುಗಟ್ಟಿದ್ದ ವಾಹನದ ಸಂಚಾರ ಇನ್ನೂ ಹಾಗೇ ಇದೆ.

ಸಹಾಯವಾಣಿ ಆರಂಭಿಸಿದ ಅಧಿಕಾರಿಗಳು: ಅನಿರೀಕ್ಷಿತ ಹಿಮಪಾತದಿಂದ ವಾಹನ ಪ್ರಯಾಣಿಕರು ಸಮಸ್ಯೆಗೆ ಒಳಗಾಗಿರುವ ಹಿನ್ನೆಲೆಯಲ್ಲಿ ಜನರಿಗೆ ಸಹಾಯ ಮಾಡಲು ಅಧಿಕಾರಿಗಳು ಸಹಾಯವಾಣಿ ಆರಂಭಿಸಿದ್ದಾರೆ.

ಶ್ರೀನಗರದ ನಗರದ ಎಲ್ಲ ರಸ್ತೆ ಸೇರಿದಂತೆ ಬುಡ್ಗಾಮ್, ಗಂಡೇರ್ಬಲ್, ಬಂಡಿಪೊರ, ಬರಮುಲ್ಲಾ, ಕುಪ್ವಾರ, ಪುಲ್ವಾಮ, ಅನಂತ್‌ನಾಗ್, ಕುಲ್ಗಾಮ್ ಮತ್ತು ಶೋಫಿಯಾನ ಜಿಲ್ಲೆಗಳಲ್ಲಿ ರಸ್ತೆ ಮೇಲಿನ ಹಿಮವನ್ನು ಯಂತ್ರಗಳಿಂದ ತೆರವು ಮಾಡುವ ಕೆಲಸ ಮಾಡಲಾಗುತ್ತಿದೆ. ಭಾರಿ ಹಿಮದ ಪರಿಣಾಮ ಶ್ರೀನಗರದ ಕೆಲವು ಪ್ರದೇಶದಲ್ಲಿ ವಿದ್ಯುತ್ ಸಂಪೂರ್ಣವಾಗಿ ವ್ಯತ್ಯಯವಾಗಿದೆ.

ವಿಪರೀತ ಹಿಮಪಾತದ ಕೆಲವು ತೊಂದರೆಗಳ ಹೊರತಾಗಿ ಇದು ಸ್ಥಳೀಯರು ಮತ್ತು ಪ್ರವಾಸಿಗರಲ್ಲಿಹರ್ಷ ತಂದಿದೆ. ದೀರ್ಘ ಕಾಲದ ಶುಷ್ಕ ವಾತಾವರಣದ ನಡುವೆ ಈ ಹಿಮ ಉತ್ತಮ ಬಾಬಿ ಬೆಳೆಯುವ ಭರವಸೆ ಮೂಡಿಸಿದೆ. ಕಳೆದ ನಾಲ್ಕು ತಿಂಗಳಿನಿಂದ ಮಳೆಯಾಗದ ಕಾರಣ ಕಣಿವೆಯಲ್ಲಿ ನೀರಿನ ಚಿಲುಮೆ ಮತ್ತು ಬಾವಿಗಳು ನೀರಿನ ಮಟ್ಟ ಕಡಿಮೆಯಾಗಿತ್ತು. ಶ್ರೀನಗರ ಮಾತ್ರವಲ್ಲದೇ ಅಕ್ಕಪಕ್ಕದ ಜಿಲ್ಲೆಗಳಲ್ಲಿ ಕೂಡ ಈ ಋತುಮಾನದ ಮೊದಲ ಹಿಮಪಾತ ಶುಕ್ರವಾರದಿಂದ ಆರಂಭವಾಗಿದೆ. ಸದ್ಯ ಕಣಿವೆ ರಾಜ್ಯದಲ್ಲಿ ಪ್ರವಾಸಿಗರಲ್ಲಿ ಈ ಹಿಮಪಾತ ಸಂತಸ ತಂದಿದ್ದು, ಗುಲ್ಮಾರ್ಗ್, ಪಹಲ್ಗಾಮ್, ಸೋನಾಮಾರ್ಗ್ ಮತ್ತು ಇತರ ಪ್ರವಾಸಿ ತಾಣಗಳಲ್ಲಿ ಸುಮಾರು 10 ಇಂಚುಗಳಷ್ಟು ತಾಜಾ ಹಿಮಪಾತವಾಗಿದೆ. ಹವಾಮಾನ ಇಲಾಖೆಯು ಮುಂದಿನ 24 ಗಂಟೆಗಳಲ್ಲಿ ಹೆಚ್ಚಿನ ಮಳೆ ಮತ್ತು ಹಿಮಪಾತವಾಗುವ ಸಾಧ್ಯತೆ ಇದೆ.

# ಪಾದಚಾರಿಗಳ ಮೇಲೆ ಹರಿದ ಟೆಂಪೋ: ಸಾವು, ನಾಲ್ವರಿಗೆ ಗಾಯ



**ಮಹಾರಾಷ್ಟ್ರ:** ವೇಗವಾಗಿ ಬಂದ ಟೆಂಪೋ ಐವರು ಪಾದಚಾರಿಗಳ ಮೇಲೆ ಹರಿದ ಪರಿಣಾಮ ಮಹಿಳೆಯೊಬ್ಬರು ಸಾವನ್ನಪ್ಪಿ, ನಾಲ್ವರು ಗಾಯಗೊಂಡಿರುವ ಘಟನೆ ಶುಕ್ರವಾರ ತಡರಾತ್ರಿ ಕುರ್ಲಾ ಪಕ್ಕದ ಘಾಟ್‌ಕೋಪರ್‌ನಲ್ಲಿ ಸಂಭವಿಸಿದೆ.

ಈ ಅಪಘಾತದ ನಂತರ ಟೆಂಪೋ ಚಾಲಕ ಉತ್ತಮ್ ಖಾರತ್ ನನ್ನು ಪೊಲೀಸರು ವಶಕ್ಕೆ ಪಡೆದಿದ್ದು, ಅಪಘಾತ ಹೇಗೆ ಸಂಭವಿಸಿತು ಎಂಬ ಬಗ್ಗೆ ತನಿಖೆ ನಡೆಸುತ್ತಿದ್ದಾರೆ. ಇನ್ನು ಮೃತ ಮಹಿಳೆಯನ್ನು ಪ್ರೀತಿ ಪಟೇಲ್ (ವಯಸ್ಸು 35, ಪಶ್ಚಿಮದ ಘಾಟ್‌ಕೋಪರ್ ನಿವಾಸಿ) ಎಂದು ಗುರುತಿಸಲಾಗಿದೆ. ಈ ಅಪಘಾತದಲ್ಲಿ ರೇಷ್ಮಾ ಶೇಖ್, ಮಾರುಫಾ ಶೇಖ್, ಮೊಹಮ್ಮದ್ ಅಲಿ ಅಬ್ದುಲ್ ಶೇಖ್, ಓಜರ್ ಶೇಖ್ ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಸಮೀಪದ ರಾಜವಾಡಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅಪಘಾತದ ಬಗ್ಗೆ ಪೊಲೀಸರು ಹೇಳಿದ್ದಿಷ್ಟು: ಟೆಂಪೋ ಸಂಜೆ 6.30 ರ ಸುಮಾರಿಗೆ ನಾರಾಯಣನಗರದಿಂದ ತಂಪು ಪಾನೀಯಗಳೊಂದಿಗೆ ಬರುತ್ತಿದ್ದು, ಅತಿವೇಗದಲ್ಲಿ ಚಲಿಸುತ್ತಿತ್ತು. ಸ್ಟೇರಿಂಗ್ ಟೆಂಪೋ ಚಾಲಕನ ನಿಯಂತ್ರಣ ತಪ್ಪಿದ್ದರಿಂದ ಪಾದಚಾರಿಗಳಿಗೆ ಡಿಕ್ಕಿ ಹೊಡೆದಿದೆ ಎಂದು ವಲಯ ಉಪ ಪೊಲೀಸ್ ಕಮಿಷನರ್ ಹೇಳಿದ್ದಾರೆ.

ಪ್ರತ್ಯಕ್ಷದರ್ಶಿಗಳ ಪ್ರಕಾರ ಆರೋಪಿಯನ್ನು ಸಾರ್ವಜನಿಕರು ಹಿಡಿದು ಘಾಟ್‌ಕೋಪರ್ ಪೊಲೀಸರಿಗೆ ಒಪ್ಪಿಸಿದ್ದಾರೆ.

ಚಿರಾಗ್ ನಗರದಲ್ಲಿ ದೊಡ್ಡ ಮಾರುಕಟ್ಟೆ ಇದೆ. ತರಕಾರಿ ಮತ್ತು ಮೀನು ಮಾರುಕಟ್ಟೆಗಳು ಜನಸಂದಣಿ ತುಂಬಿದ್ದು, ಭಾರಿ ಸಂಖ್ಯೆಯಲ್ಲಿ ನಾಗರಿಕರು ಬಂದು ಹೋಗುತ್ತಾರೆ. ಹಾಗಾಗಿ ವಾಹನ ಚಲಾಯಿಸುವಾಗ ಎಚ್ಚರಿಕೆಯಿಂದ ವಾಹನ ಚಲಾಯಿಸಬೇಕು ಎನ್ನುತ್ತಾರೆ ಸ್ಥಳೀಯರು. ಆದರೆ, ಚಾಲಕ ಮದ್ಯ ಸೇವಿಸಿ ವಾಹನ ಚಲಾಯಿಸಿದ್ದರಿಂದ ಈ ಅಪಘಾತ ಸಂಭವಿಸಿದೆ ಎಂದು ಪ್ರತ್ಯಕ್ಷದರ್ಶಿಗಳು ಹೇಳುತ್ತಿದ್ದಾರೆ.

# ಮನಮೋಹನ್ ಸಿಂಗ್ ಸ್ಮಾರಕಕ್ಕೆ ಕೇಂದ್ರ ಜಾಗ ಮಂಜೂರು ಮಾಡಲಿದೆ

**ನವದೆಹಲಿ:** ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಸ್ಮಾರಕಕ್ಕೆ ಸರ್ಕಾರ ಜಾಗವನ್ನು ಮಂಜೂರು ಮಾಡಲಿದ್ದು, ಇದನ್ನು ಅವರ ಕುಟುಂಬ ಮತ್ತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ತಿಳಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ಶುಕ್ರವಾರ ರಾತ್ರಿ ಸ್ಪಷ್ಟನೆ ನೀಡಿದೆ.

ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ಸ್ಮಾರಕಕ್ಕೆ ಸಂಬಂಧಿಸಿದ ಸಂಗತಿಗಳು ಎಂಬ ಶೀರ್ಷಿಕೆಯಡಿ ತಡರಾತ್ರಿ ಈ ಬಗ್ಗೆ ಪ್ರಕಟಣೆ ಬಿಡುಗಡೆ ಮಾಡಿರುವ ಸಚಿವಾಲಯವು, ಕಾಂಗ್ರೆಸ್ ಮುಖ್ಯಸ್ಥರಿಂದ ಸಿಂಗ್ ಅವರ ಸ್ಮಾರಕಕ್ಕಾಗಿ ಜಾಗವನ್ನು ಮಂಜೂರು ಮಾಡುವಂತೆ ಸರ್ಕಾರಕ್ಕೆ ಬಂದಿರುವ ಮನವಿಯನ್ನು ಸ್ವೀಕರಿಸಿದೆ ಎಂದು ಹೇಳಿದೆ.

ಕ್ಯಾಬಿನೆಟ್ ಸಭೆಯ ನಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಖರ್ಗೆ ಮತ್ತು ಮನಮೋಹನ್ ಸಿಂಗ್ ಅವರ ಕುಟುಂಬಕ್ಕೆ ಸರ್ಕಾರವು ಸ್ಮಾರಕ ನಿರ್ಮಾಣಕ್ಕಾಗಿ ಜಾಗವನ್ನು ಮಂಜೂರು ಮಾಡಲಿದೆ ಎಂದು ತಿಳಿಸಿದ್ದಾರೆ. ಅಂತ್ಯ ಸಂಸ್ಕಾರ ಮತ್ತು ಇತರ ವಿಧಿವಿಧಾನಗಳ ಹಿನ್ನೆಲೆಯಲ್ಲಿ ಟ್ರಸ್ಟ್ ರಚಿಸಬೇಕಾಗಿದೆ ಮತ್ತು ಅದಕ್ಕೆ ಸ್ಥಳವನ್ನು ನಿಗದಿಪಡಿಸಬೇಕಾಗಿದೆ ಎಂದು ಗೃಹ ಸಚಿವಾಲಯ ತಿಳಿಸಿದೆ.

ಗುರುವಾರ ನಿಧನರಾಗಿರುವ ಮನಮೋಹನ್ ಸಿಂಗ್: ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರದ ನೇತೃತ್ವ ವಹಿಸಿ, ಆರ್ಥಿಕ ಸುಧಾರಣೆಗಳ ಹರಿಕಾರ ಎಂದು ಗುರುತಿಸಿಕೊಂಡಿರುವ ಸಿಂಗ್ ಅವರು ಗುರುವಾರ 92 ನೇ ವಯಸ್ಸಿನಲ್ಲಿ ನಿಧನರಾಗಿದ್ದಾರೆ.

2004 ರಿಂದ 2014ರ ವರೆಗೆ 10 ವರ್ಷಗಳ ಕಾಲ ಭಾರತದ ಪ್ರಧಾನಿಯಾಗಿ ಡಾ. ಮನಮೋಹನ್ ಸಿಂಗ್ ಅವರು ಗಣನೀಯ ಸೇವೆ ಸಲ್ಲಿಸಿದ್ದರು. ಅದಕ್ಕೂ ಪೂರ್ವದಲ್ಲಿ ಪಿ ವಿ ನರಸಿಂಹರಾವ್ ಅವರ ಸರ್ಕಾರದಲ್ಲಿ ಕೇಂದ್ರ ಹಣಕಾಸು ಸಚಿವರಾಗಿ ಭಾರತದ ಆರ್ಥಿಕ ಅಭಿವೃದ್ಧಿಗೆ ಭದ್ರ ಬುನಾದಿ ಹಾಕಿದ್ದರು.

ದೇಶದಲ್ಲಿ ಜಾಗತೀಕರಣ, ಉದಾರೀಕರಣ ಹಾಗೂ ಖಾಸಗೀಕರಣ ನೀತಿ ಜಾರಿಗೆ ತಂದಿದ್ದರು. ಈ ಮೂಲಕ ಉದ್ಯೋಗಾವಕಾಶ, ಕೈಗಾರಿಕೀಕರಣ ಹಾಗೂ ಉದ್ಯಮಗಳ ಸ್ಥಾಪನೆಗೆ ಅನುವು ಮಾಡಿಕೊಟ್ಟಿದ್ದ ಅವರು, ದೇಶದ ಅಭ್ಯುದಯಕ್ಕೆ 1991ರಲ್ಲೇ ಭದ್ರ ಅಡಿಪಾಯ ಹಾಕಿದ್ದರು.

ಈ ಮೂಲಕ ಇಂದು ಭಾರತ ವಿಶ್ವದ ಐದನೇ ಆರ್ಥಿಕ ಶಕ್ತಿಯಾಗಿ ತಲೆ ಎತ್ತಲು ಸಾಧ್ಯವಾಗಿದೆ.

ಈ ಹಿನ್ನೆಲೆಯಲ್ಲಿ ಮನಮೋಹನ್ ಸಿಂಗ್ ಭಾರತದ ಬೆಳವಣಿಗೆಯಲ್ಲಿ ತಮ್ಮದೇ ಭೂಮಿಕೆಯನ್ನು ನಿರ್ವಹಿಸಿದ್ದಾರೆ. 92 ವರ್ಷಗಳ ತುಂಬು ಜೀವನ ನಡೆಸಿ ಇಹಲೋಕ ತ್ಯಜಿಸಿದ್ದಾರೆ.

## ಸ್ಮಾರಕ ನಿರ್ಮಿಸುವ ಸ್ಥಳದಲ್ಲಿ ಸಿಂಗ್ ಅಂತ್ಯಕ್ರಿಯೆ ನೆರವೇರಿಸಿ

**ನವದೆಹಲಿ:** ಸ್ಮಾರಕ ನಿರ್ಮಿಸಬಹುದಾದ ಸ್ಥಳದಲ್ಲಿ ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ಅಂತ್ಯಕ್ರಿಯೆ ನಡೆಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪತ್ರ ಬರೆದು ಮನವಿ ಮಾಡಿದ್ದಾರೆ.

ಡಾ.ಮನಮೋಹನ್ ಸಿಂಗ್ ಅವರ ಅಂತಿಮ ವಿಧಿವಿಧಾನಗಳು ನಡೆಯಲಿರುವ ಸ್ಥಳವನ್ನು ದೇಶದ ಮಹಾನ್ ಪುತ್ರನ ಸ್ಮಾರಕವನ್ನಾಗಿಸುವ ಕುರಿತು ಪ್ರಧಾನಿ ಮೋದಿ ಅವರ ಜೊತೆ ಇಂದು ಬೆಳಗ್ಗೆ ಮಾತನಾಡಿದ್ದೇನೆ" ಎಂದು ಖರ್ಗೆ ತಿಳಿಸಿದ್ದಾರೆ.

ರಾಷ್ಟ್ರನಾಯಕರು ಮತ್ತು ಮಾಜಿ ಪ್ರಧಾನಿಗಳ ಅಂತ್ಯಕ್ರಿಯೆಯ ಸ್ಥಳದಲ್ಲಿ ಸ್ಮಾರಕ ನಿರ್ಮಾಣ ನಿರ್ಮಾಣ ಮಾಡುವ ಸಂಪ್ರದಾಯವಿದೆ. ಅದರಂತೆ ಸ್ಮಾರಕ ನಿರ್ಮಾಣದ ಸ್ಥಳದಲ್ಲೇ ಅಂತ್ಯಕ್ರಿಯೆ ನಡೆಯಬೇಕು" ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

ಮನಮೋಹನ್ ಸಿಂಗ್ ಅವರು ದೇಶದ ಜನರ ಮನಸ್ಸಿನಲ್ಲಿ ಅತ್ಯಂತ ಗೌರವಾನ್ವಿತ ಸ್ಥಾನ ಹೊಂದಿದ್ದಾರೆ. ಅವರ ಕೊಡುಗೆಗಳು ಮತ್ತು ಸಾಧನೆಗಳು ಅಸಾಧಾರಣವಾಗಿವೆ. ಭಾರತೀಯ ರಿಸರ್ವ್ ಬ್ಯಾಂಕ್‌ನ ಗವರ್ನರ್ ಆಗಿ, ಭಾರತ ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರರಾಗಿ, ಪ್ರಧಾನಿಯಾಗಿ ಹಲವು ಸಾಧನೆಗಳನ್ನು ಮಾಡಿದ್ದಾರೆ. ಭಾರತದ ಪ್ರಧಾನಿ ಮಾತನಾಡುವಾಗ, ಇಡೀ ಜಗತ್ತು ಅವರ ಮಾತನ್ನು ಕೇಳಿಸಿಕೊಳ್ಳುತ್ತೆ ಎಂದು ಹೇಳಿದ್ದ ಅಮೆರಿಕದ ಮಾಜಿ ಅಧ್ಯಕ್ಷ ಒಬಾಕ್ ಒಬಾಮಾ ಅವರ ಮಾತನ್ನು ಖರ್ಗೆ ಪ್ರಸ್ತಾಪಿಸಿದ್ದಾರೆ.

ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯಲ್ಲಿ ಸಂತಾಪ ಸೂಚಕ ನಿರ್ಣಯ: ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸಂತಾಪ ಸೂಚಕ ನಿರ್ಣಯವನ್ನು ತೆಗೆದುಕೊಳ್ಳಲಾಯಿತು.


ಪಕ್ಷದ ಕಚೇರಿಯಲ್ಲಿ ಇಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ನಡೆದ ಸಿಡಬ್ಲ್ಯುಸಿ ಸಭೆಯಲ್ಲಿ ಸೋನಿಯಾ ಗಾಂಧಿ, ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಸೇರಿದಂತೆ ಪಕ್ಷದ ಹಿರಿಯ ನಾಯಕರು ಭಾಗಿಯಾಗಿದ್ದರು.

ಡಾ.ಮನಮೋಹನ್ ಸಿಂಗ್ ಅವರ ಅಗಲಿಕೆಗೆ ಕಾಂಗ್ರೆಸ್ ಕಾರ್ಯಕಾರಿಣಿ ಸಭೆ ಸಂತಾಪ ಸೂಚಿಸಿತು. ಡಾ. ಸಿಂಗ್ ಅವರು ಭಾರತದ ರಾಜಕೀಯ ಮತ್ತು ಆರ್ಥಿಕ ಕ್ಷೇತ್ರದ ಅಗ್ರಗಣ್ಯ ನಾಯಕರಾಗಿದ್ದರು. ಅವರ ಕೊಡುಗೆಗಳು ದೇಶವನ್ನು ಬದಲಾಯಿಸಿದ್ದಲ್ಲದೇ 1990ರ ದಶಕದ ಆರಂಭದಲ್ಲಿ ಅವರಿಗೆ ವಿಶ್ವಾದ್ಯಂತ ಗೌರವವನ್ನು ತಂದುಕೊಟ್ಟಿತು. ಡಾ.ಸಿಂಗ್ ಭಾರತದ ಆರ್ಥಿಕ ಉದಾರೀಕರಣದ ಶಿಲ್ಪಿ, ಖಾಸಗೀಕರಣ ಮತ್ತು ವಿದೇಶಿ ಹೂಡಿಕೆಯ ಉತ್ತೇಜನದ ನೀತಿಗಳ ಮೂಲಕ ಜಾಗತಿಕ ಮಾರುಕಟ್ಟೆಗಳಿಗೆ ಭಾರತ ಬಾಗಿಲು ತೆರೆದು ಕ್ಷಿಪ್ರ ಆರ್ಥಿಕ ಬೆಳವಣಿಗೆಗೆ ಅಡಿಪಾಯ ಹಾಕಿದರು. ಇದರಿಂದ ಭಾರತವು ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಗಳಲ್ಲಿ ಒಂದಾಗಿ ಹೊರಹೊಮ್ಮಿತು ಎಂದು ಮನಮೋಹನ್ ಸಿಂಗ್ ಅವರನ್ನು ಕಾಂಗ್ರೆಸ್ ಸ್ಮರಿಸಿದೆ.

ಕೇಂದ್ರದ ವಿರುದ್ಧ ಕಾಂಗ್ರೆಸ್ ಅಸಮಾಧಾನ: ಸಿಂಗ್ ಅವರ ಅಂತ್ಯಕ್ರಿಯೆ ಮತ್ತು ಸ್ಮಾರಕಕ್ಕೆ ಸ್ಥಳವನ್ನು ಗುರುತಿಸದೇ ಇರುವುದು ದೇಶದ ಮೊದಲ ಸಿಖ್ ಪ್ರಧಾನಿಗೆ ಮಾಡಿದ ಉದ್ದೇಶಪೂರ್ವಕ ಅವಮಾನವಾಗಿದೆ ಎಂದು ಕಾಂಗ್ರೆಸ್ ಶುಕ್ರವಾರ ಆರೋಪಿಸಿದೆ.

ಸಿಂಗ್ ಅವರ ಅಂತಿಮ ಸಂಸ್ಕಾರ ನವದೆಹಲಿಯ ನಿಗಮಬೋಧ್ ಘಾಟ್‌ನಲ್ಲಿ ಶನಿವಾರ ಬೆಳಗ್ಗೆ 11.45 ಕ್ಕೆ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಸಲಾಗುವುದು ಎಂದು ಗೃಹ ಸಚಿವಾಲಯ ಹೇಳಿದ ನಂತರ ಪಕ್ಷವು ಈ ವಿಷಯವನ್ನು ಪ್ರಸ್ತಾಪಿಸಿದೆ.

# ಬೆಳ್ಳಂಬೆಳಗ್ಗೆ ಭಾರಿ ಮಳೆ ಭಾರಿ ಟ್ರಾಫಿಕ್ ಜಾಮ್



**ನವದೆಹಲಿ:** ಶನಿವಾರ ಬೆಳಗ್ಗೆಯಿಂದ ದೆಹಲಿಯ ಕೆಲವು ಭಾಗಗಳಲ್ಲಿ ಎಡೆಬಿಡದೇ ಮಳೆ ಸುರಿಯುತ್ತಿದೆ. ಭಾರಿ ಮಳೆ ಮತ್ತು ರಭಸದ ಗಾಳಿಯಿಂದಾಗಿ ರಾಷ್ಟ್ರ ರಾಜಧಾನಿಯ ಹಲವಾರು ಪ್ರದೇಶಗಳಲ್ಲಿ ಮರಗಳು ನೆಲಕ್ಕುರುಳಿವೆ.

ಸೆಕ್ಟರ್–9, ಆರ್‌ಕೆ ಪುರಂನಲ್ಲಿ, ರಸ್ತೆಯ ಒಂದು ಭಾಗ ಧ್ವಂಸಗೊಂಡಿದ್ದು, ಒಂದು ಮೋಟಾರ್ ಸೈಕಲ್ ಮತ್ತು ಕಾರು ಪೀಡಿತ ಪ್ರದೇಶಕ್ಕೆ ಬಿದ್ದಿದೆ. ಭಾರತೀಯ ಹವಾಮಾನ ಇಲಾಖೆ ಖಒಆ ದೆಹಲಿ ಮತ್ತು ಎನ್‌ಸಿಆರ್‌ನಾದ್ಯಂತ ಹಲವಾರು ಸ್ಥಳಗಳಲ್ಲಿ ಗುಡುಗು ಸಹಿತ ಸಾಧಾರಣದಿಂದ ಭಾರಿ ಮಳೆಯಾಗಲಿದೆ ಎಂದು ಮುನ್ಸೂಚನೆ ನೀಡಿದೆ.

ಇಂದು ಇನ್ನೂ ಹೆಚ್ಚಿನ ಮಳೆಯಾಗುವ ನಿರೀಕ್ಷೆಯಿದೆ. ಇದು ಪಾಲಂ, ಸಫ್ದರ್‌ಜಂಗ್, ಲೋಡಿ ರಸ್ತೆ, ಐಜಿಐ ವಿಮಾನ ನಿಲ್ದಾಣ, ಮೆಹ್ರೌಲಿ, ಛತ್ತರ್‌ಪುರ, ಅಯನಗರ್, ದೇರಮಂಡಿ, ಗುರುಗ್ರಾಮ್, ಫರಿದಾಬಾದ್ ಮತ್ತು ಮನೇಸರ್‌ನಂತಹ ಪ್ರದೇಶಗಳನ್ನು ಒಳಗೊಂಡಿದೆ. ನೋಯ್ಡಾ ಮತ್ತು ಮನೇಸರ್ ನಲ್ಲಿ ಸಹ ಸಾಧಾರಣದಿಂದ ಭಾರೀ ಮಳೆ ಮತ್ತು ಮಿಂಚುಗಳಿಗೆ ಸಾಕ್ಷಿಯಾಗುವ ಸಾಧ್ಯತೆಯಿದೆ.

ಗುಡುಗು ಸಹಿತ ಮಳೆ ಸಾಧ್ಯತೆ: ಹರಿಯಾಣ, ಉತ್ತರ ಪ್ರದೇಶ ಮತ್ತು ರಾಜಸ್ಥಾನದ ಕೆಲವು ಭಾಗಗಳಲ್ಲಿ ಗುಡುಗು ಸಹಿತ ಲಘುವಾಗಿ ಸಾಧಾರಣ ಮಳೆಯಾಗುವ ಬಗ್ಗೆ ಭಾರತೀಯ ಹವಾಮಾನ ಮುನ್ಸೂಚನೆ ನೀಡಿದೆ. ಇದರಲ್ಲಿ ಯಮುನಾನಗರ, ಝಜ್ಜರ್, ಫರುಖ್‌ನಗರ, ಮತ್ತು ಹರಿಯಾಣದ ಹೊಡಲ್ ಸೇರಿವೆ. ಉತ್ತರ ಪ್ರದೇಶದ ಸಹರಾನ್‌ಪುರ, ಗಂಗೋಹ್, ದಿಯೋಬಂದ್, ಮುಜಾಫರ್‌ನಗರ, ಸಕೋಟಿ ತಾಂಡಾ, ಬರೌತ್, ದೌರಾಲಾ, ಬಾಗ್‌ಪತ್, ಮೀರತ್, ಮೋದಿನಗರ, ಕಿಥೋರ್ ಮತ್ತು ನಂದಗಾಂವ್ ಮತ್ತು ರಾಜಸ್ಥಾನದಲ್ಲಿ ತಿಜಾರಾ ಮತ್ತು ಅಲ್ವಾರ್ ಗಳಲ್ಲಿ ಮಳೆ ಆಗಲಿದೆ ಎಂದು ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಏತನ್ಮಧ್ಯೆ, ಶುಕ್ರವಾರ ತಡರಾತ್ರಿ ಉತ್ತರ ಪ್ರದೇಶದ ಮಥುರಾ ನಗರದ ಹಲವು ಭಾಗಗಳಲ್ಲಿ ಭಾರಿ ಮಳೆಯಾಗಿದೆ.

ನಿನ್ನೆಯ ನಿರಂತರ ಮಳೆಯಿಂದಾಗಿ ದೆಹಲಿಯ ವಿವಿಧ ಭಾಗಗಳಲ್ಲಿ ವ್ಯಾಪಕವಾದ ಮಳೆಯಾಗಿದ್ದರಿಂದ ಹಲವು ಪ್ರದೇಶಗಳು ಜಲಾವೃತವಾಗಿದ್ದವು. ಪರಿಣಾಮ ತೀವ್ರ ಸಂಚಾರ ಅಸ್ತವ್ಯಸ್ತವಾಗಿತ್ತು. ಜಲಪ್ರವಾಹದಿಂದಾಗಿ ಗಮನಾರ್ಹ ನಗರದಲ್ಲಿ ಭಾರಿ ಸಂಚಾರ ದಟ್ಟಣೆ ಉಂಟಾಗಿತ್ತು. ಶನಿವಾರವಾದ ಇಂದು ನವದೆಹಲಿಯಲ್ಲಿ ಕನಿಷ್ಠ ತಾಪಮಾನ 12 ಡಿಗ್ರಿ ಸೆಲ್ಸಿಯಸ್ ಇರಲಿದ್ದು, ಗರಿಷ್ಠ 19 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

ಡಿಸೆಂಬರ್ ಕಳೆದ 15 ವರ್ಷಗಳಲ್ಲಿ ಅತಿ ಹೆಚ್ಚಿನ ಮಳೆ: ಹವಾಮಾನ ಇಲಾಖೆಯ ಪ್ರಕಾರ ದೆಹಲಿಯು ಶುಕ್ರವಾರ 15 ವರ್ಷಗಳಲ್ಲಿ ಅದು ಡಿಸೆಂಬರ್‌ನಲ್ಲಿ ಅತಿ ಹೆಚ್ಚು ಮಳೆಯನ್ನು ದಾಖಲಿಸಿದೆ. ಗುರುವಾರ ಮುಂಜಾನೆ ಆರಂಭವಾದ ಭಾರಿ ಮಳೆ ದಿನವಿಡೀ ಸುರಿಯಿತು. ಮಳೆಯು ದೆಹಲಿಯ ಗಾಳಿಯ ಗುಣಮಟ್ಟದಲ್ಲಿ ಸ್ವಲ್ಪ ಸುಧಾರಣೆ ತಂದಿದೆ. ಆದರೂ ಗಾಳಿಯ ಗುಣಮಟ್ಟ 'ಅತ್ಯಂತ ಕಳಪೆ' ವಿಭಾಗದಲ್ಲೇ ಮುಂದುವರೆದಿದೆ.

# ಅಕ್ರಮ ಹಣ ವರ್ಗಾವಣೆ ಆರೋಪ ಬಿಆರ್‌ಎಸ್ ನಾಯಕ ಕೆಟಿಆರ್‌ಗೆ ಇಡಿ ಸಮನ್ಸ್

**ಹೈದರಾಬಾದ್:** 2023ರ ಫಾರ್ಮುಲಾ ಇ–ರೇಸ್‌ನಲ್ಲಿನ ಅಕ್ರಮ ಹಣ ಪಾವತಿ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ವಿವರಣೆ ಪಡೆಯುವ ಸಂಬಂಧ ಜಾರಿ ನಿರ್ದೇಶನಾಲಯ, ಬಿಆರ್‌ಎಸ್ ನಾಯಕ ಕೆಟಿ ರಾಮ್ ರಾವ್ ಸೇರಿದಂತೆ ಅನೇಕರಿಗೆ ಸಮನ್ಸ್ ಜಾರಿ ಮಾಡಿದೆ.

ಮುಂದಿನ ತಿಂಗಳು ಅಂದರೆ ಜನವರಿ 7ಕ್ಕೆ ವಿಚಾರಣೆಗೆ ಹಾಜರಾಗುವಂತೆ ತಿಳಿಸಲಾಗಿದೆ. ತೆಲಂಗಾಣ ಪೊಲೀಸ್ ಭ್ರಷ್ಟಾಚಾರ ವಿರೋಧಿ ಬ್ಯೂರೋ ದೂರನ್ನು ಗಮನದಲ್ಲಿರಿಸಿಕೊಂಡು ಪಿಎಂಎಲ್‌ಎನ ವಿವಿಧ ಸೆಕ್ಷನ್‌ಗಳ ಅಡಿ ಕಳೆದ ವಾರ ಇಡಿ ಎಫ್‌ಐಆರ್ ದಾಖಲಿಸಿದೆ.

ಈ ಸಂಬಂಧ ಜನವರಿ 7ರಂದು ಬಿಆರ್‌ಎಸ್ ಕಾರ್ಯಕಾರಿ ಅಧ್ಯಕ್ಷ ಕೆಟಿಆರ್ ಇಡಿ ಮುಂದೆ ಹಾಜರಾಗಿ ಹೇಳಿಕೆ ದಾಖಲಿಸುವಂತೆ ಸಮನ್ಸ್ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಇವರ ಜೊತೆಗೆ ಹಿರಿಯ ಐಎಎಸ್ ಅಧಿಕಾರಿ ಅರವಿಂದ್ ಕುಮಾರ್ ಮತ್ತು ಎಚ್‌ಎಂಡಿಎ ನಿವೃತ್ತ ಮಾಜಿ ಇಂಜಿನಿಯರ್ ಬಿಎಲ್‌ಎನ್ ರೆಡ್ಡಿಗೆ ಕ್ರಮವಾಗಿ ಜನವರಿ 2 ಮತ್ತು 3ರಂದು ಇಡಿ ಮುಂದೆ ಹಾಜರಾಗುವಂತೆ ಸಮನ್ಸ್ ನೀಡಲಾಗಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ.

2023ರಲ್ಲಿ ಬಿಆರ್‌ಎಸ್ ಆಡಳಿತದ ಅವಧಿಯಲ್ಲಿ ಹೈದರಾಬಾದ್‌ನಲ್ಲಿ ಫಾರ್ಮುಲಾ ಇ ರೇಸ್ ನಡೆಸಲು ಅನುಮತಿಯಿಲ್ಲದೇ ವಿದೇಶಿ ಕರೆನ್ಸಿ ಮತ್ತು ಸುಮಾರು 55 ಕೋಟಿ ರೂ.ಗಳ ಪಾವತಿ ಸಂಬಂಧಿಸಿದಂತೆ ಅಕ್ರಮ ನಡೆದಿದೆ ಎಂದು ಆರೋಪಿಸಲಾಗಿದೆ, ಈ ಕುರಿತು ತನಿಖೆ ನಡೆಯುತ್ತಿದೆ.

ಇದರ ಜೊತೆಗೆ ಸಂಸ್ಥೆ ವಿದೇಶಿ ಹಣ ವಿನಿಮಯ ಉಲ್ಲಂಘನೆ ಸಾಧ್ಯತೆ ಕುರಿತು ವಿದೇಶಿ ವಿನಿಮಯ ನಿರ್ವಹಣಾ ಕಾಯಿದೆ (ಎಫ್‌ಇಎಂಎ) ನಿಬಂಧನೆಗಳ ಅಡಿ ಜಾರಿ ನಿರ್ದೇಶನಾಲಯ ತನಿಖೆ ನಡೆಸುತ್ತಿದೆ.

ಈ ಎಲ್ಲ ಆರೋಪಗಳನ್ನು ತಳ್ಳಿಹಾಕಿರುವ ಕೆಟಿಆರ್, ಇದರಲ್ಲಿ ಭ್ರಷ್ಟಾಚಾರ ಎಲ್ಲಿ ಆಗಿದೆ, 55 ಕೋಟಿಯನ್ನು ನಾವು ಪಾವತಿ ಮಾಡಿದ್ದೇವೆ. ಅವರು ಪಾವತಿಯನ್ನು ಮಾನ್ಯತೆ ಮಾಡಿದ್ದಾರೆ. ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ನಲ್ಲಿ ಎಚ್‌ಎಂಡಿಎ ಖಾತೆ ಇದ್ದು, ಹಣವನ್ನು ಖಾತೆಗೆ ಜಮೆ ಮಾಡಲಾಗಿದೆ ಎಂದು ಪ್ರಕರಣ ಸಂಬಂಧ ಆರೋಪಗಳಿಗೆ ಪ್ರತಿಕ್ರಿಯಿಸಿದ್ದಾರೆ. ಬಿಆರ್‌ಎಸ್ ಆಡಳಿತದಲ್ಲಿ ಪೌರಾಡಳಿತ ಸಚಿವರಾಗಿದ್ದ ರಾಮರಾವ್ ಅವರು ಕಳೆದ ವರ್ಷ ಹೈದರಾಬಾದ್‌ನಲ್ಲಿ ಫಾರ್ಮುಲಾ ಒನ್ ರೇಸ್ ಆಯೋಜಿಸಿದ್ದರು.

# ಬಿಹಾರದಲ್ಲಿ 50 ಲಕ್ಷ ಮೌಲ್ಯದ ಲಿಕ್ಕರ್ ವಶಕ್ಕೆ

ಪಾಟ್ನಾ: ಬಿಹಾರದ ಸರನ್‌ನಲ್ಲಿ ಅಕ್ರಮವಾಗಿ ಸಾಗಣೆ ಮಾಡಲಾಗುತ್ತಿದ್ದ 50 ಲಕ್ಷ ಮೌಲ್ಯದ ಮದ್ಯವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಖಚಿತ ಮಾಹಿತಿ ಮೇರೆಗೆ ವಾಹನ ತಪಾಸಣೆ ನಡೆಸಿದಾಗ ಭಾರತೀಯ ನಿರ್ಮಿತ ವಿದೇಶಿ ಮದ್ಯ ವಶಕ್ಕೆ ಪಡೆಯಲಾಗಿದೆ. ಬಿಹಾರದಲ್ಲಿ 2016 ರಿಂದಲೇ ಮದ್ಯ ನಿಷೇಧ ಹೇರಲಾಗಿದೆ. ಆದರೂ ರಾಜ್ಯದಲ್ಲಿ ಅಕ್ರಮ ಮದ್ಯ ಸಾಗಾಟ ನಡೆಯುತ್ತಿದ್ದು, ಇದರ ನಿಯಂತ್ರಣಕ್ಕೆ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ

ಮುಫಾಸಿಲ್ ಪೊಲೀಸ್ ಠಾಣೆ ವ್ಯಾಪ್ತಿಯ ಉಮ್ಡಾ ಗ್ರಾಮದಲ್ಲಿ ವಾಹನ ತಪಾಸಣೆ ವೇಳೆ ನಾಗಾಲ್ಯಾಂಡ್ ನೋಂದಣಿ ಇರುವ ವಾಹನದಲ್ಲಿ ಅಕ್ರಮವಾಗಿ ಬಿಹಾರಕ್ಕೆ ಮದ್ಯ ಸಾಗಿಸುತ್ತಿರುವುದು ಕಂಡು ಬಂದಿದೆ. ವಾಹನ ತಪಾಸಣೆ ವೇಳೆ ಪೊಲೀಸರನ್ನು ಗಮನಿಸಿದ ಕಂಟೈನರ್ ಚಾಲಕ ವಾಹನವನ್ನು ಬಿಟ್ಟು ಪರಾರಿಯಾಗಿದ್ದಾನೆ. ವಾಹನದಲ್ಲಿ 50 ಲಕ್ಷ ಮೌಲ್ಯದ ವಿದೇಶಿ ಬ್ರಾಂಡ್‌ನ ಮದ್ಯ ಕಂಡು ಬಂದಿದೆ.

ಈ ಕುರಿತು ಮಾತನಾಡಿರುವ ಮುಫಾಸಿಲ್ ಪೊಲೀಸ್ ಠಾಣಾ ಅಧಿಕಾರಿಗಳು ನಾಗಾಲ್ಯಾಂಡ್ ನೋಂದಣಿಯ ಕಂಟೈನರ್ ವಾಹನದಲ್ಲಿ ಅಕ್ರಮವಾಗಿ ಮದ್ಯ ಸಾಗಿಸುತ್ತಿರುವ ಕುರಿತು ರಹಸ್ಯ ಮಾಹಿತಿಯನ್ನು ನಾವು ಸ್ವೀಕರಿಸಿದ್ದೆವು. ಈ ಹಿನ್ನೆಲೆಯಲ್ಲಿ ನಾವು ಉಮ್ದಾ ಗ್ರಾಮದಲ್ಲಿ ಬ್ಯಾರಿಕೇಡ್ ಹಾಕಿ ಬೃಹತ್ ತಪಾಸಣೆಗೆ ಮುಂದಾಗಿದ್ದು, ಯಶಸ್ವಿಯಾಗಿ ಅಕ್ರಮ ಮದ್ಯ ಸಾಗಾಟ ತಡೆಯಲಾಗಿದೆ ಎಂದರು.

ಪ್ರಾಥಮಿಕ ಮಾಹಿತಿ ಪ್ರಕಾರ, ಬಿಹಾರದಲ್ಲಿ ಹೊಸ ವರ್ಷದ ಸಂಭ್ರಮಾಚರಣೆಗಾಗಿ ಈ ಮದ್ಯ ಸಾಗಿಸುತ್ತಿರುವ ಸಾಧ್ಯತೆ ಇದೆ ಎಂದು ತಿಳಿದು ಬಂದಿದೆ.

# ಇಂಗ್ಲಿಷ್‌ನಲ್ಲಿ ಮಾತನಾಡುವುದೇ ಶ್ರೇಷ್ಠ ಎಂಬ ಅಭಿಪ್ರಾಯ ತಪ್ಪು: ಶೈಲಜಾ ಕಿರಣ್

**ಆಂಧ್ರ ಪ್ರದೇಶ:** "ದೇಶದಲ್ಲಿ ಹೆಚ್ಚು ಮಾತನಾಡುವ ಭಾಷೆಗಳಲ್ಲಿ ತೆಲುಗು ಭಾಷೆ ಕೂಡ ಒಂದಾಗಿದ್ದು, ನಾಲ್ಕನೇ ಸ್ಥಾನದಲ್ಲಿದೆ" ಎಂದು ಮಾರ್ಗದರ್ಶಿ ಚಿಟ್‌ಫಂಡ್‌ನ ವ್ಯವಸ್ಥಾಪಕ ನಿರ್ದೇಶಕಿ ಶೈಲಜಾ ಕಿರಣ್ ಅವರು ಹೇಳಿದರು.

ಮುಂದಿನ ಪೀಳಿಗೆಗೆ ಮಾತೃಭಾಷೆಯನ್ನು ತಿಳಿಸುವ ಉದ್ದೇಶದಿಂದ ವಿಜಯವಾಡದಲ್ಲಿ ಆರನೇ ವಿಶ್ವ ತೆಲುಗು ಕವಿಗಳ ಸಮ್ಮೇಳನ ಆರಂಭಗೊಂಡಿದ್ದು, ತೆಲುಗು ತಾಯಿಯ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಅವರು ಮಾತನಾಡಿದರು.

"ಇಂಗ್ಲಿಷ್‌ನಲ್ಲಿ ಮಾತನಾಡುವುದೇ ಶ್ರೇಷ್ಠ ಎಂಬ ಅಭಿಪ್ರಾಯ ತಪ್ಪು. ತೆಲುಗು ದೇಶದ ನಾಲ್ಕನೇ ಅತಿ ಹೆಚ್ಚು ಮಾತನಾಡುವ ಭಾಷೆ. ನಮ್ಮ ತೆಲುಗು ಪ್ರಪಂಚದಲ್ಲಿ ಅತಿ ಹೆಚ್ಚು ಮಾತನಾಡುವ ಭಾಷೆಗಳಲ್ಲಿ 14ನೇ ಸ್ಥಾನದಲ್ಲಿದೆ. ಕವಿತ್ರಯಂ ಮುಂತಾದ ಕವಿಗಳಿಂದಾಗಿ ತೆಲುಗು ಭಾಷೆ ಎಲ್ಲರ ಬಾಯಲ್ಲೂ ಉಳಿದಿದೆ. ಭಾರತದಲ್ಲಿ ತೆಲುಗು ಅತ್ಯುತ್ತಮ ಭಾಷೆ ಎಂದು ಶ್ರೀಕೃಷ್ಣದೇವರಾಯ, ರವೀಂದ್ರನಾಥ ಟ್ಯಾಗೋರ್ ಅವರು ಈ ಭಾಷೆ ಮತ್ತು ಸಂಗೀತವನ್ನು ಮೆಚ್ಚಿದ್ದರು" ಎಂದು ಶೈಲಜಾ ಕಿರಣ್ ಅವರು ಹೇಳಿದರು.

"ರಾಮೋಜಿ ರಾವ್ ಅವರು ತೆಲುಗು ಭಾಷೆ ಮತ್ತು ತೆಲುಗು ರಾಜ್ಯಗಳ ಮೇಲೆ ಅಪಾರ ಅಭಿಮಾನ ಹೊಂದಿದ್ದರು. ನಾವು ಬೆಳಗ್ಗೆ ಅವರಿಗೆ ತೆಲುಗಿನಲ್ಲಿಯೇ ಶುಭೋದಯಂ ಎಂದು ಹೇಳುತ್ತಿದ್ದೆವು. ರಾಮೋಜಿ ರಾವ್ ಅವರು ನಮ್ಮ ಮನೆಯಲ್ಲಿ ಮಕ್ಕಳು ತೆಲುಗು ಮಾತನಾಡುವಂತೆ ವಿಶೇಷ ಕಾಳಜಿ ವಹಿಸುತ್ತಿದ್ದರು. ಅವರ ಸ್ಮರಣಾರ್ಥ ನಾವೆಲ್ಲರೂ ಇನ್ಮುಂದೆ 'ಶುಭೋದಯಂ' ಎಂದು ಹೇಳೋಣ ಎಂದು ಕರೆ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸುಪ್ರೀಂ ಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಎನ್‌ವಿ ರಮಣ ಅವರು, 'ತೆಲುಗು ಭಾಷೆಯನ್ನು ಉಳಿಸೋಣ', ಸ್ವಾಭಿಮಾನ ಹೆಚ್ಚಿಸೋಣ ಎಂದರು.

ರಾಮೋಜಿ ರಾವ್ ತೆಲುಗು ತಾಯಿಯ ಪ್ರೀತಿಯ ಮಗು ಮತ್ತು ತೆಲುಗು ಭಾಷೆ ಮತ್ತು ಸಂಪ್ರದಾಯಗಳ ಸಂರಕ್ಷಣೆಗಾಗಿ ಹುಟ್ಟಿದ ಯೋಧ. ನಮ್ಮ ಸಂಸ್ಕೃತಿಯನ್ನು ಕಾಪಾಡಲು ತಮ್ಮ ಕೊನೆಯ ಉಸಿರು ಇರುವವರೆಗೂ ಅವರು ಹೋರಾಡಿದರು ಎಂದು ರಾಮೋಜಿ ರಾವ್ ಅವರಿಗಿದ್ದ ತೆಲುಗು ಪ್ರೀತಿಯನ್ನು ನಿವೃತ್ತ ನ್ಯಾಯಮೂರ್ತಿಗಳು ಬಣ್ಣಿಸಿದರು.

ಔಪಚಾರಿಕ ಉದ್ಘಾಟನೆಗೂ ಮುನ್ನ ತೆಲುಗು ತಾಯಿಯ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಶಾಸಕ ಸುಜನಾ ಚೌಧರಿ, ಮಂಡಳಿ ಬುದ್ಧ ಪ್ರಸಾದ್, ವಿಶ್ವ ಹಿಂದಿ ಪರಿಷತ್ತಿನ ರಾಷ್ಟ್ರೀಯ ಅಧ್ಯಕ್ಷ ಆಚಾರ್ಯ ಯರ್ಲಗಡ್ಡ ಲಕ್ಷ್ಮೀ ಪ್ರಸಾದ್ ಮುಂತಾದ ಪ್ರಮುಖರು ಉಪಸ್ಥಿತರಿದ್ದರು.ಎರಡು ದಿನಗಳ ಈ ಕಾರ್ಯಕ್ರಮವು ಕೆ.ಬಿ.ಎನ್. ಕಾಲೇಜು ಆವರಣದಲ್ಲಿ ನಡೆಯುಯುತ್ತಿದ್ದು, ಜಗತ್ತಿನಾದ್ಯಂತ ಸುಮಾರು 1,500 ಕವಿಗಳು, ಬರಹಗಾರರು ಮತ್ತು ಭಾಷಾ ಉತ್ಸಾಹಿಗಳೂ ಭಾಗಿಯಾಗಲಿದ್ದಾರೆ. 800ಕ್ಕೂ ಹೆಚ್ಚು ಭಾಷಾಭಿಮಾನಿಗಳು ಭಾಗವಹಿಸಲಿದ್ದಾರೆ. 1,000 ಕ್ಕೂ ಹೆಚ್ಚು ಪ್ರಸಿದ್ಧ ತೆಲುಗು ಕವಿಗಳ ಭಾವಚಿತ್ರಗಳನ್ನು ಪ್ರದರ್ಶಿಸುವ ವಿಶೇಷ ಛಾಯಾಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ.



# ಕಾಲುವೆಗೆ ಧುಮುಕಿದ ಬಸ್; ಮಕ್ಕಳು ಸೇರಿದಂತೆ 8 ಮಂದಿ ಸಾವು

**ಪಂಜಾಬ್:** ಭಾರಿ ಮಳೆಯ ಪರಿಣಾಮ ಪಂಜಾಬ್‌ನ ಬಟಿಂಡಾದಲ್ಲಿ ಖಾಸಗಿ ಬಸ್ಸೊಂದು ತಲ್ವಾಂಡಿ ಸಾಬೋ ರಸ್ತೆಯ ಜೀವನ್ ಸಿಂಗ್ ವಾಲಾ ಬಳಿ ಸೇತುವೆಯಿಂದ ಉರುಳಿ ಬಿದ್ದು ಭೀಕರ ಅಪಘಾತ ಸಂಭವಿಸಿದೆ. ಸರ್ದುಲ್‌ಗಢ್‌ನಿಂದ ಬಟಿಂಡಾಗೆ ತೆರಳುತ್ತಿದ್ದ ಬಸ್‌ನಲ್ಲಿ ಸಾಕಷ್ಟು ಪ್ರಯಾಣಿಕರು ಸಂಚರಿಸುತ್ತಿದ್ದರು ಎಂದು ತಿಳಿದು ಬಂದಿದೆ.

ಘಟನೆಯಲ್ಲಿ ಮಕ್ಕಳು ಸೇರಿದಂತೆ 8 ಮಂದಿ ದಾರುಣವಾಗಿ ಪ್ರಾಣ ಕಳೆದುಕೊಂಡಿದ್ದಾರೆ. ನಾಲ್ಕೈದು ಮಕ್ಕಳು ಸೇರಿದಂತೆ ಸುಮಾರು ಹನ್ನೆರಡು ಮಂದಿ ಗಾಯಗೊಂಡ ಪ್ರಯಾಣಿಕರನ್ನು ವೈದ್ಯಕೀಯ ಚಿಕಿತ್ಸೆಗಾಗಿ ಬಟಿಂಡಾ ಸಿವಿಲ್ ಆಸ್ಪತ್ರೆಗೆ ರವಾನಿಸಲಾಗಿದೆ. ಅಪಘಾತಕ್ಕೆ ನಿಖರ ಕಾರಣ ಗೊತ್ತಾಗಿಲ್ಲ.

ಅಪಘಾತದ ಸುದ್ದಿ ತಿಳಿದು ಎಎಪಿ ಶಾಸಕ ಜಗ್ರೂಪ್ ಸಿಂಗ್ ಗಿಲ್ ಸ್ಥಳಕ್ಕಾಗಮಿಸಿ ಸಂತಾಪ ವ್ಯಕ್ತಪಡಿಸಿದರು. ಐವರು ಸ್ಥಳದಲ್ಲೇ ಮೃತಪಟ್ಟರೆ, ಉಳಿದವರು ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಗಾಯಾಳುಗಳಿಗೆ ಉತ್ತಮ ಚಿಕಿತ್ಸೆ ನೀಡುವಂತೆ ಶಾಸಕ ಗಿಲ್ ಸಿಎಂಒಗೆ ಸೂಚಿಸಿದ್ದು, ಸಂತ್ರಸ್ತರ ಕುಟುಂಬಗಳಿಗೆ ಆರ್ಥಿಕ ನೆರವು ನೀಡುವ ಕುರಿತು ಡಿಸಿ ಅವರೊಂದಿಗೆ ಮಾತನಾಡುವುದಾಗಿ ಹೇಳಿದ್ದಾರೆ. "ಎಲ್ಲಾ ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ನಾವು ಪ್ರಾರ್ಥಿಸುತ್ತೇವೆ" ಎಂದು ಅವರು ಹೇಳಿದರು.

**ಕಾಲಚಕ್ರದಲ್ಲಿ ಮತ್ತೊಂದು ಹೊಸವರ್ಷವನ್ನು ಸ್ವಾಗತಕ್ಕೆ ಇಂಡಿಯಾ ಸಜ್ಜಾಗಿದೆ. ಇದರ ನಡುವೆ 2024ಱರಲ್ಲಿ ರಾಜಕೀಯ ವಲಯದಲ್ಲಿ ಎದುರಾದ ಏಳು–ಬೀಳುಗಳವನ್ನು ರಿವೈಂಡ್ ಮಾಡುತ್ತಿದ್ದಂತೆ ಕಣ್ಮುಂದೆ ಬರುವುದು ಲೋಕಸಭೆ ಚುನಾವಣೆಗಳು, ಮಹಾರಾಷ್ಟ್ರ, ಜಮ್ಮು ಮತ್ತು ಕಾಶ್ಮೀರ, ಕರ್ನಾಟಕದಲ್ಲಿ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಗಳು. ಉತ್ತರಪ್ರದೇಶದಲ್ಲಿ ಬಾಲ ರಾಮಚಂದ್ರನ ವಿಗ್ರಹ ಪ್ರತಿಷ್ಠಾಪನೆ, ದಿಲ್ಲಿಯ ಸಿಎಂ ಅರವಿಂದ್ ಕೇಜ್ರಿವಾಲ್ ಅವರ ರಾಜೀನಾಮೆ ಹಾಗೂ ಜೈಲುವಾಸ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್, ಕರ್ನಾಟಕದ ಮಾಜಿ ಸಿಎಂ ಎಸ್.ಎಂ.ಕೃಷ್ಣ ನಿಧನ.**



## ದಿಲ್ಲಿಯತ್ತ ಕುಮಾರ

ಲೋಕಸಭೆ ಚುನಾವಣೆಯಲ್ಲಿ ಗೆದ್ದು ಎಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ. ಇದರ ನಡುವೆ ವಿಧಾನಸಭೆಯಲ್ಲಿ ಸೋಲು ಕಂಡ ಬಿಜೆಪಿ ನಾಯಕರು ಲೋಕಸಭೆ ಚುನಾವಣೆಯಲ್ಲಿ ಗೆದ್ದು (ಬಸವರಾಜ ಬೊಮ್ಮಾಯಿ, ಗೋವಿಂದ ಕಾರಜೋಳ, ಸುಧಾಕರ್, ಜಗದೀಶ್ ಶೆಟ್ಟರ್) ದಿಲ್ಲಿಯತ್ತ ಮುಖಮಾಡಿದ್ದಾರೆ.

## ಮುಡಾ ಹಗರಣದ ಸದ್ದು



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮುಡಾದಲ್ಲಿ ನಡೆದಿದೆ ಎನ್ನಲಾದ ಅಕ್ರಮಕ್ಕೆ ಸಂಬಂಧಿಸಿ ಇದೀಗ ಸಿಎಂ ಸಿದ್ದರಾಮಯ್ಯ ವಿರುದ್ಧವೂ ಆರೋಪಗಳು ಕೇಳಿಬಂದಿದೆ. ಏಕೆಂದರೆ ಸಿಎಂ ಪತ್ನಿಗೆ 1998ರ ಜಾಗಕ್ಕೆ 2021ರಲ್ಲಿ ಪರಿಹಾರ ಸಿಕ್ಕಿರುವುದು, ಬೇರೆ ಕಡೆ ಭೂಮಿ ಕೊಟ್ಟಿರುವುದು, 50–50 ಅನುಪಾತ ದುರ್ಬಳಕೆ ಮಾಡಿರೋದು ಸಾಕಷ್ಟು ಅನುಮಾನಕ್ಕೆ ಕಾರಣವಾಗಿದೆ. ಮುಡಾದ 50:50 ಅನುಪಾತ ಹಂಚಿಕೆ ವಿಚಾರ ಕೋಟ್ಯಂತರ ರೂಪಾಯಿ ಹಗರಣ ಬಡಿದಾಟಕ್ಕೆ ವೇದಿಕೆ ಕೊಟ್ಟಿದೆ.




## ಮುನಿರತ್ನ ಜೈಲು ವಾಸ

ಬೆಂಗಳೂರಿನ ಆರ್‌ಆರ್‌ನಗರದ ಶಾಸಕ ಮುನಿರತ್ನ ಜಾತಿ ನಿಂದನೆ ಹಾಗೂ ಅತ್ಯಾಚಾರ ಪ್ರಕರಣದ ಆರೋಪದ ಮೇಲೆ ಜೈಲು ಶಿಕ್ಷೆಯನ್ನು ಎದುರಿಸಬೇಕಾಯಿತು. ಇದರ ನಡುವೆ ಬೆಂಗಳೂರಿನ ಲಗ್ಗೆರೆಯಲ್ಲಿ ಮುನಿರತ್ನ ಅವರ ತಲೆಗೆ ಮೊಟ್ಟೆ ಹೊಡೆಯಲಾಗಿತ್ತು. ಇದರಿಂದ ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ಗಲಾಟೆ ಸಹ ನಡೆದು ಎರಡು–ಮೂರು ಕಾರುಗಳು ಜಖಂಗೊಂಡಿತ್ತು.

> ಕರ್ನಾಟಕದ ರಾಜಕೀಯದಲ್ಲಿ ಈ ವರ್ಷ ಎರಡು ಚುನಾವಣೆಗಳನ್ನು (ಲೋಕಸಭೆ, 3 ವಿಧಾನಸಭಾ ಸ್ಥಾನಗಳಿಗೆ ಚುನಾವಣೆ) ಎದುರಿಸಬೇಕಾಯಿತು. ಸಂಡೂರು, ಶಿಗ್ಗಾಂವ್ ಮತ್ತು ಚನ್ನಪಟ್ಟಣ ಉಪಚುನಾವಣೆ. ಬಿಜೆಪಿ, ಜೆಡಿಎಸ್‌ನೊಂದಿಗೆ ಮೈತ್ರಿ ಮಾಡಿಕೊಂಡು ಕಾಂಗ್ರೆಸ್ ವಿರುದ್ಧ ಅಖಾಡಕ್ಕೆ ರಂಗಪ್ರವೇಶ ಮಾಡಿತ್ತು. ಆದರೆ ಕಾಂಗ್ರೆಸ್‌ಗೆ ಗ್ಯಾರಂಟಿ ವರವಾಗಿ ಮೂರು ವಿಧಾನಸಭಾ ಕ್ಷೇತ್ರಗಳಲ್ಲಿ ಜಯಗಳಿಸಿತು. ಹಿಂದಿನ ಬಿಜೆಪಿ ಆಡಳಿತದಲ್ಲಿ ಕೋವಿಡ್–19 ಉಪಕರಣಗಳ ಖರೀದಿಯಲ್ಲಿ ಅಕ್ರಮ ನಡೆದಿರುವುದು ಮೈಕೆಲ್ ಡಿ'ಕುನ್ಹಾ ಆಯೋಗದ ವರದಿಯಿಂದ ಬಹಿರಂಗವಾಗಿದೆ. ಇದರನಡುವೆ ಅನೇಕ ವಾಲ್ಮೀಕಿ, ಮುಡಾ ಹಗರಣಗಳು ಮತ್ತು ವಿವಾದಗಳಿಂದ 2024 ವರ್ಷ ಕೂಡಿತ್ತು.

## ಬಿಎಸ್‌ವೈ ವಿರುದ್ಧ ಪೋಕ್ಸೋ ಕೇಸ್



ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದೆ. 17 ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆಂದು ಆರೋಪಿಸಿ ಮಹಿಳೆಯೊಬ್ಬರು ದೂರು ನೀಡಿದ್ದರು. ದೂರಿನ ಮೇರೆಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ವೈ ವಿರುದ್ಧ ಬೆಂಗಳೂರಿನ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ನಂತರ ಈ ಪ್ರಕರಣವನ್ನು ಸರ್ಕಾರ ಸಿಐಡಿಗೆ ವಹಿಸಿತ್ತು. ಈ ಪೋಕ್ಸೋ ಪ್ರಕರಣ ರದ್ದುಪಡಿಸುವಂತೆ ಕೋರಿ ಯಡಿಯೂರಪ್ಪ ಅರ್ಜಿ ಸಲ್ಲಿಸಿದ್ದಾರೆ.

## ಎಸ್‌ಎಂಕೆ ನಿಧನ



ಕರ್ನಾಟಕ ರಾಜಕಾರಣದ ಮುತ್ಸದ್ದಿ ರಾಜಕಾರಣಿ, ಮಾಜಿ ವಿದೇಶಾಂಗ ಸಚಿವ, ಕರ್ನಾಟಕದ ಮಾಜಿ ಮುಖ್ಯಮಂತ್ರಿ ಎಸ್‌ಎಂ ಕೃಷ್ಣ ಬೆಂಗಳೂರಿನ ಸದಾಶಿವನಗರದ ನಿವಾಸದಲ್ಲಿ ಡಿಸೆಂಬರ್ 10ರಂದು ವಿಧಿವಶರಾದರು. ಇವರು ಕರ್ನಾಟಕದ ಸಿಎಂ ಆಗಿ ಬೆಂಗಳೂರಿನ ರೂಪವನ್ನು ಬದಲಾಯಿಸಿದರು. ಬೆಂಗಳೂರಿನಲ್ಲಿ ಐಟಿ–ಬಿಟಿ ಕ್ಷೇತ್ರಗಳು ತಲೆ ಎತ್ತುವಂತೆ ಮಾಡಿ ದೇಶ–ವಿದೇಶದಲ್ಲಿ ಬೆಂಗಳೂರು ಹೆಸರು ಪ್ರಸಿದ್ಧವಾಗುವಂತೆ ಮಾಡಿದ್ದರು.

## ವಿವಾದದ ಸುಳಿಗೆ ರೇವಣ್ಣ ಪರಿವಾರ



ಮಾಜಿ ಪ್ರಧಾನಿ ದೊಡ್ಡಗೌಡರ ಹಿರಿಯ ಮಗ ಎಚ್.ಡಿ.ರೇವಣ್ಣ ಕುಟುಂಬ ಭಾರೀ ಸಂಕಷ್ಟ ಎದುರಿಸಬೇಕಾಗಿತ್ತು. ಅತ್ಯಾಚಾರ ಕೇಸ್‌ನಲ್ಲಿ ಎಚ್.ಡಿ. ರೇವಣ್ಣ ಅವರ ಕಿರಿಯ ಮಗ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಬಂಧಿಸಲಾಗಿತ್ತು, ಇನ್ನು ಜೈಲಿನಲ್ಲಿದ್ದಾರೆ. ಎಚ್.ಡಿ. ರೇವಣ್ಣ ಕೂಡ ಸಂತ್ರಸ್ತೆ ಅಪಹರಣ ಕೇಸ್‌ನಲ್ಲಿ ಬಂಧನಕ್ಕೊಳಗಾಗಿ ಹತ್ತು ದಿನ ಜೈಲು ವಾಸ ಅನುಭವಿಸಿ ಹೊರಬಂದಿದ್ದಾರೆ. ಇದೇ ಸಂತ್ರಸ್ತೆ ಅಪಹರಣ ಕೇಸ್‌ನಲ್ಲಿ ಬಂಧನದ ಭೀತಿಯಿಂದ ಪಾರಾಗಿದ್ದಾರೆ ಭವಾನಿ ರೇವಣ್ಣ. ಹಿರಿಯ ಪುತ್ರ ವಿಧಾನಪರಿಷತ್ ಸದಸ್ಯ ಸೂರಜ್ ರೇವಣ್ಣ ಅಸ್ವಾಭಾವಿಕ ಲೈಂಗಿಕ ದೌರ್ಜನ್ಯ ಕೇಸ್‌ನಲ್ಲಿ ಬಂಧಿಸಲಾಗಿತ್ತು ಬಳಿಕ ಬಿಡುಗಡೆ ಮಾಡಲಾಯಿತು.

## ಸಿ.ಟಿ.ರವಿ ಅಸಂಬದ್ಧ ಹೇಳಿಕೆ



ಬೆಳಗಾವಿಯಲ್ಲಿ ನಡೆದ ಅಧಿವೇಶದ ವೇಳೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಬಗ್ಗೆ ಅಸಂಬದ್ಧವಾಗಿ ಹೇಳಿಕೆ ನೀಡಿದಕ್ಕಾಗಿ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ವಿರುದ್ಧ ಕಾಂಗ್ರೆಸ್ ಕೆಂಡಾಮಂಡಲವಾಗಿತ್ತು. ಚಿಕ್ಕಮಗಳೂರಿನಲ್ಲಿ ಸಿ.ಟಿ. ರವಿ ನಿವಾಸಕ್ಕೂ ಕಾಂಗ್ರೆಸ್ ಕಾರ್ಯಕರ್ತರು ಮುತ್ತಿಗೆ ಹಾಕಲು ಯತ್ನಿಸಿದ್ದರು. ಇದರ ನಡುವೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಸಿ.ಟಿ.ರವಿ ವಿರುದ್ಧ ಪೊಲೀಸ್ ಠಾಣೆಗೆ ದೂರು ನೀಡಿದ್ದು, ದೂರಿನ ಮೇರೆಗೆ ಪೊಲೀಸರು ಸಿ.ಟಿ.ರವಿ ಅವರನ್ನು ಬಂಧಿಸಿ ಬಳಿಕ ಬಿಡುಗಡೆ ಮಾಡಲಾಯಿತು.

## ನಾಗೇಂದ್ರ ತಲೆತಂಡ



ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಲೆಕ್ಕ ಪರಿಶೋಧಕ ಚಂದ್ರಶೇಖರ್ ಆತ್ಮಹತ್ಯೆ ಮಾಡಿಕೊಂಡಿದ್ದರು. ಬಳಿಕ ತನಿಖೆಗೆ ನಡೆಸಿದಾಗ ನಿಗಮದಲ್ಲಿ ಕೋಟ್ಯಂತರ ರೂ.ಗಳ ಹಗರಣದ ಘಾಟು ಮುಗಿಗೆ ಬಡಿಯಿತು. ಈ ಹಿನ್ನೆಲೆಯಲ್ಲಿ ಇಡಿ ರಂಗಪ್ರವೇಶ ಮಾಡಿ ತನಿಖೆ ಕೈಗೊಂಡು ಸಚಿವ ನಾಗೇಂದ್ರನನ್ನು ಬಂಧಿಸಲಾಗಿತ್ತು. ಬಂಧಲಾಗುತ್ತಿದ್ದಂತೆ ಸಚಿವ ಸ್ಥಾನ ಕಳೆದುಕೊಳ್ಳಬೇಕಾಯಿತು ಹಾಗೂ ಜೈಲು ಸೇರಬೇಕಾಯಿತು. ಜೈಲಿನಿಂದ ಬಿಡುಗಡೆಯಾದ ಬಳಿಕ ಮತ್ತೆ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕೂಗುಕೇಳಿಬರುತ್ತಿದೆ.


## ವಿವಾದಾತ್ಮಕ ಹೇಳಿಕೆಗಳ ಪ್ರತಿಧ್ವನಿ

ಈ ವರ್ಷದ ರಾಜ್ಯದ ರಾಜಕೀಯ ನಾಯಕರು ಸೇರಿದಂತೆ ಸ್ವಾಮೀಜಿಗಳು ಕೂಡ ವಿವಾದಾತ್ಮಕ ಹೇಳಿಕೆ ನೀಡುವ ಮೂಲಕ ವಿವಾದವನ್ನು ತಮ್ಮ ಮೈಮೇಲೆ ಎಳೆದುಕೊಂಡಿದ್ದರು. ಅಲ್ಲದೇ

### ಪಾಕ್ ಪರ ಘೋಷಣೆ

ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ ಘಟನೆ ರಾಷ್ಟ್ರ ಮಟ್ಟದಲ್ಲೂ ಸದ್ದು ಮಾಡಿದೆ. ರಾಜ್ಯ ಸಭೆ ಚುನಾವಣೆಯಲ್ಲಿ ಗೆದ್ದ ಖುಷಿಯ ನಡುವೆ ಕಾಂಗ್ರೆಸ್‌ನ ರಾಜ್ಯ ಸಭಾ ಸದಸ್ಯ ನಾಸೀರ್ ಹುಸೇನ್ ಬೆಂಬಲಿಗರು ಗೆಲುವಿನ ಸಂಭ್ರಮಾಚರಣೆ ವೇಳೆ ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ್ದರು. ಈ ಸುದ್ದಿ ಕುರಿತು ರಾಜ್ಯ ರಾಜಕಾರಣದಲ್ಲಿ ಸಂಚಲನ ಸೃಷ್ಟಿಸಿತ್ತು. ಬಳಿಕ ಪೊಲೀಸರು ಮೂವರನ್ನು ಬಂಧಿಸಿದ್ದರು.

### ಮುಸ್ಲಿಮರಿಗೆ ಮತದಾನದ ಹಕ್ಕು ಬೇಡ



ಮುಸ್ಲಿಮರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡಬೇಕು ಎಂದು ಒಕ್ಕಲಿಗ ಮಠದ ಚಂದ್ರ ಶೇಖರನಾಥ ಸ್ವಾಮೀಜಿ ವಿವಾದಾತ್ಮಕ ಹೇಳಿಕೆ ನೀಡಿದ್ದರು. ಈ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿತ್ತು. ಸೈಯದ್ ಅಬ್ಬಾಸ್ ಎಂಬುವವರು ನೀಡಿದ ದೂರಿನ ಮೇರೆಗೆ ಚಂದ್ರಶೇಖರನಾಥ ಸ್ವಾಮೀಜಿ ವಿರುದ್ಧ ಉಪ್ಪಾರಪೇಟೆ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಸ್ವಾಮೀಜಿ ಅವರು ಕಾಯಿಲೆಯಿಂದ ಬಳಲುತ್ತಿರುವ ಕಾರಣ ವಿಚಾರಣೆಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲ ಎಂದು ಉಪ್ಪಾರಪೇಟೆ ಪೊಲೀಸ್ ಉಪ ನಿರೀಕ್ಷಕರಿಗೆ ಪತ್ರ ಬರೆದಿದ್ದರು.

### ಸಚಿವೆ ವಿರುದ್ಧ ಅಶ್ಲೀಲ ಪದ

ಬೆಳಗಾವಿ ಅಧಿವೇಧನದ ವೇಳೆ ವಿಧಾನಪರಿಷತ್‌ನಲ್ಲಿ ಸಿಟಿ ರವಿ ಹಾಗೂ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಅಶ್ಲೀಲ ಪದ ಬಳಸಿದ್ದಾರೆಂದು ಆರೋಪ ಕೇಳಿಬಂದಿತ್ತು. ಈ ಸಂಬಂಧ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಸಭಾಪತಿ ಬಸವರಾಜ ಹೊರಟ್ಟಿಗೆ ದೂರು ಸಹ ನೀಡಿದ್ದರು.

### ಹೆಚ್‌ಡಿಕೆಗೆ ಕರಿಯ ಎಂದ ಜಮೀರ್



ಚನ್ನಪಟ್ಟಣ ಉಪಚುನಾವಣೆ ಅಖಾಡದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಪ್ರಚಾರ ನಡೆಸುತ್ತಿದ್ದ ವೇಳೆ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯನ್ನು ಕರಿಯ ಎಂದು ಕರೆಯುವ ಮೂಲಕ ವಿವಾದವನ್ನು ಮೈಮೇಲೆ ಹಾಕಿಕೊಂಡಿದ್ದರು. ಕೊನೆಗೆ ಸಚಿವ ಜಮೀರ್ ಕ್ಷಮೆಯಾಚಿಸಿದರು.

### ಬಸವಣ್ಣನವರ ಬಗ್ಗೆ ಹೇಳಿಕೆ:

ವಿಶ್ವಜ್ಯೋತಿ ಬಸವಣ್ಣ ಅವರ ನಿಗೂಢ ಸಾವಿನ ಕುರಿತು ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ನೀಡಿದ ಹೇಳಿಕೆ ದೊಡ್ಡ ಸದ್ದು ಮಾಡಿತ್ತು.



## ಕುದಿಯುತ್ತಿದ್ದಾರೆ, ಬೇಯುತ್ತಿದ್ದಾರೆ, ನರಳುತ್ತಿದ್ದಾರೆ

'ನಾನು ಸಿನಿಮಾಕ್ಕಾಗಿ ಮರ ಕಡಿಯುವಷ್ಟು ಮೂರ್ಖನಾ? ನಮ್ಮವರೇ ನಮಗೆ ಶತ್ರುಗಳಾ? ರಾಕಿಂಗ್ ಸ್ಟಾರ್ ಯಶ್ ಮುನಿಸು ಹೊರಬಿತ್ತಾ? ಯಶ್ ಮನಸ್ಸಿನಲ್ಲೇ ಒಂದು ಕಡೆ ಕುದಿಯುತ್ತಿದ್ದಾರೆ, ಮತ್ತೊಂದು ಕಡೆ ಬೇಯುತ್ತಿದ್ದಾರೆ, ಮಗದೊಂದು ಕಡೆ ನರಳುತ್ತಿದ್ದಾರೆ. ಕಾರಣ, ಟಾಕ್ಸಿಕ್ ಹಗರಣ.

ಏನೋ ಮಾಡಲು ಹೋಗಿ ಇನ್ನೇನೋ ಆಗಿಬಿಟ್ಟಿತಲ್ಲಾ! ಕನ್ನಡದ ಜನಕ್ಕೆ ಹಾಗೂ ಕನ್ನಡದ ನೆಲಕ್ಕೆ ಒಳ್ಳೆಯದಾಗಲಿ ಎಂದು ಮಾಡಿದ್ದು ಅಪರಾಧದ ರೂಪ ಯಾಕೆ ಪಡೆಯಿತು?'

ಹೀಗಂತ ಕನ್ನಡದ ನಟ, ಪ್ಯಾನ್ ಇಂಡಿಯಾ ಸ್ಟಾರ್ ಯಶ್ ಬೇಸರಗೊಂಡಿದ್ದಾರೆ ಎಂಬ ಮಾತು ವೈರಲ್ ಆಗುತ್ತಿದೆ. ಆದರೆ, ಈ ಮಾತನ್ನು ನಟ ಯಶ್ ಯಾವಾಗ ಯಾರಿಗೆ ಹೇಳಿದ್ದಾರೆ ಎಂಬ ಬಗ್ಗೆ ಎಲ್ಲೂ ದಾಖಲೆ ಇಲ್ಲ. ಟಾಕ್ಸಿಕ್ ಸಿನಿಮಾ ತಂಡವು ಚಿತ್ರದ ಶೂಟಿಂಗ್ ಸೆಟ್ ಹಾಕಲು ನೂರಾರು ಮರಗಳನ್ನು ಕಡಿದಿದೆ ಎಂಬ ಆರೋಪ ಎದುರಿಸಿದ್ದು ಗೊತ್ತೇ ಇದೆ. ಕೊನೆಗೆ, ಏನೂ ಆಗಿಲ್ಲ, ಯಾವ ಮರವನ್ನೂ ಕಡಿದಿಲ್ಲ ಎಂದು ಕೋರ್ಟ್ ಹೇಳಿ ಕೇಸ್ ಕ್ಲೋಸ್ ಆಗಿದೆ. ಆದರೆ, ಆರೋಪ ಬಂದಿದ್ದೇ ಯಶ್ ಅವರ ಬೇಸರಕ್ಕೆ ಕಾರಣವಾಗಿದೆ ಎನ್ನಲಾಗುತ್ತಿದೆ. ಆದರೆ, ಯಶ್ ಈ ತರಹದ ಯಾವುದೇ ಮಾತನ್ನು ಹೇಳಿದ್ದು ಎಲ್ಲೂ ದಾಖಲೆ ಸಮೇತ ಬಯಲಾಗಿಲ್ಲ. ಆದರೆ ಇದು ಸೋಷಿಯಲ್ ಮೀಡಿಯಾಗಳಲ್ಲಿ ಕಾಡ್ ರೂಪದಲ್ಲಿ, ಶಾರ್ಟ್ಸ್ ಮೂಲಕವೂ ಹರಿದಾಡುತ್ತಿದೆ. ಯಶ್ ತಮ್ಮ ಆಪ್ತರ ಬಳಿ ಹೀಗೇನಾದ್ರೂ ಹೇಳಿದ್ರಾ? ಅಥವಾ, ಮೀಡಿಯಾದಲ್ಲಿ 'ಆಫ್ ದಿ ರೆಕಾರ್ಡ್' ಏನಾದ್ರೂ ಈ ಮ್ಯಾಟರ್ ಇದ್ದು, ಬಳಿಕ ಅದು ಮೇಲೆದ್ದು ಬಂತಾ? ಈ ಬಗ್ಗೆ ಕನ್ಫರ್ಮೇಶನ್ ಇಲ್ಲ. ಆದರೆ, ಶೇರ್ ಆಗುತ್ತಿರುವ ಈ ಪೋಸ್ಟ್ ಪರ ಕಾಮೆಂಟ್‌ಗಳು ಹರಿದುಬರುತ್ತಿವೆ. ಈ ಸುದ್ದಿಗೆ ಹಲವರು ನಟ ಯಶ್ ಪರ ಬ್ಯಾಟಿಂಗ್ ಬೀಸುತ್ತಿದ್ದಾರೆ. 'ಹೌದು, ನಟ ಯಶ್ ಅವರು ಸೆಟ್ ಹಾಕಲು ಕನ್ನಡ ನೆಲವನ್ನೇ ಆಯ್ಕೆ ಮಾಡಿಕೊಂಡಿದ್ದರ ಹಿಂದೆ ಅವರು ಹಾಗೂ ನಿರ್ಮಾಪಕರು ಸೇರಿದಂತೆ ಇಡೀ ಚಿತ್ರತಂಡದ ಒಳ್ಳೆಯ ಉದ್ದೇಶವೇ ಆಗಿದೆ. ಕನ್ನಡ ನೆಲಕ್ಕೆ ಬಾಡಿಗೆ ಸಿಗುತ್ತದೆ, ಕನ್ನಡಿಗರಿಗೇ ಕೆಲಸ ಸಿಗುತ್ತದೆ, ಹಾಗೆ ಮುಂದೆ ಸಿನಿಮಾ ನೋಡಿದಾಗ ಕನ್ನಡದ ಸ್ಥಳವೇ ಪ್ರಸಿದ್ಧಿ ಪಡೆಯುತ್ತದೆ ಎಂಬ ಸದುದ್ದೇಶವೇ ಕೆಲಸ ಮಾಡಿತ್ತು. ಆದರೆ, ಮರ ಕಡಿದ ಆರೋಪ ಬಂದು, ಕೇಸ್ ದಾಖಲಾಗಿ, ಕೋರ್ಟ್‌ಗೆ ಅಲೆದಾಡುವ ಸಂದರ್ಭ ಬಂದಿದ್ದು, ಶೂಟಿಂಗ್ ಅಷ್ಟು ದಿನ ನಿಂತು ನಷ್ಟವಾಗಿದ್ದು ಎಲ್ಲವೂ ಚಿತ್ರತಂಡಕ್ಕೆ ತಲೆನೋವು ತಂದಿದ್ದು ಮಾತ್ರವಲ್ಲ, ಬೇಸರಕ್ಕೂ ಕಾರಣವಾಗಿದೆ ಎನ್ನಲಾಗಿದೆ. ಹಬ್ಬುತ್ತಿರುವ ಈ ಸುದ್ದಿ ನಿಜವೇ? ಈ ಬಗ್ಗೆ ಸಹಜವಾಗಿಯೇ ಚಿತ್ರತಂಡಕ್ಕೆ ಖಂಡಿತ ಬೇಸರ ಆಗಿರುತ್ತದೆ. ಆದರೆ, ಆ ಬೇಸರವನ್ನು, ಕೋಪ–ತಾಪವನ್ನು ಟಾಕ್ಸಿಕ್ ಟೀಮ್ ಹೊರಹಾಕಿದ್ದು ನಿಜವೇ? ಹೌದು ಎಂದಾದರೆ ಎಲ್ಲಿ? ಇವೆಲ್ಲವೂ ಇನ್ನಷ್ಟೇ ಕನ್ಫರ್ಮ್ ಆಗಬೇಕಿದೆ.



## ಕಿಲ್ಲಿಂಗ್ ಫೋಟೋ ಶೂಟ್!

ಸೇನ್ ಸುಸ್ಮಿತಾ ಸೇನ್ ಇತ್ತೀಚೆಗೆ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡ ಫೋಟೋಗಳು ಸಖತ್ ವೈರಲ್ ಆಗಿವೆ. ಗ್ಲಾಮರಸ್ ಆಗಿ ಕಾಣಿಸಿಕೊಂಡಿರೋ ಸುಸ್ಮಿತಾ ಅವರ ಸ್ಟೈಲ್‌ಗೆ ಎಲ್ಲರೂ ಫಿದಾ ಆಗಿದ್ದಾರೆ. ಫೋಟೋಗಳನ್ನ ನೋಡೋಣ ಬನ್ನಿ..

ಮಿಸ್ ಯೂನಿವರ್ಸ್ 1994. ಬಾಲಿವುಡ್ ಬೆಡಗಿ ಸುಸ್ಮಿತಾ ಸೇನ್ ಹೊಸದಾಗಿ ಫೋಟೋ ಶೂಟ್ ಮಾಡಿಸಿಕೊಂಡಿದ್ದಾರೆ. ಬಿಳಿ ಶರ್ಟ್ ಮತ್ತು ಪ್ಯಾಂಟ್‌ನಲ್ಲಿ ಸುಸ್ಮಿತಾ ಸೇನ್, ನೀಲಿ ಬ್ಲೇಜರ್‌ನೊಂದಿಗೆ ಲುಕ್ ಪೂರ್ಣಗೊಳಿಸಿದ್ದಾರೆ. ಬಾಸ್ ಲೇಡಿ ಲುಕ್‌ನಲ್ಲಿ ಸುಸ್ಮಿತಾ ಸೇನ್, ಆಕೆಯ ಹೊಸ ಫೋಟೋ ಶೂಟ್ ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಆಕೆಯ ಕ್ಲಾಸಿಕ್ ಸೌಂದರ್ಯಕ್ಕೆ, ಅವಳ ವರ್ಚಸ್ವಿ ವ್ಯಕ್ತಿತ್ವವನ್ನು ಒತ್ತಿಹೇಳುವಂತಿತ್ತು.

"ವೈಯಕ್ತಿಕ ಶಕ್ತಿಗೆ ಯಾವುದೇ ಮನ್ನಣೆ ಅಗತ್ಯವಿಲ್ಲ, ಅದು ನಿಮ್ಮ ಡಿಎನ್‌ಎಯಂತೆಯೇ ಅಧಿಕೃತವಾಗಿದೆ" ಎಂದು ಸುಸ್ಮಿತಾ ಬರೆದಿದ್ದಾರೆ. ಮಾಜಿ ವಿಶ್ವ ಸುಂದರಿ ಮತ್ತು ಬಿ–ಟೌನ್ ಸುಂದರಿ ಸುಶ್ಮಿತಾ ಸೇನ್ ನವೆಂಬರ್ 19ರಂದು ತಮ್ಮ ಹುಟ್ಟುಹಬ್ಬವನ್ನು ಆಚರಿಸಿಕೊಂಡಿದ್ದರು.

ಇತ್ತೀಚಗೆ ತಮ್ಮ ಹೊಸ ಹೇರ್‌ಸ್ಟೈಲ್ ಫೋಟೋವನ್ನು ಹಾಕಿಕೊಂಡಿದ್ದರು. "ಸುಸ್ಮಿತಾಗೆ ಯಾರು ಸರಿಸಾಟಿ ಇಲ್ಲ" , "ಸುಸ್ಮಿತಾ ರಾಕ್‌ಸ್ಟಾರ್" ಎಂದು ಅಭಿಮಾನಿಗಳು ಕಮೆಂಟ್ ಮಾಡಿದ್ದಾರೆ.

ಹೊಸ ವರ್ಷ, ಹೊಸ ನೋಟ 2025ಕ್ಕೆ ಕಾಲಿಡುತ್ತಿರುವ ಸಂದರ್ಭದಲ್ಲಿ ಸುಸ್ಮಿತಾ ಹೊಸ ಫೋಟೋಶೂಟ್ ಮಾಡಿಸಿದ್ದಾರೆ. ಸೇನ್ ಕೊನೆಯದಾಗಿ 'ಆರ್ಯ 3' ವೆಬ್ ಸರಣಿಯಲ್ಲಿ ಕಾಣಿಸಿಕೊಂಡಿದ್ದರು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-36 Email-mussanje2010@gmail.com, Phone: 9448074878